

# ಬೆಳಗಾವಿ ವರದಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

Read,Share and Follow - www.belagavivaradi.com

Vol-04 | Issue: 262 | ₹ ಬೆಲೆ: 4 | Tuesday, 12, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಮಹಿಳೆ ಮೇಲೆ ಅಮಾನವೀಯ ಕೃತ್ಯ 7 ಆರೋಪಿಗಳು ಬಂಧನ



ಬೆಳಗಾವಿ: ಮಹಿಳೆಯನ್ನು ಬೆತ್ತಲೆ ಮಾಡಿ ಕಂಬಕ್ಕೆ ಕಟ್ಟಿ ಥಳಿಸಿದ ಅಮಾನವೀಯ ಘಟನೆ ಬೆಳಗಾವಿ ತಾಲ್ಲೂಕಿನ ವಂಟಮೂರಿ ಗ್ರಾಮದಲ್ಲಿ ನಡೆದಿದೆ. ಕಿರಾತಕರು ಪ್ರೀತಿಸಿದ ಜೋಡಿ ಮನೆ ಬಿಟ್ಟು ಹೋಗಿದ್ದರಿಂದ ಯುವಕನ ತಾಯಿಗೆ ಶಿಕ್ಷೆ ನೀಡಿದ್ದಾರೆ.

ಕಮಲವ್ವ ಗಡ್ಕರಿ(42) ಎಂಬ ಮಹಿಳೆಯ ಮೇಲೆ ಯುವತಿಯ ಮನೆಯವರು ಹಲ್ಲೆ ಮಾಡಿದ್ದಾರೆ. ರಾತ್ರಿ ಇಡೀ ಕರೆಂಟ್ ಕಂಬಕ್ಕೆ ಕಟ್ಟಿ ಬೆತ್ತಲೆ ಮಾಡಿದ ದುಷ್ಕರ್ಮಿಗಳು ಆಕೆಯ ಮೇಲೆ ಹಲ್ಲೆ ಮಾಡಿದ್ದಾರೆ.

ದುಂಡಪ್ಪ ಮತ್ತು ಪ್ರೀಯಾಂಕ ಇಬ್ಬರು ಪರಸ್ಪರ ಪ್ರೀತಿಸುತ್ತಿದ್ದರು. ನಿನ್ನೆ ರಾತ್ರಿ ಈ ಜೋಡಿ ಮನೆ ಬಿಟ್ಟು ಓಡಿ ಹೋಗಿದ್ದಾರೆ. ಇಂದು ಪ್ರೀಯಾಂಕ ನಿಶ್ಚಿತಾರ್ಥವಿತ್ತು, ಕುಟುಂಬಸ್ಥರು ಆಕೆಯ ಮದುವೆ ಕೂಡ ನಿಗದಿ ಮಾಡಿದ್ದರು. ಆದರೆ ದುಂಡಪ್ಪ ಜೊತೆ ಓಡಿ ಹೋಗಿದ್ದರಿಂದ ರೊಚ್ಚಿಗೆದ್ದ ಯುವತಿ ಕುಟುಂಬಸ್ಥರು ಯುವಕನ ಮನೆ ಮೇಲೆ ದಾಳಿ ಮಾಡಿ ಹಲ್ಲೆ ಮಾಡಿದ್ದಾರೆ.

ಪ್ರಕರಣ ಸಂಬಂಧ 7 ಜನ ಆರೋಪಿಗಳ ಬಂಧಿಸಿದ್ದಾರೆ. ಓಡಿ ಹೋಗಿರುವ ಯುವಕ ಮತ್ತು ಯುವತಿಗಾಗಿ ಪೊಲೀಸರು ಹುಡುಕಾಡುತ್ತಿದ್ದಾರೆ. ಗ್ರಾಮದಲ್ಲಿ 2 ಕೆಎಸ್‌ಆರ್ಪಿ ಪೊಲೀಸ್ ಬಂದೋಬಸ್ತ್ ನಿಯೋಜನೆ ಮಾಡಲಾಗಿದೆ. ಇನ್ನು ಘಟನೆಯ ಬೆನ್ನಲ್ಲೇ ಗ್ರಾಮಸ್ಥರು ಸ್ವಯಂ ಪ್ರೇರಿತವಾಗಿ ಮನೆಗೆ ಬೀಗ ಹಾಕಿ ಮನೆ ಖಾಲಿ ಮಾಡಿಕೊಂಡು ಹೋಗಿದ್ದಾರೆ. ಮತ್ತೊಂದೆಡೆ ಗ್ರಾಮದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸ್ ಬಂದೋಬಸ್ತ್ ಮಾಡಿದ್ದಾರೆ.

## ಜೆಡಿಎಸ್ ನೂತನ ರಾಷ್ಟ್ರೀಯ ಅಧ್ಯಕ್ಷರಾಗಿ ಸಿ.ಕೆ. ನಾನು ಆಯ್ಕೆ



ಬೆಂಗಳೂರು: ಕೆ.ಜಿ.ಹಳ್ಳಿಯ ಖಾಸಗಿ ಹೋಟೆಲ್ನಲ್ಲಿ ಸಿ.ಎಂ. ಇಬ್ರಾಹಿಂ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಸಿಕೆ ನಾನು ಅವರನ್ನು ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಈ ಬಗ್ಗೆ ಸಿ.ಎಂ ಇಬ್ರಾಹಿಂ ಅಧಿಕೃತವಾಗಿ ಮಾಹಿತಿ ನೀಡಿದ್ದಾರೆ. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಇಬ್ರಾಹಿಂ, ಜೆಡಿಎಸ್ ನೂತನ ರಾಷ್ಟ್ರೀಯ ಅಧ್ಯಕ್ಷರನ್ನಾಗಿ ಸಿ.ಕೆ.ನಾನು ಅವರನ್ನು ನೇಮಕ ಮಾಡಲಾಗಿದೆ. ಇದು ರಾಷ್ಟ್ರೀಯ ಕೌನ್ಸಿಲ್ ನಿರ್ಣಯ. ನಿತೀಶ್ ಕುಮಾರ್, ಲಾಲು ಪ್ರಸಾದ್ ಭೇಟಿಗೆ ಹೋಗುತ್ತಿದ್ದೇವೆ. ಜನವರಿಯಲ್ಲಿ ಹುಬ್ಬಳ್ಳಿಯಲ್ಲಿ ನಡೆಯಲಿರುವ ಬೃಹತ್ ಸಮಾವೇಶಕ್ಕೆ ಅಖಿಲೇಶ್, ನಿತೀಶ್, ರಾಹುಲ್ ಗಾಂಧಿಗೆ ಆಹ್ವಾನ ನೀಡಲಾಗುವುದು ಎಂದರು.

ಪಕ್ಷದಲ್ಲಿನ ಇತರರ ಅಭಿಪ್ರಾಯಕ್ಕೆ ಮನ್ನಣೆ ಕೊಡದೇ ಬಿಜೆಪಿಯೊಂದಿಗೆ ಹೆಜ್ಜೆ ಹಾಕಿದರೆ ಇದನ್ನು ಪ್ರಶ್ನಿಸುವ ಅಧಿಕಾರ ನಾನೂ ಸೇರಿದಂತೆ ಇತರರಿಗೂ ಇದೆ. ಗಾಂಧೀಜಿಯವರ ತತ್ವಗಳನ್ನು ಬಲಿಕೊಟ್ಟು ಬರೀ ಚುನಾವಣೆಯ ಗೆಲುವಿಗಾಗಿ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡ ಎಚ್.ಡಿ. ದೇವೇಗೌಡರ ವರ್ತನೆಯನ್ನು ಇಂದಿನ ಸಭೆಯಲ್ಲಿ ನಾವು ಖಂಡಿಸುತ್ತೇವೆ ಎಂದು ಇಬ್ರಾಹಿಂ ತಿಳಿಸಿದ್ದಾರೆ.

ಡಿಸೆಂಬರ್ 9ರಂದು ಜೆಡಿಎಸ್ ಕಚೇರಿ ಜೆ.ಪಿ. ಭವನದಲ್ಲಿ ನಡೆದ ರಾಷ್ಟ್ರೀಯ ಕಾರ್ಯಕಾರಿಣಿ ಸಭೆಯಲ್ಲಿ ಸಿ.ಎಂ. ಇಬ್ರಾಹಿಂ ಹಾಗೂ ಪಕ್ಷದ ಜೆಡಿಎಸ್ ರಾಷ್ಟ್ರೀಯ ಉಪಾಧ್ಯಕ್ಷ ಸಿ.ಕೆ. ನಾನು ಅವರನ್ನು ಕೂಡ ಉಚ್ಚಾಟನೆ ಮಾಡಲಾಗಿತ್ತು. ಆದರೆ ಇದೀಗ ಉಚ್ಚಾಟಿತ ನಾಯಕರೇ ಪರ್ಯಾಯವಾಗಿ ಪದಾಧಿಕಾರಗಳ ನೇಮಕ ಪ್ರಕ್ರಿಯೆ ನಡೆಸಿದ್ದಾರೆ. ಜೆಡಿಎಸ್ ಸಹ ಈಗ ಇಬ್ಭಾಗವಾಗಿದೆ. ಮುಂದೆ ಪಕ್ಷದ ಚಿಹ್ನೆ ಹಾಗೂ ಪಕ್ಷದ ಅಸ್ತಿತ್ವದಕ್ಕಾಗಿ ಕಾನೂನು ಹೋರಾಟುಗಳು ನಡೆಯವ ಲಕ್ಷಣಗಳು ಕಾಣುತ್ತಿವೆ.

## ಎಚ್‌ಡಿಕೆಗೆ ತಿರುಗೇಟು ನೀಡಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: 50–60 ಮಂದಿ ಶಾಸಕರ ಜೊತೆ ಪ್ರಭಾವಿ ಸಚಿವ ಬಿಜೆಪಿ ಸೇರ್ಪಡೆಯಾಗುತ್ತಾರೆ ಎಂದು ಮಾಜಿ ಮುಖ್ಯಮಂತ್ರಿ ಹೆಚ್ ಡಿ ಕುಮಾರಸ್ವಾಮಿ ಹೇಳಿಕೆಗೆ, ನಮ್ಮಲ್ಲಿ ಯಾರು ಏಕನಾಥ್ ಶಿಂಧೆ, ಪವಾರ್ ಇಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು, ಕುಮಾರಸ್ವಾಮಿ ಅವರಿಗೆ ತಿರುಗೇಟು ನೀಡಿದ್ದಾರೆ. ಈ ಕುರಿತು ಸುವರ್ಣಸೌಧದಲ್ಲಿ ಮಾಧ್ಯಮಗಳ ಜೊತೆಗೆ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ನಾನೇನ್ ಡೆಲ್ಲಿಗೆ ಹೋಗಿಲ್ವಲ್ಲ,ಡೆಲ್ಲಿಗೆ ಹೋದವ್ರನ್ನ ಕೇಳಬೇಕು. ಕುಮಾರಸ್ವಾಮಿ ಆ ಪ್ರಭಾವಿ ಸಚಿವ ಯಾರು ಅಂತ ಹೇಳಿದ್ರೆ ಮುಗಿದು ಹೋಗುತ್ತದೆ ಎಂದು ಹೇಳಿದರು. ಕಿತ್ತೂರು ಗಲಾಟೆ ವಿಚಾರ ಗೊತ್ತಿದೆ. ಮುಷ್ಕರ ಮಾಡುವ ಅವಶ್ಯಕತೆ ಇರಲಿಲ್ಲ, ಅವರ ಎಲ್ಲ ಬೇಡಿಕೆ ಈಡೇರಿಸಿದ್ದೇವೆ. ಎಲ್ಲ ಸರ್ವೇ ಮಾಡಿಸಿದ್ದೇವೆ, ಪ್ರತಿಭಟನೆ ವೇಳೆ ಮಕ್ಕಳ ನುಗ್ಗಾಟ ಆಗಬಾರದಿತ್ತು. ದೊಡ್ಡವರು,ಸಣ್ಣವರು ಪ್ರತಿಭಟನೆ ಮಾಡುವವರ ಜೊತೆ ಬೇರೆ ರೀತಿ ವರ್ತನೆ ಮಾಡಬೇಕು ಎಂದು ತಿಳಿಸಿದರು.

# ವಿಧಾನಸಭೆಯಲ್ಲಿ ಕೋಲಾಹಲ

## ಸ್ಪೀಕರ್ ಸ್ಥಾನದ ಕುರಿತು ಸಚಿವ ಜಮೀರ್ ಹೇಳಿಕೆ ವಿಚಾರ



ಬೆಳಗಾವಿ: ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಸ್ಪೀಕರ್ ಸ್ಥಾನದ ಕುರಿತು ಹೇಳಿರುವ ವಿವಾದಾತ್ಮಕ ಹೇಳಿಕೆ ವಿಧಾನಸಭೆಯಲ್ಲಿ ಇಂದು ಕೋಲಾಹಲಕ್ಕೆ ಕಾರಣವಾಯಿತು.

ಸದನ ಇಂದು ಬೆಳಗ್ಗೆ ಸಮಾವೇಶಗೊಂಡಾಗ ಸ್ಪೀಕರ್ ಯು ಟಿ ಖಾದರ್ ಅವರು ಪ್ರಶ್ನೋತ್ತರ ಆರಂಭಿಸಿದರು. ಆಗ ಸದಸ್ಯರು ಕೇಳಿದ ಪ್ರಶ್ನೆಗೆ ಉತ್ತರಿಸಲು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಮುಂದಾದಾಗ, ಬಿಜೆಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದರು.

ಜಮೀರ್ ಅಹಮ್ಮದ್ ಖಾನ್ ಸ್ಪೀಕರ್ ಸ್ಥಾನಕ್ಕೆ ಅವಮಾನ ಮಾಡಿದ್ದಾರೆ. ಅವರು ರಾಜ್ಯದ ಜನರ ಭಾವನೆ ಕೆದಕಿದ್ದಾರೆ. ಅವರಿಗೆ ಮಾತನಾಡಲು ಅವಕಾಶ ಕೊಡಲ್ಲ. ಸ್ಪೀಕರ್ ಸ್ಥಾನಕ್ಕೆ ಅವಮಾನ ಮಾಡಿದ್ದಾರೆ. ಅವರನ್ನು ವಜಾ ಮಾಡಬೇಕು ಎಂದು ಬಿಜೆಪಿ ಸದಸ್ಯರು ಆಗ್ರಹಿಸಿದರು.

ಸಂವಿಧಾನ ವಿರೋಧಿ ಹೇಳಿಕೆ ನೀಡಿದ್ದಾರೆ. ಅವರನ್ನು ವಜಾಗೊಳಿಸಬೇಕೆಂದು ಒತ್ತಾಯಿಸಿದರು. ಈ ವೇಳೆ, ಆಡಳಿತ ಹಾಗೂ ಪ್ರತಿಪಕ್ಷದ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು.

ಪ್ರತಿಪಕ್ಷದ ನಾಯಕ ಆರ್ ಅಶೋಕ್ ಮಾತನಾಡಿ, ನಾವೇನು ಗುಲಾಮರಾ? ಎಂದು ವಾಗ್ದಾಳಿ ನಡೆಸಿದರು. ಅಶೋಕ್ ಮಾತಿಗೆ ಧ್ವನಿಗೂಡಿಸಿದ ಬಿಜೆಪಿ ಸದಸ್ಯರು ಹಾಗೂ ಜೆಡಿಎಸ್ ಸದಸ್ಯರು ವಾಗ್ದಾಳಿ ನಡೆಸಿದರು. ಸ್ಪೀಕರ್ ಸ್ಥಾನಕ್ಕೆ ಜಮೀರ್ ಅಗೌರವ ತಂದಿದ್ದಾರೆ ಎಂದು ಡಾ. ಸಿ. ಎನ್. ಅಶ್ವತ್ಥ್ ನಾರಾಯಣ ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ, ಬಿಜೆಪಿ ಹಾಗೂ ಕಾಂಗ್ರೆಸ್ ಸದಸ್ಯರ ನಡುವೆ ವಾಗ್ವಾದ ಉಂಟಾಯಿತು. ಬಿಜೆಪಿ ಸದಸ್ಯರ ನಡೆಗೆ ಸಚಿವ ಕೃಷ್ಣ ಬೈರೇಗೌಡ ಆಕ್ಷೇಪ ವ್ಯಕ್ತಪಡಿಸಿ, ನೋಟಿಸ್ ಕೊಟ್ಟು ಮಾತನಾಡಲಿ, ಪ್ರಶ್ನೋತ್ತರ ಅವಧಿಯಲ್ಲಿ ಈ ರೀತಿ ಮಾಡುವುದು ಸರಿಯಲ್ಲ ಎಂದು ಆಕ್ಷೇಪಿಸಿದರು.

## ಮೆಡಿಕಲ್ ಕಾಲೇಜುಗಳಿಗೆ ಏಕರೂಪ ಸಿ ಅಂಡ್ ಆರ್ ರೂಲ್: ಸಚಿವ ಡಾ ಶರಣಪ್ರಕಾಶ್ ಪಾಟೀಲ್



ಬೆಳಗಾವಿ: ರಾಜ್ಯದ ಎಲ್ಲ ಸ್ವಾಯತ್ತ ಸರ್ಕಾರಿ ವೈದ್ಯಕೀಯ ವಿಜ್ಞಾನ ಕಾಲೇಜುಗಳಲ್ಲಿ ಏಕರೂಪ ಸಿ ಅಂಡ್ ಆರ್ ರೂಲ್ ತರುವ ಪ್ರಕ್ರಿಯೆ ಆರಂಭಿಸಿದ್ದು, ಗ್ರೂಪ್ ಎಗೆ ಅನ್ವಯವಾಗುವಂತೆ ಏಕರೂಪ ಸಿ ಅಂಡ್ ಆರ್ ರೂಲ್ ಆರಂಭಿಸಲಾಗಿದೆ. ಗ್ರೂಪ್ ಬಿ, ಸಿ ಮತ್ತು ಡಿಗೆ ಸಂಬಂಧಿಸಿದಂತೆ ಕಾನೂನು ಮತ್ತು ಆರ್ಥಿಕ ಇಲಾಖೆ ಒಪ್ಪಿಗೆ ನಂತರ ಜಾರಿಗೊಳಿಸಲಾಗುತ್ತದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ ಶರಣಪ್ರಕಾಶ್ ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಮರಿತಿಬ್ಬೇಗೌಡ ಹಾಗೂ ಬಿಜೆಪಿ ಸದಸ್ಯ ಎಸ್.ವಿ ಸಂಕನೂರು ಪ್ರಶ್ನೆಗೆ ಉತ್ತರಿಸಿದ ಸಚಿವರು, ಸ್ವಾಯತ್ತ ಸರ್ಕಾರಿ ವೈದ್ಯಕೀಯ ವಿಜ್ಞಾನ ಕಾಲೇಜುಗಳಲ್ಲಿ ಸಿ ಅಂಡ್ ಆರ್ ಜಾರಿ ಮಾಡುವ ಬಗ್ಗೆ ನಾವು ಸಭೆ ಮಾಡಿದ್ದೇವೆ. ಬೋಧಕ, ಬೋಧಕೇತರ ಸಿಬ್ಬಂದಿ ನೇಮಕಾತಿ, ಜೇಷ್ಠತೆ, ಕಾಲಮಿತಿ ಪದೋನ್ನತಿ ಹಾಗೂ ಬಡ್ತಿ ಸಂಬಂಧ ಎನ್.ಎಂ.ಸಿ ನಿಯಮಗಳಿಗೆ ಪೂರಕವಾಗಿ ವೃಂದ ಮತ್ತು ನೇಮಕಾತಿ ನಿಯಮ ಸಂಬಂಧ ಕಾಮನ್ ಸಿ ಅಂಡ್ ಆರ್ ರೂಲ್ ರೂಪಿಸಲಾಗುತ್ತಿದೆ. ಈಗಾಗಲೇ ಗ್ರೂಪ್ ಎಗೆ ಸಂಬಂಧಿಸಿದಂತೆ ಪ್ರಕ್ರಿಯೆ ಮುಕ್ತಾಯ ಆಗಿದೆ. ಬಿ,ಸಿ,ಡಿ ಗೆ ಸಮಿತಿ ರಚಿಲಾಗಿದೆ ಎಂದು ಹೇಳಿದರು.

ಎಲ್ಲ ಸಂಸ್ಥೆಗಳಿಗೆ ಕಾಮನ್ ಸಭೆ ನಡೆಸಿ ಕಾಮನ್ ಸಿ ಅಂಡ್ ಆರ್ ರೂಲ್ ಮಾಡಲು ಮುಂದಾಗಿದ್ದೇವೆ. ಕಾನೂನು ಇಲಾಖೆ ಒಪ್ಪಿಗೆ ಪಡೆದು ಆರ್ಥಿಕ ಇಲಾಖೆಗೆ ಕಳಿಸಿದ್ದೇವೆ. ನಂತರ ಗ್ರೂಪ್ ಎ ಗೆ ಕಾಮನ್ ಬೈಲಾ ಅಳವಡಿಸಿಕೊಳ್ಳಲಿದ್ದೇವೆ. ಇನ್ನೆರಡು ತಿಂಗಳಿನಲ್ಲಿ ಗ್ರೂಪ್ ಎ ಕಾರ್ಯ ಆಗಲಿದೆ. ಬಿ.ಸಿ ಮತ್ತು ಡಿ ಕುರಿತು ರಚಿಸಲಾಗಿರುವ ಸಮಿತಿಯಿಂದ ವರದಿ ಪಡೆದು ಕೆಲವೊಂದು ಆಕ್ಷೇಪಣೆ ಕರೆಯಲಾಗಿದೆ. ಅದಕ್ಕೂ ಆರ್ಥಿಕ ಮತ್ತು ಕಾನೂನು ಇಲಾಖೆ ಸಮ್ಮತಿ ಪ್ರಕ್ರಿಯೆಯಲ್ಲಿವೆ. ಸಮ್ಮತಿ ನಂತರ ಅದರ ಸಿ ಅಂಡ್ ಆರ್ ರೂಲ್ ಕಾಮನ್ ಗೊಳಿಸಲಾಗುತ್ತದೆ ಎಂದರು. ಹೊಸ ಸಿ ಅಂಡರ್ ಆರ್ ರೂಲ್ನಲ್ಲಿ ರೊಟೇಷನ್ ಅಳವಡಿಸಿಕೊಳ್ಳಲಾಗಿದೆ. ಇಲಾಖಾ ವ್ಯಾಪ್ತಿಯಲ್ಲಿ ಬರುವ ಎಲ್ಲ ವೈದ್ಯಕೀಯ ಆಸ್ಪತ್ರೆಗಳಿಗೂ ಹೊಸದಾಗಿ ಕಾಮನ್ ಸಿ ಅಂಡ್ ಆರ್ ರೂಲ್ ಅನ್ವಯ ಮಾಡಲಾಗುತ್ತದೆ ಎಂದರು.

## 5 ವಿಧೇಯಕಗಳ ಮಂಡನೆ

**ಸುವರ್ಣಸೌಧ: ಬೆಳಗಾವಿ:** ಸೋಮವಾರದ ವಿಧಾನ ಸಭಾ ಕಲಾಪದಲ್ಲಿ 5 ವಿಧೇಯಕಗಳನ್ನು ಮಂಡಿಸಲಾಗಿದೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ 2023ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಕೆಲವು ಇತರೆ ಕಾನೂನು ತಿದ್ದುಪಡಿ ವಿಧೇಯಕ, ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್ 2023ರ ನ್ಯಾಯವಾದಿಗಳ ವಿರುದ್ಧ ಹಿಂಸಾಚರ ವಿರೋಧಿ ತಿದ್ದುಪಡಿ ವಿಧೇಯಕ, 2023ರ ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ತಿದ್ದುಪಡಿ ವಿಧೇಯಕ, ಕಂದಾಯ ಸಚಿವ ಕೃಷ್ಣಭೈರೇಗೌಡ 2023ರ ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ವಿಧೇಯಕ, ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಸುರೇಶ್ ಬಿ.ಎಸ್. 2023ರ ಹಂಪಿ ವಿಶ್ವ ಪರಂಪರೆ ಪ್ರದೇಶ ನಿರ್ವಹಣಾ ಪ್ರಾಧಿಕಾರ ತಿದ್ದುಪಡಿ ವಿಧೇಯಕವನ್ನು ಸದನದಲ್ಲಿ ಮಂಡಿಸಿದರು. ಈ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ.

ಇದೇ ವೇಳೆ ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವರಾದ ಸಿದ್ಧರಾಮಯ್ಯನವರು 2023–24ನೇ ಸಾಲಿನ ಪೂರಕ ಅಂದಾಜುಗಳು–ಮೊದಲನೇ ಕಂತಿನ ಬೇಡಿಕೆಗಳ ಪ್ರಸ್ತಾವನೆಗಳನ್ನು ಸದನದಲ್ಲಿ ಮಂಡಿಸಿದರು.

## ಹಿಮೋಫಿಲಿಯಾ ಪತ್ತೆಗೆ ಎಲ್ಲಾ ಜಿಲ್ಲಾ ಆಸ್ಪತೆಗಳಿಗೆ ಉಪಕರಣ: ಸಚಿವ ದಿನೇಶ್ ಗುಂಡೂರಾವ್



**ಸುವರ್ಣಸೌಧ: ಬೆಳಗಾವಿ:** ರಾಜ್ಯದಲ್ಲಿ ಹಿಮೋಫಿಲಿಯಾ ರೋಗವನ್ನು ಶೀಘ್ರದಲ್ಲಿ ಪತ್ತೆಹಚ್ಚಿ ಸೂಕ್ತ ಚಿಕಿತ್ಸೆ ನೀಡಲು ಅನುಕೂಲವಾಗುವಂತೆ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಹಿಮೋಫಿಲಿಯಾ ಪತ್ತೆ ಹಚ್ಚುವ ಯಂತ್ರೋಪಕರಣಗಳನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನ ಪರಿಷತ್ನಲ್ಲಿ ತಿಳಿಸಿದರು.

ಸದಸ್ಯ ಎಸ್.ರುದ್ರೇಗೌಡ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ರಾಜ್ಯ ರಕ್ತಕೋಶ ಕಾರ್ಯಕ್ರಮದಡಿಯಲ್ಲಿ ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆಯನ್ನು ಮತ್ತು ಆರೈಕೆಯನ್ನು ಮಾಡಲಾಗುತ್ತಿದೆ. ಹಿಮೋಫಿಲಿಯಾ ರೋಗಿಗಳ ಚಿಕಿತ್ಸೆ ಮತ್ತು ಆರೈಕೆಗಾಗಿ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಮತ್ತು ಕೆಲವು ವೈದ್ಯಕೀಯ ಆಸ್ಪತ್ರೆಗಳಲ್ಲಿ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ 6 ರಿಂದ 8 ಹಾಸಿಗೆಗಳ ದಿನದ ಆರೈಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಈ ಆರೈಕೆ ಕೇಂದ್ರಗಳಲ್ಲಿ ಇಬ್ಬರು ಶುಶ್ರೂಷಕಿಯರಿಗೆ ರಕ್ತಸಂಬಂಧಿತ ಖಾಯಿಲೆಗಳ ರೋಗಿಗಳ ಚಿಕಿತ್ಸೆ ಮತ್ತು ಆರೈಕೆಯ ಆರಂಭಿಕ ತರಬೇತಿಯನ್ನು ನೀಡಲಾಗಿದೆ. ಈ ಕೇಂದ್ರಗಳಲ್ಲಿ ಉಚಿತ ಆಂಟಿ ಹಿಮೋಫಿಲಿಯಾ, ಉಚಿತ ರಕ್ತ ನೀಡುವುದು, ಉಚಿತ ಸಮಾಲೋಚನೆ, ಉಚಿತ ಫೀಜಿಯೊಥೆರಪಿ, Intra Cranial Bleeding ಹೆಚ್ಚಿನ ಚಿಕಿತ್ಸೆ, ಉಚಿತ Genetic Counseling , ಉಚಿತ ರೋಗಪತ್ತೆ (Screening) ಸೇವೆಗಳನ್ನು ಒದಗಿಸುತ್ತಿದ್ದು, ಒಬ್ಬ ಹಿಮೋಫಿಲಿಯಾ ರೋಗಿಗೆ ಪ್ರತಿ ವರ್ಷ ಅಂದಾಜು ರೂ. 3 ರಿಂದ 4 ಲಕ್ಷ ವೆಚ್ಚವಾಗಲಿದೆ ಎಂದರು.

ಹಿಮೋಫಿಲಿಯಾ ರೋಗಕ್ಕೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳ ಬಗ್ಗೆ ಪ್ರತಿ ವರ್ಷ ಜಿಲ್ಲಾವಾರು ಕಾರ್ಯಾಗಾರಗಳನ್ನು ಹಿಮೋಫಿಲಿಯಾ ಸೊಸೈಟಿ ಸಹಭಾಗಿತ್ವದೊಂದಿಗೆ ಆಯೋಜಿಸಿ ಮಾಹಿತಿಯನ್ನು ನೀಡಲಾಗುತ್ತಿದೆ. ಎಲ್ಲಾ ಹಿಮೋಫಿಲಿಯಾ ರೋಗಿಗಳಿಗೆ IEC ಚಟುವಟಿಕೆ ಮತ್ತು ತರಬೇತಿ (Rehabilitation Workshops) ಮುಖಾಂತರ ಹಿಮೋಫಿಲಿಯಾ ಆರೈಕೆ ಮತ್ತು ಚಿಕಿತ್ಸೆ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ. ಪ್ರತಿ ವರ್ಷ 17ನೇ ಏಪ್ರಿಲ್ ರಂದು ವಿಶ್ವ ಹಿಮೋಫಿಲಿಯಾ ದಿನಾಚರಣೆಯನ್ನು ಎಲ್ಲಾ ಜಿಲ್ಲೆಗಳಲ್ಲಿ ಆಚರಿಸಲಾಗುತ್ತಿದ್ದು, ರಾಜ್ಯದಲ್ಲಿ ಈವರೆಗೆ 2706 ಹಿಮೋಫಿಲಿಯಾ ರೋಗಿಗಳನ್ನು ಪತ್ತೆ ಹಚ್ಚಲಾಗಿದೆ. ಇವರಿಗೆ ಆಂಟಿ ಹಿಮೋಫಿಲಿಯಾ ಔಷಧಿಗಳನ್ನು ಉಚಿತವಾಗಿ ನೀಡಲಾಗುತ್ತಿದ್ದು, ಇದಕ್ಕಾಗಿ ವಾರ್ಷಿಕ 20 ರಿಂದ 30 ಕೋಟಿ ರೂ ವೆಚ್ಚ ಮಾಡಲಾಗುತ್ತಿದೆ ಎಂದರು.

### ಆಯುಷ್ ಆಸ್ಪತ್ರೆಗಳಿಗೆ ಸೂಕ್ತ ಮೇಲ್ವಿಚಾರಣೆ

ಬೆಳಗಾವಿ: ಆಯುಷ್ ಆಸ್ಪತ್ರೆಗಳಲ್ಲಿ ಒಳ ರೋಗಿಗಳ ದಾಖಲಾತಿ ವ್ಯವಸ್ಥೆ ಮಾಡುವುದು ಸೇರಿದಂತೆ ಎಲ್ಲಾ ರೀತಿಯಿಂದ ಸೂಕ್ತ ಮೇಲ್ವಿಚಾರಣೆ ಮಾಡಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಹೇಳಿದರು.

## ಮನರೇಗಾ ಮಾನವ ದಿನಗಳನ್ನು 150ಕ್ಕೆ ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಪತ್ರ: ಮುಖ್ಯಮಂತ್ರಿ ಸಿದ್ದರಾಮಯ್ಯ



**ಸುವರ್ಣಸೌಧ: ಬೆಳಗಾವಿ:** ಭೀಕರ ಬರಗಾಲದ ಹಿನ್ನಲೆಯಲ್ಲಿ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಪ್ರಸ್ತುತ ಇರುವ 100 ಮಾನವ ದಿನಗಳ ಸೃಜನೆಯ ಮಿತಿಯನ್ನು, 150ಕ್ಕೆ ಹೆಚ್ಚಿಸುವಂತೆ ಕೋರಿ 2 ತಿಂಗಳ ಹಿಂದೆಯೇ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿದ್ದಾರೆ.

ಸೋಮವಾರ ಬೆಳಗಾವಿ ಅಧಿವೇಶನದ ವಿಧಾನಸಭೆ ಕಲಾಪದಲ್ಲಿ ಬರಗಾಲದ ಚರ್ಚೆಗೆ ವೇಳೆ ಅವರು ಮಾತನಾಡಿದರು.

ರಾಜ್ಯದ 236 ತಾಲ್ಲೂಕುಗಳ ಪೈಕಿ 223 ತಾಲ್ಲೂಕುಗಳು ಬರಗಾಲಕ್ಕೆ ತುತ್ತಾಗಿವೆ. ಜನರು ಉದ್ಯೋಗ ದೊರಕದೆ ಗುಳೆ ಹೋಗುವುದನ್ನು ತಡೆಯಲು ನರೇಗಾ ಪರಿಣಾಮಕಾರಿಯಾಗಿದೆ. ಉದ್ಯೋಗ ಖಾತ್ರಿ ಕಾಯ್ದೆಯಲ್ಲಿ ಬರಗಾಲದ ಸಂದರ್ಭದಲ್ಲಿ ಹೆಚ್ಚುವರಿಯಾಗಿ 50 ಮಾನವ ದಿನಗಳನ್ನು ಸೃಜಿಸಲು ಅವಕಾಶವಿದೆ. ಈ ಕಾರಣದಿಂದಾಗಿ ಹೆಚ್ಚುವರಿ ಮಾನವ ದಿನಗಳ ಸೃಜನೆ ಅವಕಾಶ ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.

ರಾಜ್ಯ ಸರ್ಕಾರ ಬರಗಾಲವನ್ನು ಎದುರಿಸಲು ಸಿದ್ದವಾಗಿದೆ. ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ ಬಳಿ ರೂ.800 ರಿಂದ 900 ಕೋಟಿ ರೂಪಾಯಿ ಹಣ ಲಭ್ಯವಿದೆ. ಇದನ್ನು ಕುಡಿಯುವ ನೀರು, ಮೇವು ಖರೀದಿ ಸೇರಿದಂತೆ ಅಗತ್ಯ ಕಾರ್ಯಗಳಿಗೆ ಬಳಸಬಹುದಾಗಿದೆ. ಸರ್ಕಾರ ಬರಗಾಲ ಹಾಗೂ ಉತ್ತರ ಕರ್ನಾಟಕ ಅಭಿವೃದ್ಧಿ ಕಾರ್ಯಗಳ ಕುರಿತು ಚರ್ಚೆ ಸಿದ್ದವಿದೆ. ಮಹದಾಯಿ, ಕೃಷ್ಣಾ ಮೇಲ್ದಂಡೆ, ತುಂಗಭದ್ರಾ ನೀರಾವರಿ ಯೋಜನೆಗಳ ಕುರಿತು ಸಮರ್ಪಕ ಉತ್ತರ ನೀಡಲಾಗುವುದು. ವಿರೋಧ ಪಕ್ಷಗಳು ಇದರ ಹೊರತಾಗಿ ಬೇರೆ ಯಾವುದೆ ವಿಚಾರವನ್ನು ಚರ್ಚಿಸಲು ಇಚ್ಛಿಸಿದರೆ ಸಭಾಧ್ಯಕ್ಷರಿಗೆ ನಿಯಮಾನುಸಾರ ನೋಟಿಸ್ ನೀಡಿ. ಇದರ ಬಗ್ಗೆಯೂ ಚರ್ಚಿಸಲು ಸರ್ಕಾರ ಸಿದ್ದವಿದೆ. ಸದನದ ಕಲಾಪಗಳಿಗೆ ಅಡ್ಡಿಪಡಿಸಿ ಕಾಲವನ್ನು ಹರಣ ಮಾಡುವುದನ್ನು ಬಿಟ್ಟು ಚರ್ಚೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

## ರಾಜ್ಯದ ಶಾಲೆಗಳಿಗೆ ಗುಣಮಟ್ಟದ ಸಮವಸ್ತ್ರ ವಿತರಣೆ



ಬೆಳಗಾವಿ: ರಾಜ್ಯದ ಶಾಲೆಗಳಿಗೆ ಗುಣಮಟ್ಟದ ಸಮವಸ್ತ್ರೊ ಸರಬರಾಜು ಮಾಡಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್.ಮಧುಬಂಗಾರಪ್ಪ ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಡಿಸೆಂಬರ್ 11ರಂದು ನಡೆದ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಎನ್ ರವಿಕುಮಾರ ಅವರ ಪ್ರಶ್ನೆಗೆ ಉತ್ತರಿಸಿ, 2023–24ನೇ ಸಾಲಿಗೆ ಪ್ರತಿ ವಿದ್ಯಾರ್ಥಿಗೆ ಪಠ್ಯ ಪುಸ್ತಕಕ್ಕೆ ಸರಾಸರಿ 397 ರೂ. ವೆಚ್ಚ ಮಾಡಲಾಗಿದೆ.

ಶೂ ಮತ್ತು ಸಾಕ್ಸಗಳಿಗೆ 1 ರಿಂಧ 5ನೇ ತರಗತಿ ವಿದ್ಯಾರ್ಥಿಗಳಿಗೆ ತಲಾ 265 ರೂ., 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ 295 ರೂ., ಹಾಗೂ 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ 325 ರೂ.ಗಳನ್ನು ವೆಚ್ಚ ಮಾಡಲಾಗಿದೆ. ಅದೇ ರೀತಿ 1 ರಿಂದ 10ನೇ ತರಗತಿವರೆಗೆ ಗಂಡು ಮಕ್ಕಳು ಮತ್ತು ಹೆಣ್ಣು ಮಕ್ಕಳಿಗೆ ತಲಾವಾರು ವೆಚ್ಚ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

2023–24ನೇ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ 55,43,828 ವಿದ್ಯಾರ್ಥಿಗಳಿಗೆ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ ಉಚಿತವಾಗಿ ಪಠ್ಯಪುಸ್ತಕಗಳನ್ನು ಹಾಗೂ 45,45,749 ವಿದ್ಯಾರ್ಥಿಗಳಿಗೆ ಸಮವಸ್ತ್ರೊ ಹಾಗೂ ಶೂ ಮತ್ತು ಸಾಕ್ಸಗಳನ್ನು ವಿತರಿಸಲಾಗಿದೆ.

2023–24ನೇ ಸಾಲಿನಲ್ಲಿ ವಿದ್ಯಾ ವಿಕಾಸ ಯೋಜನೆಯಡಿಯಲ್ಲಿ 55,43,828 ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ 4,47,17,051 ಪಠ್ಯಪುಸ್ತಕಗಳನ್ನು ಜನವರಿ 2023 ರಿಂದ ಮಾರ್ಚ 2023ರವರೆಗೆ ಸರಬರಾಜು ಮಾಡಲಾಗಿದ್ದು ವಿದ್ಯಾರ್ಥಿಗಳಿಗೆ ಶಾಲೆಯ ಪ್ರಾರಂಭದ ದಿನದಂದು ವಿತರಿಸಲಾಗಿದೆ. 45,45,749 ವಿದ್ಯಾರ್ಥಿಗಳಿಗೆ ತಲಾ ಎರಡು ಜೊತೆ ಸಮವಸ್ತ್ರೊಗಳನ್ನು ಒದಗಿಸಲಾಗಿದ್ದು ಮೊದಲ ಜೊತೆ ಸಮವಸ್ತ್ರೊಗಳನ್ನು ಮಾರ್ಚ 2023 ರಿಂದ ಜೂನ್ 2023ರವರೆಗೆ ಹಾಗೂ ಎರಡನೇ ಜೊತೆ ಸಮವಸ್ತ್ರೊಗಳನ್ನು ಜೂನ್ 2023ರಿಂದ ಸೆಪ್ಟೆಂಬರ್ 2023ರವರೆಗೆ ವಿತರಣೆ ಮಾಡಲಾಗಿದೆ. ಶೂ ಮತ್ತು ಸಾಕ್ಸ್ ಖರೀದಿ ಮಾಡಲು ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳಿಗೆ ಜೂನ್ 2023ರಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಸಚಿವರಾದ ಎಸ್.ಮಧು ಬಂಗಾರಪ್ಪ ಅವರು ತಿಳಿಸಿದರು

## ಬೈಕ್‌ಗೆ ಪೆಟ್ರೋಲ್ ಹಾಕುತ್ತಿದ್ದ ಬಾಲಕಿ ಬೆಂಕಿಗೆ ಬಲಿ

ತುಮಕೂರು: ಮೊಂಬತ್ತಿ ಬೆಳಕಲ್ಲಿ ಬೈಕ್‌ಗೆ ಪೆಟ್ರೋಲ್ ಹಾಕುತ್ತಿದ್ದಾಗ ಬೆಂಕಿ ತಗುಲಿ ಬಾಲಕಿ ಸಾವನ್ನಪ್ಪಿದ್ದ ಘಟನೆ ಕುಣಿಗಲ್ ತಾಲೂಕಿನ ಕಟ್ಟಿಗೇನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸೌಂದರ್ಯ (16) ಸಾವನ್ನಪ್ಪಿದ ಬಾಲಕಿ. ಮನೆಯ ಬೈಕ್‌ಗೆ ಪ್ಲಾಸ್ಟಿಕ್ ಬಾಟಲಿ ಮೂಲಕ ಮೊಂಬತ್ತಿ ಹಿಡಿದು ಸೌಂದರ್ಯ ಪೆಟ್ರೋಲ್ ಹಾಕುತ್ತಿದ್ದಳು. ಮೊಂಬತ್ತಿ ಕಿಡಿ ಪೆಟ್ರೋಲ್ ಬಾಟಲಿಗೆ ತಗುಲಿ ಬೆಂಕಿ ಹೊತ್ತಿಕೊಂಡಿದೆ. ಈಕೆಯ ದೇಹವು ಬೆಂಕಿಯಿಂದ ಸುಟ್ಟುಹೋಗಿದೆ. ಸುಟ್ಟಗಾಯದಿಂದ ಅಸ್ವಸ್ಥಳಾದ ಸೌಂದರ್ಯಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾಳೆ.

## ಆನೆ ಹಾವಳಿ ತಡೆಗೆ 200 ಕೋಟಿ ರೂ ವೆಚ್ಚದಲ್ಲಿ ಬ್ಯಾರಿಕೇಡ್ ನಿರ್ಮಾಣ: ಅರಣ್ಯ ಸಚಿವ ಈಶ್ವರ ಖಂಡ್ರೆ

**ಸುವರ್ಣಸೌಧ: ಬೆಳಗಾವಿ:** ರಾಜ್ಯದಲ್ಲಿ ಆನೆ ಮತ್ತು ಮಾನವ ಸಂಘರ್ಷ ತಪ್ಪಿಸಲು 200 ಕೋಟಿ ರೂ ವೆಚ್ಚದಲ್ಲಿ ಬ್ಯಾರಿಕೇಡ್ ನಿರ್ಮಾಣ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಇಂದು ವಿಧಾನ ಪರಿಷತ್ನಲ್ಲಿ ತಿಳಿಸಿದರು.

ಸದಸ್ಯ ಕೆ.ಹರೀಶ್ ಕುಮಾರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಆನೆಗಳು ಜನವಸತಿ ಪ್ರದೇಶಕ್ಕೆ ಬರುವುದನ್ನು ತಡೆಯಲು 640 ಕಿ.ಮೀ. ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾರ್ಯ ಪ್ರಗತಿಯಲ್ಲಿದ್ದು, ಈಗಾಗಲೇ 312 ಕಿ.ಮೀ. ಬ್ಯಾರಿಕೇಡ್ ಅಳವಡಿಸಲಾಗಿದ್ದು, ಒಟ್ಟು 200 ಕೋಟಿ ರೂ ವೆಚ್ಚದಲ್ಲಿ ರೈಲ್ವೆ ಬ್ಯಾರಿಕೇಡ್ ಅಳವಡಿಸುವ ಕಾರ್ಯ ನಡೆಯುತ್ತಿದೆ. ಆನೆ ಹಾವಳಿಯಿಂದ ಬೆಳೆ ಹಾನಿಗೊಳಗಾದ ರೈತರಿಗೆ ಶೆ.90 ರಷ್ಟು ಪ್ರಕರಣಗಳಲ್ಲಿ ಪರಿಹಾರ ವಿತರಿಸಲಾಗಿದ್ದು, ಮಾನವ ಜೀವಹಾನಿಗೆ ಹೆಚ್ಚಿನ ಪರಿಹಾರ ನೀಡಲಾಗುವುದು ಎಂದರು.

ರಾಜ್ಯದಲ್ಲಿ ದಟ್ಟ ಅರಣ್ಯ ವ್ಯಾಪ್ತಿಯಲ್ಲಿ ಹೊಂದಿಕೊಂಡಿರುವ ರಾಷ್ಟ್ರೀಯ ಹೆದ್ದಾರಿಗಳ ಇಕ್ಕೆಲಗಳಲ್ಲಿ ಕಾಡಾನೆ ಹಾಳಿಯನ್ನು ತಡೆಯುವ ನಿಟ್ಟಿನಲ್ಲಿ ಹೆದ್ದಾರಿ ಪಕ್ಕದಲ್ಲಿ ಆನೆಗಳ ಇರುವಿಕೆಯ ಬಗ್ಗೆ ಎಚ್ಚರಿಕಾ ಫಲಕಗಳನ್ನು ಅಳವಡಿಸಲಾಗಿದೆ. ಕಾಡಾನೆ ಹಾವಳಿ ಹೆಚ್ಚಳವಾಗಿರುವ ಹಾಸನ, ಕೊಡಗು, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು, ಚಾಮರಾಜನಗರ, ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನು ಒಳಗೊಂಡ ಆನೆ ಕಾರ್ಯಪಡೆಯನ್ನು ರಚಿಸಲಾಗಿದೆ.

ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ.



ಇದರಿಂದ ಕಾಡಾನೆ ಹಾಗೂ ಇತರ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.

ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಮನೆ ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆ ತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.

ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.

ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ–ವಲನಗಳ ಬಗ್ಗೆ ಎಸ್.ಎಂ.ಎಸ್ ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.

ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆ ಹಿಡಿದು ಆಗ್ಗಿಂದಾಗ್ಗೆ ಸ್ಥಳಾಂತರಿಸಲಾಗುತ್ತಿದೆ. ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು.

# ರಾಜ್ಯದ ಬರ ನಿರ್ವಹಣೆಗೆ ಸರ್ಕಾರ ಸಮರ್ಪಕ ಕ್ರಮವಹಿಸಿದೆ; ಜಿಲ್ಲಾಡಳಿತಗಳಲ್ಲಿ ಬರ ನಿರ್ವಹಣೆಗಾಗಿ ರೂ.895 ಕೋಟಿ ಇದೆ: ಕಂದಾಯ ಸಚಿವ ಕೃಷ್ಣ ಭೈರೇಗೌಡ

**ಸುವರ್ಣಸೌಧ: ಬೆಳಗಾವಿ:** ರಾಜ್ಯದಲ್ಲಿ ಮುಂಗಾರು ಮಳೆ ಕೊರತೆಯಿಂದಾಗಿ ಬರ ಪರಿಸ್ಥಿತಿ ಉಂಟಾಗಿದ್ದು, ಈಗಾಗಲೇ 223 ತಾಲೂಕುಗಳನ್ನು ಬರ ಪೀಡಿತ ಎಂದು ರಾಜ್ಯ ಸರ್ಕಾರ ಘೋಷಿಸಿದೆ. ಜಿಲ್ಲಾಧಿಕಾರಿ ಹಾಗೂ ತಹಶೀಲ್ದಾರ ಖಾತೆಗಳಲ್ಲಿ ಬರ ನಿರ್ವಹಣೆಗೆ ಒಟ್ಟು ರೂ.895 ಕೋಟಿ ಹಣ ಮೀಸಲಿರಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಹೇಳಿದರು.

ಸೋಮವಾರ ಚಳಿಗಾಲದ ವಿಧಾನಸಭೆ ಕಲಾಪದಲ್ಲಿ ಬರ ನಿರ್ವಹಣೆ ಕುರಿತ ಚರ್ಚೆಯ ಮೇಲೆ ಉತ್ತರಿಸಿ ಮಾತನಾಡಿದರು. ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ವಾಡಿಕೆಗಿಂತ ಜೂನ್ನಲ್ಲಿ ಶೇ.57, ಆಗಸ್ಟ್ನಲ್ಲಿ ಶೇ.73, ಸ್ಪೆಪ್ಟಂಬರ್ನಲ್ಲಿ ಶೇ.10 ರಷ್ಟು ಹಾಗೂ ಅಕ್ಟೋಬರ್ನಲ್ಲಿ ಶೇ.65 ರಷ್ಟು ಮಳೆಯ ಕೊರತೆಯಾಗಿದೆ. ಪ್ರಸಕ್ತ ವರ್ಷ 82.95 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿತ್ತು. ಆದರೇ ಶೇ.74 ರಷ್ಟು ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಮಳೆ ಕೊರತೆಯಿಂದಾಗಿ 46 ಲಕ್ಷ ಹೆಕ್ಟೇರ್ ಕೃಷಿ, 2 ಲಕ್ಷ ಹೆಕ್ಟೇರ್ ತೋಟಗಾರಿಕೆ ಸೇರಿ 48 ಲಕ್ಷ ಹೆಕ್ಟೇರ್ ಬೆಳೆ ಹಾನಿಯಾಗಿದೆ ಎಂದು ಮಾಹಿತಿ ನೀಡಿದರು.

ಸಚಿವರ ಬರ ಅಧ್ಯಯನ: ರಾಜ್ಯದ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಿ ಜನರ ಸಂಕಷ್ಟಗಳಿಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ತೊಂದರೆಯಾಗದಂತೆ ಕ್ರಮವಹಿಸಲು ರಾಜ್ಯ ಸರ್ಕಾರ ಅನೇಕ ರೀತಿಯ ಪರಿಹಾರಗಳನ್ನು ಕೈಗೊಂಡಿದೆ.

ಮುಖ್ಯಮಂತ್ರಿಗಳು ಬರ ನಿರ್ವಹಣೆಗಾಗಿ ಮೂರು ಸಭೆಗಳನ್ನು ಜರುಗಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದ್ದಾರೆ. ಅಲ್ಲದೇ ಸರ್ಕಾರವು ಬರ ನಿರ್ವಹಣೆಗಾಗಿ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಿದೆ. ಈ ಸಮಿತಿಯು ಈಗಾಗಲೇ 8 ಸಭೆಗಳನ್ನು ಜರುಗಿಸಿ ಬರ ಪರಿಸ್ಥಿತಿ ಹಾಗೂ ಜಿಲ್ಲಾಡಳಿಗಳು ಕೈಗೊಂಡಿರುವ ಮುಂಜಾಗ್ರತೆ ಹಾಗೂ ಪರಿಹಾರ ಕ್ರಮಗಳನ್ನು ಪರಾಮರ್ಶಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದೆ. ರಾಜ್ಯದ 22 ಜಿಲ್ಲೆಗಳಿಗೆ ಸ್ವತಃ ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಬರಗಾಲದ ಸ್ಥಿತಿಯನ್ನು ಅವಲೋಕಿಸಿದ್ದೇನೆ. ರಾಜ್ಯದ ಪ್ರತಿ ಕಂದಾಯ ವಿಭಾಗದಲ್ಲಿ ಆಯಾ ವಿಭಾಗದ ಜಿಲ್ಲಾಧಿಕಾರಿಗಳ ಹಾಗೂ ತಹಶೀಲ್ದಾರರ ಸಭೆ ಜರುಗಿಸಿ ಕೈಗೊಳ್ಳಬೇಕಾದ ತುರ್ತು ಕ್ರಮಗಳ ಕುರಿತು ನಿರ್ದೇಶನ ನೀಡಲಾಗಿದೆ ಎಂದು ಸಚಿವರು ತಿಳಿಸಿದರು. ಜಿಲ್ಲಾ ಮಟ್ಟದಲ್ಲಿ ಬರ ನಿರ್ವಹಣೆ ಕುರಿತು ಜಿಲ್ಲಾಧಿಕಾರಿ ನೇತೃತ್ವದಲ್ಲಿ 133 ಸಭೆಗಳನ್ನು ಜರುಗಿಸಿದ್ದಾರೆ ಎಂದರು.

18,171 ಕೋಟಿ ನೆರವು ಕೋರಿ ಕೇಂದ್ರಕ್ಕೆ ಮನವಿ: ರಾಜ್ಯದ 223 ತಾಲೂಕುಗಳು ತೀವ್ರ ಬರ ಪೀಡಿತ ಪ್ರದೇಶಗಳಾಗಿರುವುದರಿಂದ ರಾಜ್ಯ ಸರ್ಕಾರವು ರಾಜ್ಯದ ಪರಿಸ್ಥಿತಿಯನ್ನು ಅಧ್ಯಯನ ನಡೆಸಿ, ಅವಲೋಕಿಸಿ, ರೂ. 18,171 ಕೋಟಿ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದೆ. ಕೇಂದ್ರ ಸರ್ಕಾರದ ಅಂತರ ಮಂತ್ರಾಲಯ ತಾಂತ್ರಿಕ ಸಮಿತಿ (ಐ.ಎಮ್.ಟಿ.ಸಿ.) ರಾಜ್ಯದ 13 ಜಿಲ್ಲೆಗಳಲ್ಲಿ ಬರ ಅಧ್ಯಯನ ಪ್ರವಾಸ ಮಾಡಿದೆ. ಅಧ್ಯಯನದ ನಂತರ ರಾಜ್ಯ ಸರ್ಕಾರದ ಅಧಿಕಾರಿಗಳು, ಮುಖ್ಯಮಂತ್ರಿಗಳೊಂದಿಗೂ ಸಮಾಲೋಚಿಸಿ ಕೇಂದ್ರಕ್ಕೆ ವರದಿ ಸಲ್ಲಿಸಿದೆ. ಆದರೆ ಕೇಂದ್ರದಿಂದ ಇಲ್ಲಿಯವರೆಗೂ ಯಾವುದೇ ಪರಿಹಾರ ರಾಜ್ಯಕ್ಕೆ ಬಂದಿಲ್ಲ. ಆದಷ್ಟು ಬೇಗ ಕೇಂದ್ರ ನೆರವು ನೀಡಬೇಕೆಂದು ಕಂದಾಯ ಸಚಿವರು ಈ ಸಂದರ್ಭದಲ್ಲಿ ಆಗ್ರಹಿಸಿದರು.



ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಅಗತ್ಯ ಕ್ರಮ: ರಾಜ್ಯದ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ಯಾವುದೇ ಗ್ರಾಮ ಹಾಗೂ ನಗರಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಗತ್ಯ ಕ್ರಮ ಕೈಗೊಂಡು ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತಗಳಿಗೆ ಹಣ ಬಿಡುಗಡೆ ಮಾಡಲಾಗಿದೆ. ರಾಜ್ಯದ 26 ಗ್ರಾಮಗಳಲ್ಲಿ ಈಗ ಕುಡಿಯುವ ನೀರಿನ ಸಮಸ್ಯೆ ಇದೆ. ಇವುಗಳಲ್ಲಿ 11 ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಮತ್ತು 9 ಗ್ರಾಮಗಳಿಗೆ ಖಾಸಗಿ ಬೋರವೇಲ್ ಬಾಡಿಗೆ ಪಡೆದು ಕುಡಿಯುವ ನೀರು ಪೂರೈಸಲಾಗುತ್ತಿದೆ. ನಗರ ಪ್ರದೇಶದ ನಾಲ್ಕು ವಾರ್ಡ್ಗಳಲ್ಲಿ ಕುಡಿಯುವ ನೀರಿನ ಕೊರತೆಯಾಗಿದ್ದು, ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಸಚಿವ ಕೃಷ್ಣ ಭೈರೇಗೌಡ ಹೇಳಿದರು.

ಭವಿಷ್ಯದಲ್ಲಿ 6,237 ಗ್ರಾಮಗಳಲ್ಲಿ ಸಮಸ್ಯೆ ಸಾಧ್ಯತೆ: ರಾಜ್ಯ ಸರ್ಕಾರವು ಸಮರ್ಥವಾಗಿ ಬರ ನಿರ್ವಹಿಸಲು ಪ್ರೋ ಆ್ಯಕ್ಟಿವ್ ಆಗಿ ಕೆಲಸ ಮಾಡಿದೆ. ಕಳೆದ 10 ವರ್ಷಗಳ ಪರಿಸ್ಥಿತಿಯನ್ನು ಅವಲೋಕಿಸಿ ಮುಂದಿನ ಜನವರಿ–ಫೆಬ್ರವರಿ ವೇಳೆಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಹುದಾದ ಸುಮಾರು 6,237 ಸಮಸ್ಯಾತ್ಮಕ ಗ್ರಾಮಗಳನ್ನು ಮತ್ತು ನಗರ ಪ್ರದೇಶದ 914 ವಾರ್ಡ್ಗಳನ್ನು ಕುಡಿಯುವ ನೀರಿನ ಸಮಸ್ಯಾತ್ಮಕ ಪ್ರದೇಶಗಳೆಂದು ಗುರುತಿಸಿ ಮುಂಜಾಗ್ರತೆಯಾಗಿ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಸಚಿವರು ತಿಳಿಸಿದರು.

ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಈಗಾಗಲೇ 3,672 ಖಾಸಗಿ ಬೋರವೇಲ್ಗಳನ್ನು ಗುರುತಿಸಿ ಬಾಡಿಗೆಗೆ ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ. ಮತ್ತು ಉಳಿದಂತೆ ಟ್ಯಾಂಕರ್ ಮೂಲಕ ನೀರು ಪೂರೈಸಲು ಸಿದ್ಧತೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದರು.

ಶಾಸಕರ ಅಧ್ಯಕ್ಷತೆಯ ಟಾಸ್ಕ್ಫೋರ್ಸ್ ಕ್ರಿಯಾಶೀಲ: ಪ್ರತಿ ತಾಲೂಕಿನಲ್ಲಿ ಬರ ನಿರ್ವಹಣೆಗಾಗಿ ಶಾಸಕರ ಅಧ್ಯಕ್ಷತೆಯಲ್ಲಿ ಟಾಸ್ಕ್ಫೋರ್ಸ್ ಸಮಿತಿಗಳನ್ನು ರಚಿಸಿ, ಅಗತ್ಯ ಹಣ ಬಿಡುಗಡೆ ಮಾಡಲಾಗಿದೆ. ಈಗಾಗಲೇ ಶಾಸಕರ ಅಧ್ಯಕ್ಷತೆಯ 183 ಟಾಸ್ಕ್ಫೋರ್ಸ್ ಸಮಿತಿ ಸಭೆಗಳು ಜರುಗಿವೆ.

ಗ್ರಾಮ ಪಂಚಾಯತ್ ಮಟ್ಟದ ಟಾಸ್ಕ್ಫೋರ್ಸ್ ಸಮಿತಿ ರಚನೆ: ಬರ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಕ್ಷೇತ್ರ ಮಟ್ಟದ ಸಮಸ್ಯೆಗಳನ್ನು ಗುರುತಿಸಿ ತಕ್ಷಣ ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತ್ ಮಟ್ಟದ ಟಾಸ್ಕ್ಫೋರ್ಸ್ ರಚಿಸಿದೆ. ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ (ಪಿ.ಡಿ.ಓ.), ಕುಡಿಯುವ ನೀರು ವಿಭಾಗದ ಅಸಿಸ್ಟಂಟ್ ಇಂಜನಿಯರ್ ಮತ್ತು ಗ್ರಾಮ ಆಡಳಿತ ಅಧಿಕಾರಿ ಇರುವ ಈ ಸಮಿತಿಯು ತಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕುಡಿಯುವ ನೀರು, ಮೇವು ಸಮಸ್ಯೆ ಕಂಡು ಬಂದಲ್ಲಿ ತಕ್ಷಣ ಈ ಕುರಿತು ನಿರ್ಣಯ ಕೈಗೊಂಡು ತಹಶೀಲ್ದಾರರಿಗೆ ಸಲ್ಲಿಸಬೇಕು. ಈ ಸಮಿತಿ ಮನವಿಯನ್ನು ಪರಿಗಣಿಸಿ 24 ಗಂಟೆಯಲ್ಲಿ ನೀರು ಪೂರೈಸಲು ತಹಶೀಲ್ದಾರರು ತಕ್ಷಣ ಕ್ರಮವಹಿಸಬೇಕು. ವಿಶೇಷವಾಗಿ ಈ ಸಮಿತಿ ಕುಡಿಯುವ ನೀರಿನ ಕುರಿತು ಮತ್ತು ಮೇವು, ಟ್ಯಾಂಕರ್ ನೀರು ಸರಬರಾಜು, ಬಾಡಿಗೆ ಬೋರವೇಲ್, ನೀರು ಸರಬರಾಜು ಪೈಪ್ಲೈನ್ ದುರಸ್ತಿ ಕಾರ್ಯಗಳಿಗೆ ಗಮನಹರಿಸಲಿದೆ. ಇದಕ್ಕಾಗಿ ಅನುದಾನ ಕೊರತೆಯಾಗದಂತೆ ತಹಶೀಲ್ದಾರರ ಖಾತೆಗೆ ರೂ. 50 ಲಕ್ಷ ಬಿಡುಗಡೆ ಮಾಡುವಂತೆ ಈಗಾಗಲೇ ಸೂಚಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಅವರು ಸದನದಲ್ಲಿ ತಿಳಿಸಿದರು.

ಮೊದಲ ಕಂತು ರೂ. 2,000 ಗಳ ಬರ ಪರಿಹಾರ ಬಿಡುಗಡೆ: ರಾಜ್ಯದಲ್ಲಿ ಬರ ಪರಿಸ್ಥಿತಿ ಇದ್ದರೂ ಕೇಂದ್ರ ಸರ್ಕಾರ ಇಲ್ಲಿಯವರೆಗೂ ಪರಿಹಾರ ಹಣ ಬಿಡುಗಡೆ ಮಾಡಿಲ್ಲ. ಆದರೂ ರಾಜ್ಯ ಸರ್ಕಾರವು ಮೊದಲ ಕಂತಾಗಿ ರೂ. 2,000 ಗಳನ್ನು ಬರ ಪರಿಹಾರವಾಗಿ ನೀಡಲು ನಿರ್ಧರಿಸಿದೆ.

ಈ ವಾರದಲ್ಲಿ ರಾಜ್ಯದ ರೈತರಿಗೆ ಪರಿಹಾರ ಹಣ ಜಮೆಯಾಗಲಿದೆ. ಪರಿಹಾರ ಹಣ ದುರುಪಯೋಗ ಆಗಿರುವ ಬಗ್ಗೆ ಹಿಂದಿನ ಪ್ರಕರಣಗಳ ಹಿನ್ನೆಲೆಯಲ್ಲಿ ಯಾವುದೆ ಹಸ್ತಕ್ಷೇಪ ಇಲ್ಲದೇ ನೇರವಾಗಿ ಆಯಾ ರೈತರ ಖಾತೆಗೆ ಆಟೋಮೆಟಿಕ್ ಮೋಡ್ನಲ್ಲಿ ಜಮೆಯಾಗುವಂತೆ ಕ್ರಮಕೈಗೊಳ್ಳಲಾಗಿದೆ. ಈ ವಾರ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನಲ್ಲಿ ಪರಿಹಾರ ಜಮೆ ಮೊದಲ ಪೇಮೆಂಟ್ ಮಾಡಲಾಗುತ್ತದೆ ಎಂದು ಕಂದಾಯ ಸಚಿವರು ಸದನದಲ್ಲಿ ತಿಳಿಸಿದರು.

## ಖಾಲಿ ಇರುವ ಸರ್ಕಾರಿ ಜಾಗಗಳ ರಕ್ಷಣೆಗೆ ಬೀಟ್ ಸಿಸ್ಟಂ

**ಸುವರ್ಣಸೌಧ: ಬೆಳಗಾವಿ:** ರಾಜ್ಯದಲ್ಲಿ ಖಾಲಿ ಇರುವ ಸರ್ಕಾರಿ ಜಾಗಗಳ ರಕ್ಷಣೆಗೆ ಸರ್ಕಾರ ಮುಂದಾಗಿದೆ. ಮೊಬೈಲ್ ಆಪ್ ಮೂಲಕ ಖಾಲಿ ಜಾಗಗಳ ಜಿ.ಪಿ.ಎಸ್ ಲೋಕೇಷನ್ ಮಾರ್ಕ್ ಮಾಡಿ, ಬೌಂಡರಿ ಫಿಕ್ಸ್ ಮಾಡಲಾಗಿದೆ. ಕಂದಾಯ ಇಲಾಖೆ ಅಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಖಾಲಿ ಜಾಗಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಲು ಬೀಟ್ ಸಿಸ್ಟಂ ಜಾರಿ ಮಾಡಲಾಗಿದೆ. ಒತ್ತುವರಿ ಯಾಗಿರುವುದು ಕಂಡುಬಂದರೆ ಕೂಡಲೇ ಸಂಬಂಧ ಪಟ್ಟ ತಹಶೀಲ್ದಾರ್ ತೆರವುಗೊಳಿಸಬೇಕು ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಹೇಳಿದರು.

ಸೋಮವಾರ ವಿಧಾನ ಸಭಾ ಕಲಾಪದ ಪ್ರಶ್ನೋತ್ತರ ವೇಳೆಯಲ್ಲಿ ಮಂಡ್ಯ ಶಾಸಕ ರವಿಕುಮಾರಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಬೀಟ್ ಸಿಸ್ಟಂ ಮೊಬೈಲ್ ಲೋಕೇಷನ್ ಆಧಾರದ ಮೇಲೆ ಕಾರ್ಯ ನಿರ್ವಹಿಸುವುದರಿಂದ ಅಧಿಕಾರಿಗಳು ಕಡ್ಡಾಯ ಸ್ಥಳಕ್ಕೇ ತೆರಳಬೇಕು. ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಸರ್ಕಾರಿ ಜಾಗಗಳನ್ನು ಕಬಳಿಸುವಲ್ಲಿ ಅಧಿಕಾರಿಗಳು ಶಾಮೀಲು ಆಗುತ್ತಿದ್ದಾರೆ ದುರ್ದೈವದ ಸಂಗತಿ. ಈಗಿರುವ ಕಾನೂನುಗಳನ್ನು ಸರಿಯಾಗಿ ಪಾಲನೆ ಮಾಡಿದರೆ ಸರ್ಕಾರಿ ಜಾಗಗಳನ್ನು ರಕ್ಷಿಸಿಕೊಳ್ಳಬಹುದು ಎಂದರು.

## ಎಸ್.ಎಫ.ಸಿ. ಅನುದಾನದಡಿ ಪ.ಜಾ ಮತ್ತು ಪ.ಪ ಅಭ್ಯರ್ಥಿಗಳಿಗೆ ವಿವಿಧ ಸೌಲಭ್ಯ: ಅರ್ಜಿಆಹ್ವಾನ

ಬೆಳಗಾವಿ: ಉಗಾರ ಖುರ್ದ ಪುರಸಭೆಯ ವತಿಯಿಂದ 2023–24ನೇ ಸಾಲಿನಲ್ಲಿ ಎಸ್.ಎಫ.ಸಿ. ಅನುದಾನದ ಖಅಕ/ಖಿಖಕ ಪ.ಜಾತಿ/ಪ.ಪಂಗಡ ಶೇ. 29%, ಇತರೆ ಬಡಜನರು ಶೇ. 7.25 ಹಾಗೂ ವಿಕಲಚೇತನರು ಶೇ.5% ಕಾಯ್ದಿರಿಸಿದ ಅನುದಾನದಲ್ಲಿ ಪುರಸಭೆಯಿಂದ ವಿವಿಧ ಸೌಲಭ್ಯಗಳನ್ನು ಪಡೆಯಬಹುದಾಗಿದೆ.

ವ್ಯಕ್ತಿಗತ ಸೌಲಭ್ಯಗಳನ್ನು ಪಡೆಯಲು ಅರ್ಜಿಗಳನ್ನು ಪಟ್ಟಣದ ವ್ಯಾಪ್ತಿಯಲ್ಲಿ ಬರುವಂತಹ ಅರ್ಹರು ಅಗತ್ಯ ದಾಖಲಾತಿಗಳೊಂದಿಗೆ ಜನವರಿ 6, 2024 ಒಳಗೆ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದು. ಅಪೂರ್ಣ/ ವಿಳಂಬವಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಎಸ್.ಎಫ್.ಸಿ ಅನುದಾನ :**

ಪ.ಜಾತಿ ಜನರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಶೇ.22%ಕಾರ್ಯಕ್ರಮದ ವ್ಯಕ್ತಿ ಸಂಬಂಧಿತ ಅನುಕೂಲತೆಗಳು: ಎಂ.ಬಿ.ಬಿ.ಎಸ./ಬಿ.ಇ. ವ್ಯಾಸಂಗ ಮಾಡುತ್ತಿರುವ ಪ್ರಭಾನ್ವಿತ ವಿದ್ಯಾರ್ಥಿಗಳಿಗೆ ಲ್ಯಾಪಟಾಪ/ಕಂಪ್ಯೂಟರ ಪಡೆಯಲು ಸಹಾಯಧನ ನೀಡುವುದು, ಪ.ಜಾತಿಯ ಜನಾಂಗದವರೆಗೆ ರೋಗಕ್ಕೊಳಪಟ್ಟವರಿಗೆ ಶಸ್ತ್ರ ಚಿಕಿತ್ಸೆಗೆ ಸಹಾಧನ ನೀಡಲಾಗುವುದು.

ಪ.ಪಂಗಡ ಜನರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಶೇ.7% ಕಾರ್ಯಕ್ರಮದ ವ್ಯಕ್ತಿ ಸಂಬಂಧಿತ ಅನುಕೂಲತೆಗಳು: ಪ.ಪಂಗಡದ ಜನರಿಗೆ ಹೊಲಗೆ ಮಶೀನ (ಪಿಕೊ ಫಾಲ ಎಂಬ್ರಾಯಡರಿ) ಖರಿದಿಸಿ ಪೂರೈಸಲಾಗುವುದು.

ಇತರೆ ಬಡಜನರ ಕಲ್ಯಾಣಕ್ಕಾಗಿ ಕಾಯ್ದಿರಿಸಿದ ಶೇ. 7.25%ಕಾರ್ಯಕ್ರಮದ ವ್ಯಕ್ತಿ ಸಂಬಂಧಿತ ಅನುಕೂಲತೆಗಳು: ಸಾಮಾನ್ಯ ಇತರೆ ಜನಾಂಗದ ಕುಟುಂಬಕ್ಕೆ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕಾಗಿ ಸಹಾಯಧನ ನೀಡಲಾಗುವುದು.

ಅಂಗವಿಕಲ ಅಭಿವೃದ್ಧಿಗಾಗಿ ಮೀಸಲಿಟ್ಟ 5% ಅನುದಾನದ ಕಾರ್ಯಕ್ರಮಗಳ ವ್ಯಕ್ತಿ ಸಂಬಂಧಿತ ಅನುಕೂಲತೆಗಳು: ವಿಕಲಚೇತನರಿಗೆ ತ್ರಿಚಕ್ರ ವಾಹನ ಖರಿದಿಸಿ ಪೂರೈಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಾಗೂ ದಾಖಲೆಗಾಗಿ ಉಗಾರಖುರ್ದ ಪುರಸಭೆ ಕಾರ್ಯಾಲಯಕ್ಕೆ ಅಥವಾ ಪುರಸಭೆಯ ವೆಬಸೈಟ ವಿಳಾಸ http://www.ugar-khurdtown.mrc.gov.in/ ಗೆ ಸಂಪರ್ಕಿಸಬಹುದಾಗಿದೆ ಎಂದು ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸದನದಲ್ಲಿ ಬೆಳಗಾವಿ ಜಿಲ್ಲೆ ವಿಭಜನೆ ಪ್ರಸ್ತಾಪ ಬಂದರೆ ಚರ್ಚಿಸುತ್ತೇವೆ: ಡಿಸಿಎಂ ಡಿಕೆಶಿ

ಬೆಳಗಾವಿ: ಉತ್ತರ ಕರ್ನಾಟಕ ಕುರಿತು ಅಧಿವೇಶನದಲ್ಲಿ ಚರ್ಚೆ ವಿಚಾರಕ್ಕೆ ಯಾರೇ ಶಾಸಕರು ಏನೇ ಉತ್ತರ ಕರ್ನಾಟಕದ ಬಗ್ಗೆ ಚರ್ಚಿಸಿದರೂ, ಅದಕ್ಕೆ ಸ್ಪಂದಿಸಲು ಸರ್ಕಾರ ಸಿದ್ಧವಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ, ಹಳೆ ಕರ್ನಾಟಕ, ಮಧ್ಯ ಕರ್ನಾಟಕ ಸೇರಿ ನಮ್ಮದು ಸಮಗ್ರ ಕರ್ನಾಟಕ. ವಿಧಾನಸಭೆಯಲ್ಲಿ ಸಹಕಾರ ಕೊಡಲು ನಾವು ಸಿದ್ಧರಿದ್ದೇವೆ ಎಂದರು.

ಅಥಣಿ ಜಿಲ್ಲೆಗೆ ಆಗ್ರಹಿಸಿ ಸೋಮವಾರ ಬಂದ್ಗೆ ಕರೆ ನೀಡಿರುವುದಕ್ಕೆ ಬೆಳಗಾವಿ ಜಿಲ್ಲೆ ವಿಭಜನೆ ಬಗ್ಗೆ ಪ್ರಸ್ತಾವನೆ ಬರಲಿ. ಆ ಬಗ್ಗೆ ಖಂಡಿತವಾಗಿಯೂ ಚರ್ಚಿಸುತ್ತೇವೆ ಎಂದು ತಿಳಿಸಿದರು.

ಸುವರ್ಣಸೌಧ ವಿಧಾನಸಭೆಯಲ್ಲಿ ಸಾವರ್ಕರ್ ಫೋಟೋ ತೆರವು ಕುರಿತು ಪ್ರಿಯಾಂಕ್ ಖರ್ಗೆ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಲು ನಿರಾಕರಿಸಿದ ಡಿಕೆಶಿ, ಈ ಬಗ್ಗೆ ಅವರ ಬಳಿಯೇ ಮಾತನಾಡಿ ಎಂದು ಹೇಳಿ ನುಣುಚಿಕೊಂಡರು. ಕಲಾಪದಲ್ಲಿ ಬಿಜೆಪಿ ನಾಯಕರ ಮಧ್ಯೆ ಒಮ್ಮತ ಮೂಡದ ಬಗ್ಗೆ ಮಾತನಾಡಲು ಇಚ್ಛಿಸದ ಡಿಸಿಎಂ, ಅವರ ಪಕ್ಷದ ವಿಚಾರ ಅವರಿಗೆ. ನಮಗೆ ಬೇಡ ಎಂದು ಹೇಳಿದರು.

ಹೆಚ್ಡಿಕೆ ವಿರುದ್ಧ ದಿನೇಶ್ ಗುಂಡೂರಾವ್ ವಾಗ್ದಾಳಿ: ಸರ್ಕಾರ ಪತನ ಮಾಡಬೇಕು ಎಂಬುದು ಅವರ ರಾಜಕಾರಣವಾದರೆ, ನಾವೇನು ಹೇಳಬೇಕು ಎಂದು ಸಚಿವ ದಿನೇಶ್ ಗುಂಡೂರಾವ್ ಹೆಚ್ಡಿ ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು.




ಸುವರ್ಣಸೌಧದಲ್ಲಿ ಮಾತನಾಡಿದ ಅವರು, 50–60 ಶಾಸಕರೊಂದಿಗೆ ಬಿಜೆಪಿ ಸೇರಲು ಪ್ರಭಾವಿ ಸಚಿವರೊಬ್ಬರಿಂದ ಪ್ರಯತ್ನ ಎಂಬ ಎಚ್ಡಿಕೆ ಹೇಳಿಕೆಗೆ ಪ್ರತಿಕ್ರಿಯಿಸುತ್ತಾ, "ಜೆಡಿಎಸ್ ಅನ್ನು ಜನ ಹೀನಾಯವಾಗಿ ಸೋಲಿಸಿದ್ದಾರೆ. ವಿರೋಧ ಪಕ್ಷದಲ್ಲಿ ಇದ್ದು ಗೌರವಯುತವಾಗಿ ಜನರ ಕೆಲಸ ಮಾಡಬೇಕು. ಜನ ಕಾಂಗ್ರೆಸ್ಗೆ ಆಶೀರ್ವಾದ ಮಾಡಿದ್ದಾರೆ. ಅಧಿಕಾರ ಇಲ್ಲದೆ ಇರೋಕಾಗಲ್ಲ ಎಂದು ಈ ರೀತಿ ವರ್ತಿಸಿದರೆ ಶೋಭೆ ತರಲ್ಲ" ಎಂದು ಕಿಡಿಕಾರಿದರು.

"ಕಳೆದ ಚುನಾವಣೆಯಲ್ಲಿ ಏನಾಯ್ತು ಎಂದು ತಿಳಿದುಕೊಂಡು ಹೆಜ್ಜೆ ಇಡಲಿ. ನಮ್ಮ ಸರ್ಕಾರ ಐದು ವರ್ಷ ಪೂರೈಸಲಿದೆ. ಜನರಿಗಾಗಿ, ಜನರಿಗೋಸ್ಕರ ಜನರ ಪರ ವಿಪಕ್ಷವಾಗಿ ಜವಾಬ್ದಾರಿಯುತವಾಗಿ ಕೆಲಸ ಮಾಡಬೇಕು. ಜನರ ತೀರ್ಪು ಗೌರವಿಸಬೇಕು. ನಮ್ಮಲ್ಲಿ ಯಾವುದೇ ಅಸಮಾಧಾನ ಇಲ್ಲ. ಯಾವುದೇ ಸರ್ಕಾರದಲ್ಲಿ ಸಣ್ಣ ಪುಟ್ಟ ಸಮಸ್ಯೆ ಇರುತ್ತದೆ. ಅದಕ್ಕೆ ಕಾದು, ಸರ್ಕಾರ ಬೀಳಿಸುವುದು ಒಂದೇ ಉದ್ದೇಶ ಎಂದು ಕುಳಿತರೆ ರಾಜಕಾರಣ ಅಷ್ಟೇನಾ?" ಎಂದು ಪ್ರಶ್ನಿಸಿದರು.

"ವಿಪಕ್ಷನೂ ಅಷ್ಟೇ ಮುಖ್ಯವಾಗಿದೆ. ಸರ್ಕಾರ ಚೆನ್ನಾಗಿ ಕೆಲಸ ಮಾಡಲು ವಿಪಕ್ಷ ಬಹಳ ಮುಖ್ಯ. ಅದರ ಜವಾಬ್ದಾರಿಯನ್ನು ನಿಭಾಯಿಸಲಿ. ಅಧಿಕಾರ ಬೇಕು, ಮಂತ್ರಿಯಾಗಬೇಕು, ಅವರ ಮಗ ಸಿಎಂ ಆಗಬೇಕು, ನಾನು ಸಿಎಂ ಆಗಬೇಕು ಎಂದು ಅದನ್ನೇ ಮಾತನಾಡುತ್ತಾ ಕೂತರೆ ಹೇಗೆ?. ವಿರೋಧ ಪಕ್ಷದ ಜವಾಬ್ದಾರಿಯನ್ನು ಅವರು ನಿಭಾಯಿಸಲಿ. ಅದನ್ನು ಬಿಟ್ಟು ಈ ರೀತಿ ಮಾಡುವುದು ಪ್ರಜಾಪ್ರಭುತ್ವಕ್ಕೆ ಶೋಭೆ ತರಲ್ಲ" ಎಂದರು.

## ಸರ್ಕಾರಕ್ಕೆ ಪ್ರತಿಭಟನೆಗಳ ಬಿಸಿ

### ಇಂದು ಸ್ವಯಂ ಪ್ರೇರಿತ ಅಥಣಿ ಬಂದ್



ಬೆಳಗಾವಿ: ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನ ಆರಂಭವಾಗಿದೆ.

ಅಧಿವೇಶನದ ಆರನೇ ದಿನವೂ ಸುವರ್ಣಸೌಧ ಹೊರಗೆ ಪ್ರತಿಭಟನೆ ಕಾವು ಕಡಿಮೆ ಆಗಿಲ್ಲ. ಇದೀಗ ಸಾಲು ಸಾಲು 13 ಪ್ರತಿಭಟನೆಗಳು ಸರ್ಕಾರಕ್ಕೆ ಬಿಸಿ ಮುಟ್ಟಿಸಲಿವೆ.

ಸಂಘಟನೆಗಳು ಇಂದು ಸಾಲು ಸಾಲು ಪ್ರತಿಭಟನೆಗಳನ್ನು ಹಮ್ಮಿಕೊಂಡಿವೆ. ಜೊತೆಗೆ ಮತ್ತೆ ಬೆಳಗಾವಿ ಜಿಲ್ಲೆ ವಿಭಜನೆ ಕೂಗು ಕೇಳಿ ಬಂದಿದ್ದು, ಅಥಣಿ ಜಿಲ್ಲೆ ಮಾಡುವಂತೆ ಒತ್ತಾಯಿಸಿ ಇಂದು ಅಥಣಿ ಬಂದ್ಗೆ ಕರೆ ಕೊಡಲಾಗಿದೆ.

**ಸ್ವಯಂ ಪ್ರೇರಿತರಾಗಿ ಅಥಣಿ ಬಂದ್:** ಇನ್ನು ಮತ್ತೊಂದೆಡೆ ಮತ್ತೆ ಬೆಳಗಾವಿ ಜಿಲ್ಲೆ ವಿಭಜನೆ ಕೂಗು ಕೇಳಿ ಬಂದಿದ್ದು ಅಥಣಿ ಜಿಲ್ಲೆ ಮಾಡುವಂತೆ ಒತ್ತಾಯಿಸಿ ಸೋಮವಾರ ಅಥಣಿ ಬಂದ್ಗೆ ಕರೆ ಕೊಡಲಾಗಿದೆ. ಅಥಣಿಯ ಅಂಬೇಡ್ಕರ್ ವೃತ್ತದಲ್ಲಿ ಟಾಯರ್ಗೆ ಬೆಂಕಿ ಹಚ್ಚಿ ಪ್ರತಿಭಟನೆ ಮಾಡಲಾಗುತ್ತಿದೆ.

ಅಥಣಿ ಜಿಲ್ಲಾ ಹೋರಾಟ ಸಮಿತಿ ಸ್ವಯಂ ಪ್ರೇರಿತ ಬಂದ್ಗೆ ಕರೆ ಕೊಟ್ಟಿದ್ದು ಹೋರಾಟ ಸಮಿತಿ ಅಧ್ಯಕ್ಷ ಪ್ರಶಾಂತ ತೋಡ್ಕರ್ ನೇತೃತ್ವದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯುತ್ತಿದೆ.

ಮಾಜಿ ಡಿಸಿಎಂ, ಶಾಸಕ ಲಕ್ಷ್ಮಣ ಸವದಿಗೆ ಹೋರಾಟಗಾರರು ಮನವಿ ಸಲ್ಲಿಸಲಿದ್ದಾರೆ. ಲಕ್ಷ್ಮಣ ಸವದಿ ಅವರು ಅಥಣಿ ಜಿಲ್ಲೆ ರಚನೆ ಬಗ್ಗೆ ಸದನದಲ್ಲಿ ಧ್ವನಿ ಎತ್ತಲಿದ್ದಾರೆ. ಪಕ್ಷಾತೀತವಾಗಿ ಹೋರಾಟಕ್ಕೆ ರಾಜಕೀಯ ಪಕ್ಷಗಳು, ವಿವಿಧ ಸಂಘಟನೆಗಳು ಬೆಂಬಲ ನೀಡಿವೆ. ಅಥಣಿ ಬಂದ್ ಹಿನ್ನೆಲೆ ಬೀಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ಅಂಗಡಿ ಮುಂಗಟ್ಟುಗಳು ಬಂದ್ ಆಗಿವೆ.

## 'ದಳಪತಿ'ಗಳಿಗೆ ಸೆಡ್ಡು ಹೊಡೆದ ಸಿ.ಎಂ ಇಬ್ರಾಹಿಂ ಬಣ



ಬೆಂಗಳೂರು: 'ದಳಪತಿ'ಗಳಿಗೆ ಸಿ.ಎಂ ಇಬ್ರಾಹಿಂ ಬಣ ಸೆಡ್ಡು ಹೊಡೆದಿದೆ. ಜೆಡಿಎಸ್ ರೆಬೆಲ್ ಟೀಮ್ ರಾಷ್ಟ್ರೀಯ ಅಧ್ಯಕ್ಷರನ್ನೇ ಬದಲಾವಣೆ ಮಾಡಿದೆ.

ಜೆಡಿಎಸ್ನಿಂದ ಉಚ್ಚಾಟನೆಗೊಂಡ ಅಸಮಾಧಾನಿತರು ಬೆಂಗಳೂರಿನ ಕೆ.ಜೆ ಹಳ್ಳಿ ಬಳಿ ಖಾಸಗಿ ಹೊಟೇಲ್ ನಲ್ಲಿ ಸಭೆ ನಡೆಸಿದ್ದರು. ಈ ವೇಳೆ ದೇವೇಗೌಡರನ್ನು ಕೆಳಗಿಳಿಸಿ ಸಿ.ಕೆ.ನಾಣು ಅವರನ್ನು ರಾಷ್ಟ್ರೀಯ ಅಧ್ಯಕ್ಷರಾಗಿ ನೇಮಕ ಮಾಡಲಾಗಿದೆ.

ಬಳಿಕ ಮಾತನಾಡಿದ ಸಿಎಂ ಇಬ್ರಾಹಿಂ, ರಾಷ್ಟ್ರೀಯ ಅಧ್ಯಕ್ಷರ ಬದಲಾವಣೆ ನನ್ನ ನಿರ್ಣಯ ಅಲ್ಲ, ಇದು ರಾಷ್ಟ್ರೀಯ ಕೌನ್ಸಿಲ್ ನ ನಿರ್ಧಾರ. ಜಯಪ್ರಕಾಶ್ ನಾರಾಯಣರ ಸಿದ್ಧಾಂತದ ಮೇಲೆ ಜನತಾ ಪಕ್ಷ ಕಟ್ಟಲಾಯಿತು. ಎಲ್ಲಾ ರಾಜ್ಯಗಳ ಅಧ್ಯಕ್ಷರ ನೇಮಕವನ್ನ ನಾಣುರವರಿಗೆ ನೀಡಲಾಗಿದೆ. ಜನವರಿಯಲ್ಲಿ ಹುಬ್ಬಳ್ಳಿಯಲ್ಲಿ ಬೃಹತ್ ಸಮಾವೇಶ ಮಾಡಲಾಗುತ್ತದೆ. ರಾಹುಲ್ ಗಾಂಧಿಯವರಿಗೂ ಆಹ್ವಾನ ನೀಡಲಾಗುತ್ತದೆ ಎಂದರು. ಅಖಿಲೇಶ್ ಯಾದವ್, ನಿತೀಶ್ ಕುಮಾರ್ ಕೂಡ ಬರುತ್ತಾರೆ. ಹಲವು ಹಿರಿಯರ ಆದರ್ಶ ನಮ್ಮ ಆದರ್ಶ. ಅದರ್ಶವಾದಿಗಳು ಸತ್ರೂ ಅವರ ಅದರ್ಶ ಶಾಶ್ವತವಾಗಿ ಇರುತ್ತದೆ. ಕೆಲವರು ಬದುಕಿದ್ರೂ, ಅದರ್ಶ ಬಿಟ್ಟು ಸತ್ತಂತೆ ಇರ್ತಾರೆ. 92ನೇ ವಯಸ್ಸಿನಲ್ಲಿ ತಮ್ಮ ಸಿದ್ಧಾಂತ ಬಿಟ್ಟು ಕೊಟ್ರೆ, 5 ಮಂದಿ ಶಾಸಕರು ನಮ್ಮ ಬಳಿ ಇದ್ದಾರೆ. ನಾನು ಹುಟ್ಟಿದ್ದು ಸಿದ್ಧಾಂತಕ್ಕಾಗಿ. ವಾಜಪೇಯಿಯವರು ಮಂತ್ರಿಯಾಗಲು ಕರೆದ್ರು ನಾ ಹೋಗಲಿಲ್ಲ, ರಾಜ್ಯಪಾಲರು ಆಗಲು ಕರೆದ್ರು ನಾ ಹೋಗಲಿಲ್ಲ ಎಂದರು. ದೇವೆಗೌಡ್ರು ಹೇಳಿದ್ರು ಸತ್ತವರ ಫೋಟೋ ಹಾಕಿದ್ದಾರೆ. ಜಯ ಪ್ರಕಾಶ್ ನಾರಾಯಣ್, ಗಾಂಧೀಜಿ, ರಾಮ ಕೃಷ್ಣ ಹೆಗಡೆ ಇವರು ಸತ್ರೂ ಸಿದ್ಧಾಂತಗಳಿಂದ ಜೀವಂತವಾಗಿರುತ್ತಾರೆ. ಅನ್ನೋದನ್ನ ತೋರಿಸ್ತೀವಿ. ಕೆಲವರು ಬದುಕಿದ್ರೂ ಸತ್ತ ಹೆಣಗಳು ಅನ್ನೋದನ್ನ ಹೇಳೊಕೆ ಇಷ್ಟಪಡ್ತೀನಿ. ಮಕ್ಕಳ ಸೀಟ್ ಗಾಗಿ ಸಿದ್ಧಾಂತ ಬಲಿ ಕೊಟ್ಟಿದ್ದೀರಿ. ನಾವು ಮೂರು ಅವಕಾಶ ಕೊಟ್ವಿ. ಕೊನೆಗೆ ಇವತ್ತು 11 ನೇ ತಾರೀಖು, ಅವರನ್ನ ಅಧ್ಯಕ್ಷಗಿರಿಯಿಂದ ತೆಗೆದು ಸಿಕೆ ನಾಣು ಅವರಿಗೆ ಅಧಿಕಾರ ಕೊಟ್ಟಿದ್ದೀವಿ ಎಂದು ಹೇಳಿದರು.

## ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾರ್ವತ್ರಿಕ ಆರೋಗ್ಯ ಆಂದೋಲನ ಒಕ್ಕೂಟ ಧರಣಿ



ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಾರ್ವತ್ರಿಕ ಆರೋಗ್ಯ ಆಂದೋಲನ ಒಕ್ಕೂಟದ ಸದಸ್ಯರು ಬೆಳಗಾವಿಯ ಸುವರ್ಣಸೌಧದ ಬಳಿ ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿನ ಸರ್ಕಾರಿ ಆಸ್ಪತ್ರೆಗಳ ಸುಧಾರಣೆ, ಉಚಿತ ಔಷಧಿಯ ಲಭ್ಯತೆ, ಸಿಬ್ಬಂದಿ ಕೊರತೆ ನೀಗಿಸುವುದು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಬೇಕೆಂದು ಪ್ರತಿಭಟನಾನಿರತರು ಆಗ್ರಹಿಸಿದರು.

## ಹಿರಿಯ ನಟಿ ಡಾ.ಲೀಲಾವತಿ ನಿಧನಕ್ಕೆ ವಿಧಾನಸಭೆ ಸಂತಾಪ

**ಸುವರ್ಣಸೌಧ: ಬೆಳಗಾವಿ:** ಬೆಳಗಾವಿ ಚಳಿಗಾಲದ ಅಧಿವೇಶನದ ಸೋಮವಾರದ ವಿಧಾನಸಭೆ ಕಲಾಪದಲ್ಲಿ, ಡಿ.8 ರಂದು ನಿಧನರಾದ ಹಿರಿಯ ಚಲಚಿತ್ರ ನಟಿ ಡಾ.ಲೀಲಾವತಿ ನಿಧನಕ್ಕೆ ಸಂತಾಪ ಸೂಚಿಸಿ ಒಂದು ನಿಮಿಷದ ಮೌನಾಚರಣೆ ಆಚರಿಸಲಾಯಿತು.



ಸಭಾಧ್ಯಕ್ಷ ಯು.ಟಿ.ಖಾದರ್ ಸಂತಾಪ ಸೂಚನೆ ನಿರ್ಣಯ ಮಂಡಿಸಿ, ಡಾ.ಲೀಲಾವತಿ ನಾಯಕಿಯಾಗಿ, ಪೋಷಕ ನಟಿಯಾಗಿ ವಿಭಿನ್ನ ಹಾಗೂ ವೈವಿಧ್ಯಮಯ ಪಾತ್ರಗಳಲ್ಲಿ ಕಪ್ಪು–ಬಿಳುಪು ಕಾಲದಿಂದ ಕಲಪುಲ್ ಸಿನಿಮಾ ಸ್ಕೋಪ್ವರೆಗೆ ಎಲ್ಲಾ ಪ್ರಸಿದ್ಧ ನಾಯಕ ನಟರೊಂದಿಗೆ ನಟಿಸಿ ಜನಪ್ರಿಯರಾಗಿದ್ದರು. ಕಾಲೇಜ್ ಹಿರೋ ಚಿತ್ರ ನಿರ್ಮಿಸಿದ್ದ ಅವರು ಕನ್ನಡದ ಕಂದ ಚಲನಚಿತ್ರಕ್ಕೆ ಚಿತ್ರಕಥೆ ಬರೆದಿದ್ದರು. ಡಾ.ರಾಜಕುಮಾರ್ ಹಾಗೂ ಫಿಲಂ ಫೇರ್ ಸೇರಿದಂತೆ ಹಲವು ಪ್ರಶಸ್ತಿಗೆ ಭಾಜನರಾಗಿದ್ದರು ಎಂದರು.

ಸಂತಾಪ ಸೂಚನೆ ನಿರ್ಣಯ ಬೆಂಬಲಿಸಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವ ಹೆಚ್.ಕೆ.ಪಾಟೀಲ್, ಡಾ.ಲೀಲಾವತಿ ಅತಿ ವಿರಳ ಹಾಗೂ ಅಪರೂಪದ ತಾರೆಯಾಗಿದ್ದರು. ತಮ್ಮ ಸ್ವಂತ ಹಣದಲ್ಲಿ ಸಾರ್ವಜನಿಕ ಆಸ್ಪತ್ರೆ ಹಾಗೂ ಪಶುಚಿಕಿತ್ಸಾಲಯ ಕಟ್ಟಿಸಿ ಸಮಾಜ ಸೇವೆಯನ್ನು ಮಾಡಿದ್ದಾರೆ. ಅವರ ಪಾತ್ರಗಳು ಸಾಮಾಜಿಕ ಬದಲಾವಣೆಗೆ ಕಾರಣವಾಗಿವೆ. ಅವರ ಅಗಲಿಕೆ ಚಿತ್ರ ಪ್ರೇಮಿಗಳು ಹಾಗೂ ಎಲ್ಲಾ ಪ್ರಾಣಿಪ್ರಿಯರಿಗೂ ತುಂಬಲಾರದ ನಷ್ಟವಾಗಿದೆ ಎಂದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮಾತನಾಡಿ, ಕನ್ನಡ, ತೆಲುಗು, ತಮಿಳು ಭಾಷೆಗಳಲ್ಲಿ ಅಭಿನಯಸಿ ಡಾ.ಲೀಲಾವತಿಯವರು ತಮ್ಮ ಪ್ರೌಢಿಮೆಯನ್ನು ಮೆರೆದಿದ್ದಾರೆ. ಸಮಾಜ ನನಗೇನು ಕೊಟ್ಟಿದೆ? ಎಂದು ಯೋಚಿಸುವವರ ಮಧ್ಯೆ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಿದ ಧೀಮಂತ ವ್ಯಕ್ತಿತ್ವ ಅವರದು. ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿ ಆಗಿದ್ದಾಗ ಆಸ್ಪತ್ರೆ ಕಟ್ಟಲು ಅನುಮತಿ ಕೊಡಿಸುವಂತೆ ನನ್ನ ಬಳಿ ಬಂದಿದ್ದರು. ಡಾ.ಲೀಲಾವತಿ ಅವರು ಸ್ವಂತ ಖರ್ಚಿನಲ್ಲಿ ನಿರ್ಮಿಸಿದ ಆಸ್ಪತ್ರೆಯಲ್ಲಿ ಅವರ ಪ್ರತಿಮೆಯನ್ನು ನಿರ್ಮಿಸುವಂತೆ ಸರ್ಕಾರಕ್ಕೆ ಕೋರಿದರು.

ಜೆ.ಡಿ.ಎಸ್.ಶಾಸಕ ಬಾಲಕೃಷ್ಣ ಮಾತನಾಡಿ, 42 ಚಿತ್ರಗಳಲ್ಲಿ ಡಾ.ರಾಜ್ಕುಮಾರ್ ಅವರೊಂದಿಗೆ ಅಭಿನಯಸಿದ್ದ ಡಾ.ಲೀಲಾವತಿಯವರು ಆರಂಭದಲ್ಲಿ ತುಂಬಾ ಸಂಕಷ್ಟ ಅನುಭವಿಸಿ ಚಿತ್ರರಂಗಕ್ಕೆ ಆಗಮಿಸಿದ್ದರು. ಮಗ ವಿನೋದ್ಕುಮಾರ್ ಅವರೊಂದಿಗಿನ ಅವರ ಬಾಂಧವ್ಯ ಎಲ್ಲರಿಗೂ ಪ್ರೇರಣೆಯಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದರು.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ಡಾ.ಲೀಲಾವತಿ ಅವರು ಅಜಾತಶತ್ರುವಾಗಿದ್ದರು. ಸುಮಾರು 32 ವರ್ಷಗಳಿಂದ ವೈಯಕ್ತಿಕವಾಗಿ ಪರಿಚಯವಿದ್ದರು. ಕಳೆದ 20 ದಿನಗಳ ಹಿಂದೆ ನನ್ನ ಮನೆಗೆ ಆಗಮಿಸಿ ನೂತನವಾಗಿ ನಿರ್ಮಿಸಿದ್ದ ಪಶು ಆಸ್ಪತ್ರೆ ಉದ್ಘಾಟನೆ ಮಾಡುವಂತೆ ನನ್ನನ್ನು ಆಹ್ವಾನಿಸಿದ್ದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ
ಜ್ಞಾನ ಸಂಗಮ, ಬೆಳಗಾವಿ–590018, ಕರ್ನಾಟಕ, ಭಾರತ

ಕ್ರಮ ಸಂಖ್ಯೆ:ವಿ.ತಾ.ವಿ./ಬೆ/ಸ್ಥಾ.ಅ./ಕಿ.ಅ.(ಇ)/2023–24/ಐ.ಎಫ್.ಟಿ.ನಂ.36/4785 ದಿನಾಂಕ:9 DEC 2023

ಟೆಂಡರ ಪ್ರಕಟಣೆ

ಕುಲಸಚಿವರು, ವಿತಾವಿ, ಬೆಳಗಾವಿ ಇವರಿಂದ ನೋಂದಾಯಿತ ಅರ್ಹ ಇಲೆಕ್ಟ್ರೀಕಲ್ ಗುತ್ತಿಗೆದಾರರಿಂದ/ಫರ್ಮ/ಏಜನ್ಸಿದಾರ ರಿಂದ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ಸ ಕೆ.ಜಿ./ಕೆ.ಡಬ್ಲ್ಯೂ. ನಮೂನೆಯಲ್ಲಿ, ಟೆಂಡರಗಳನ್ನು ಆಹ್ವಾನಿಸಲಾಗಿದೆ. 1)ವಿತಾವಿ, "ಜ್ಞಾನ ಸಂಗಮ" ಆವರಣ, ಬೆಳಗಾವಿಯ ಅನೆಕ್ಸ್ ಗೆಸ್ಟ್‌ಹೌಸ ಗೆ ವಾಲ್ ಮೌಂಟ್ ಪ್ಯಾನ್ಸ್‌ಗಳು ಹಾಗೂ 43 ಇಂಚ್ ಟೆಲಿವಿಜನ್ಸ್ ಗಳನ್ನು ಸರಬರಾಜು ಮಾಡುವ ಮೊತ್ತ ರೂ.4,81,877/–(ತೆರಿಗೆ ಸೇರಿ), 2)ವಿತಾವಿ ಪ್ರಾದೇಶಿಕ ಕೇಂದ್ರ, ನಾಗರಭಾವಿ, ಬೆಂಗಳೂರಿನ ಎಚ್.ಟಿ. ಯನ್ನು ಡೆಪ್ಯೂಟಿ ಚೀಫ್ ಎಲೆಕ್ಟ್ರೀಕಲ್ ಇನ್ಸ್‌ಪೆಕ್ಟ್‌ರೆಟ್ ಇವರು ಪರೀವೀಕ್ಷಿಸಿರುವ ಆದನ್ನು ಸರಿಪಡಿಸುವುದು, ನಿರ್ವಹಿಸವುದು ಮತ್ತು ಪೂರೈಸುವ ಕಾಮಗಾರಿಯ ಮೊತ್ತ ರೂ. 4,24,000/–(ತೆರಿಗೆ ಸೇರಿ) ಮತ್ತು 3)ವಿ.ಐ.ಎ.ಟಿ., ಆವರಣ, ಮುದ್ದೇನಹಳ್ಳಿ, ಚಿಕ್ಕಬಳ್ಳಾಪೂರದ ಸ್ನಾತಕೋತ್ತರ ಕೇಂದ್ರದ ಹತ್ತಿರ 125 ಕೆವಿಎ., ಡಿಜಿ ಕೋಲ್‌ರ ಮೆಕ್ ಡಿಜಿ ಸೆಟ್ ನ್ನು ಸರಿಪಡಿಸುವ ಕಾಮಗಾರಿಯ ಮೊತ್ತ ರೂ.2,13,580/– (ತೆರಿಗೆ ಸೇರಿ). ಇತರೆ ಮಾಹಿತಿಗಳನ್ನು htpp//www.vtu.ac.in/tenders ವೆಬ್‌ಸೈಟ್ ಮೂಲಕ ದಿನಾಂಕ: 07.12.2023 ರಿಂದ ಪಡೆದುಕೊಳ್ಳಬಹುದು.

ಸಹಿ/– ಕುಲಸಚಿವರು,ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,ಬೆಳಗಾವಿ
DIPR/BGM/RO-NO-742/KSMCA/2023-24

ಕಿತ್ತೂರ ರಾಣಿ ಚನ್ನಮ್ಮ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ.,ಬೈಲಹೊಂಗಲ
ಶಾಖೆ: M K ಹುಬ್ಬಳ್ಳಿ ತಾ: ಕಿತ್ತೂರ ಜಿ ಬೆಳಗಾವಿ

ಹರಾಜು ಪ್ರಕಟಣೆ

ಇಪಿ ಸಂಖ್ಯೆ :ಕರಾಸೌಸಂಸನಿ/ಸ.ಸಂ.ಸ.ನಿ/ವ.ಅ.ಬೆ/155/2022–23

ಕಿತ್ತೂರ ರಾಣಿ ಚನ್ನಮ್ಮಾ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಬೈಲಹೊಂಗಲ ಶಾಖೆ– M K ಹುಬ್ಬಳಿನಲ್ಲಿ ಸುಸ್ತಿದಾರರಾದ 1) ಶ್ರೀ ನಜುಮುದ್ದಿನ್ ಗೌಸಮೋದ್ದಿನ ನಬುವಾಲೆ (ಮೃತ) ವಾರಸಾ ಸಹರಾಬಾನು ನಜುಮುದ್ದೀನ ನಬುವಾಲೆ 1ಬಿ) ಶ್ರೀ ರಿಜವಾನ ನಜುಮುದ್ದಿನ ನಬುವಾಲೆ (ಮಗ) 1ಸಿ) ಶ್ರೀ ಗೌಸಮೋದ್ದಿನ್ ನಜುಮುದ್ದೀನ ನಬುವಾಲೆ (ಮಗ) 1ಡಿ) ಶ್ರೀ ತೋಹಿದ ನಜುಮುದ್ದೀನ ನಬುವಾಲೆ (ಮಗ) ಮು/ಪೋ: M K ಹುಬ್ಬಳಿ ತಾ: ಕೀತೂರ ಜಿ: ಬೆಳಗಾವಿ 2) ಶ್ರೀ ಜಾವೀದ ಮಹ್ಮದಲಿ ಜಮಾದಾರ ಹಾಗೂ 3) ಶ್ರೀ ಅಕ್ಬರ ಇಮಾಮಹುಸೇನ ಸಯ್ಯದ ಇವರಿಂದ ದಿನಾಂಕ : 27/06/2023 ಕ್ಕೆ ಬರಬೇಕಾದ ಬಾಕಿ ಮೊತ್ತರೂ. 2732351+ ಬಡ್ಡಿ ಮತ್ತು ಇತರೆ ವೆಚ್ಚಗಳ ಸಂದಾಯದ ಬಗ್ಗೆ ಈ ಕೆಳಗೆ ನಮೂದಿಸಲಾದ ಸ್ಥಿರ ಸ್ವತ್ತುಗಳ ಹರಾಜನ್ನು ಶುಕ್ರವಾರ ದಿನಾಂಕ : 29/12/2023 ರಂದು ಬಹಿರಂಗ ಹರಾಜು ಮಾಡಲಾಗುವುದು ಅಥವಾ ಹರಾಜನ್ನು ಮುಂದೂಡಲಾದ ದಿನಾಂಕದಂದು ಸ್ಥಿರ ಸ್ವತ್ತುಗಳಿರುವ ಗ್ರಾಮದಲ್ಲಿ ಬಹಿರಂಗ ಹರಾಜನ್ನು ಮಾಡಲಾಗುವುದೆಂದು ತಿಳಿಸಲಾಗಿದೆ. ಸದರಿ ಹರಾಜು ಹಗಲು 11:00 ಘಂಟೆಗೆ ಪ್ರಾರಂಭವಾಗಿ ಅತ್ಯಧಿಕ ಮೊತ್ತಕ್ಕೆ ಬಿಡ್ ಕೂಗುವವರಿಗೆ ಸ್ವತ್ತನ್ನು ಮೂರು ಸಲಕ್ಕಾಗಿ ಖಾಯಂ ಮಾಡಲಾಗುವುದು.

ಸ್ಥಿರ ಸ್ವತ್ತುಗಳ ವಿವರ :– 1) ಶ್ರೀ ನಜುಮುದ್ದಿನ್ ಗೌಸಮೋದ್ದಿನ ನಬುವಾಲೆ (ಮೃತ) ವಾರಸಾ ಸಹರಾಬಾನು ನಜುಮುದ್ದೀನ ನಬುವಾಲೆ 1ಬಿ) ಶ್ರೀ ರಿಜವಾನ ನಜುಮುದ್ದಿನ ನಬುವಾಲೆ (ಮಗ) 1ಸಿ) ಶ್ರೀ ಗೌಸಮೋದ್ದಿನ್ ನಜುಮುದ್ದೀನ ನಬುವಾಲೆ(ಮಗ) 1ಡಿ) ಶ್ರೀ ತೋಹಿದ ನಜುಮುದ್ದೀನ ನಬುವಾಲೆ (ಮಗ) ಗ್ರಾಮ ಪಂಚಾಯತಿ ನಂ 489/2 ಕಾಂಪ್ಲೆಕ್ಸಗಳು 3,4,5,6,7,8 ಕೋಲೆಗಳು, ಬೆಳಗಾವಿ ಜಿಲ್ಲೆ ಕೀತ್ತೂರ ತಾಲೂಕಿನ M K ಹುಬ್ಬಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಸಾ: M K ಹುಬ್ಬಳ್ಳಿ ಗ್ರಾಮದ ಆಸ್ತಿಯಾಗಿರುತ್ತದೆ.

**ಹರಾಜು ಬಗ್ಗೆ ಸಂಪರ್ಕಿಸಬೇಕಾದ ವಿಳಾಸ :**
**: ಮಾರಾಟಾಧಿಕಾರಿಗಳು :**
ಕಿತ್ತೂರ ರಾಣಿ ಚನ್ನಮ್ಮಾ ಅರ್ಬನ್ ಕ್ರೆಡಿಟ್ ಸೌಹಾರ್ದ ಸಹಕಾರಿ ನಿ., ಬೈಲಹೊಂಗಲ
ಶಾಖೆ: M K ಹುಬ್ಬಳ್ಳಿ, ಮೊಬೈಲ್ ನಂ. 9606098037.
ಮಾರಾಟಾಧಿಕಾರಿಗಳು ಬೆಳವಡಿ ಮೊಬೈಲ್ ನಂ. 9606953001

# ವಿವಿಧ ಬೇಡಿಕೆ ಈಡೇರಿಕೆಗೆ ಛಲವಾದಿ ಮಹಾಸಭಾ ಒತ್ತಾಯ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸುವರ್ಣಸೌಧ ಎದುರು ಛಲವಾದಿ ಮಹಾಸಭಾ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಜಿಲ್ಲಾ ಛಲವಾದಿ ಮಹಾಸಭಾ ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷ ದುರ್ಗೇಶ ಗೋವಿಂದ ಮೇತ್ರಿ ಮಾತನಾಡಿ, ಬೆಳಗಾವಿ ಜಿಲ್ಲೆಯಲ್ಲಿ ದಲಿತರಲ್ಲಿಯೇ ಶೇ. 60% ರಷ್ಟು ಛಲವಾದಿ ಸಮಾಜದ ಜನರು ವಾಸವಿದ್ದು ಅದರಲ್ಲಿ ಹೆಚ್ಚಾಗಿ ಬಡವರು ಕೂಲಿಕಾರರು ಸ್ವಚ್ಛತೆ ಕೆಲಸ ಮಾಡುವವರು ಇದ್ದಾರೆ. ತಮ್ಮ ಯಾವುದೇ ಸಾಂಸ್ಕೃತಿಕ ಕಾರ್ಯಕ್ರಮ ಅಥವಾ ಇನ್ಯಾವುದೆ ಕಾರ್ಯಕ್ರಮ ಮಾಡಬೇಕಾದರೆ ತುಂಬ ಆರ್ಥಿಕ ಸಂಘಟ ಎದುರಿಸುತ್ತಿರುವುದರಿಂದ ಈಗಾಗಲೇ ತಮಗೆ ಹಲವಾರು ಬಾರಿ ಅರ್ಜಿಯನ್ನು ಸಲ್ಲಿಸಿರುತ್ತೇವೆ. ಆದರು ಸಹ ಬೆಳಗಾವಿ ನಗರದಲ್ಲಿ (ಉತ್ತರ ಕರ್ನಾಟಕದಲ್ಲಿ)ಚಲವಾದಿಸಾಂಸ್ಕೃತಿಕ ಭವನವನ್ನು ನಿರ್ಮಿಸಲು ಕ್ರಮವನ್ನು ತಗೆದುಕೊಂಡಿರುವದಿಲ್ಲ ಎಂದು ಆರೋಪಿಸಿದರು.

1998 ರಲ್ಲಿ ಜೆ.ಎಚ್. ಪಟೇಲರ ಸರ್ಕಾರದಲ್ಲಿ ಬ್ಯಾಕಲಾಗ್ ಹುದ್ದೆಯನ್ನು ನೇಮಕಾತಿ ಮಾಡಿಕೊಂ –2– ಡ ವಿಷಯ ಅತ್ಯಂತ ಶ್ಲಾಘನೀಯ ವಿಷಯವಾಗಿದೆ. ಆದರ ತದನಂತರ ಬಂದ ಸರ್ಕಾರದವರು ಬ್ಯಾಕಲಾಗ್ ಹುದ್ದೆ ಯನ್ನು ನೇಮಕಾತಿ ಮಾಡದೇ ದಲಿತರಿಗೆ ಸಾಕಷ್ಟು ಅನಾಯ ಮಾಡಿದ್ದಾರೆ. ಈಗ ಹಲಾವಾರು ವಿದ್ಯಾರ್ಥಿಗಳು ಡಿಪ್ಲೊಮಾ ಮತ್ತು ಬಿ.ಇ. ತಾಂತ್ರಿಕ ಪದವಿಗಳನ್ನು ಪಡೆದುಕೊಂಡಿರುತ್ತಾರೆ. ಆದರೆ ಕೆಲವು ಖಾಸಗಿ ಕಂಪನಿಗಳು ಜಾತಿ ಆಧಾರಿತ ನೇಮಕಾತಿ ಮಾಡಿಕೊಳ್ಳುವುದರಿಂದ ಹಲವಾರು ದಲಿತ ವಿದ್ಯಾರ್ಥಿಗಳು ಪ್ರತಿಭೆಯನ್ನು ಹೊಂದಿದ್ದರೂ ಸಹಿತ ಖಾಸಗಿ ಕಂಪನಿಗಳಲ್ಲಿ ನೇಮಕಾತಿ ಆಗದೇ ನಿರುದ್ಯೋಗಿಯಾಗಿ ಜೀವನ ನಡೆಸುವ ಕಠಿಣ ಪರಿಸ್ಥಿತಿ ನಿರ್ಮಾಣವಾಗಿದೆ. ಅದೇ ತರರ ಹಲವಾರು ವಿದ್ಯಾರ್ಥಿಗಳು ಬಿ.ಎ.ಬಿ.ಎಸ್.ಸಿ. ಮತ್ತು ಬಿ.ಎಡ್. ಪದವಿಗೆ ಳನ್ನು ಪಡೆದ ಹಲವಾಗ ವಿದ್ಯಾರ್ಥಿಗಳು ನಿರುದ್ಯೋಗಿಯಾಗಿ ಜೀವನವನ್ನು ಸಾಗಿಸುತ್ತಿದ್ದಾರೆ. ಆದ್ದರಿಂದ ತಾವು ಬೇಗನೆ ಎಲ್ಲ ಸರ್ಕಾರಿ ಕಚೇರಿಯಲ್ಲಿ ಖಾಲಿ ಉಳಿದಿರುವ ಎಲ್ಲ ಶ್ರೇಣಿಯ ಬ್ಯಾಕಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸಚಿವ ಸಂಪುಟದಲ್ಲಿ ಕ್ರಮವನ್ನು




ತಗೆದುಕೊಳ್ಳಬೇಕು ಎಂದ7ಉ ಒತ್ತಾಯಿಸಿದರು.

ಬೇಡಿಕೆಗಳು: ಬೆಳಗಾವಿ ನಗರದಿಂದ ಹಿರೇಬಾಗೇವಾಡಿ ಗ್ರಾಮದ ವರೆಗೆ ಸುವರ್ಣ ಸೌಧ ಎದುರಗಡೆ ರಾಷ್ಟ್ರೀಯ ಮಹಾಮಾರ್ಗವನ್ನು ಕನ್ನಡ ನಾಡಿನ ಹೆಮ್ಮೆಯ ವೀರ ವನಿತೆ ಓನಕೆ ಓಬ್ಬವನ ಹೆಸರನ್ನು ನಾಮಕರಣ ಮಾಡಬೇಕು, ಕರ್ನಾಟಕ ರಾಜ್ಯದಲ್ಲಿ ದಲಿತರಲ್ಲಿ ಹೆಚ್ಚಿನವರು ಛಲವಾದಿ ಸಮಾಜಕ್ಕೆ ಸೇರಿದವರಾಗಿದ್ದು ಅತಿ ಬಡವರು ಭೂ ರಹಿತರು ಮತ್ತು ವಿದ್ಯಾರ್ಥಿಗಳು ವಿದ್ಯೆಯನ್ನು ಕಲಿತರು ನಿರುದ್ಯೋಗಿಗಳಾಗಿದ್ದಾರೆ. ಔದಿಭಾರತ ರತ್ನ ಡಾ॥ ಬಾಬಾಸಾಹೇಬ ಅಂಬೇಡ್ಕರ ಪರಿಶಿಷ್ಟ ಜಾತಿ ಅಭಿವೃದ್ಧಿ ನಿಗಮದಲ್ಲಿ 102 ಪರಿಶಿಷ್ಟ ಜಾತಿ ಆದ ಕಾರಣ ಸದರಿ ನಿಗಮಕ್ಕೆ ಹಚ್ಚಿನ ಅನುಧಾನವನ್ನು ಮಂಜೂರು ಮಾಡಿ ನಮ್ಮ ಸಮಾಜದ ಯುವಕರ ನಿರುದ್ಯೋಗಗಳ ಸಮಸ್ಯೆಯನ್ನು ಬಗೆಹರಿ ಸಬೇಕು, ಕರ್ನಾಟಕ ರಾಜ್ಯದಲ್ಲಿ ಹೆಚ್ಚಿನ ಚಲವಾದಿ ಸಮಾಜದ ಜನರು ಹಳ್ಳಿಗಳಲ್ಲಿ ಕೃಷಿ ಕೂಲಿ ಮಾಡಿ ತಮ್ಮ ಕುಟುಬಂದ ಉಪಜೀವನವನ್ನು ನಡೆಸುತ್ತಿದ್ದಾರೆ ಅದು ಅಲ್ಲದೆ ಅವರಿಗೆ ಹಳ್ಳಿಗಳಲ್ಲಿ ಸರಿಯಾಗಿ ಕೂಲಿ ಕೆಲಸವು ಸಿಗುತ್ತಿಲ್ಲ ಇದರಿಂದ ಉತ್ತರ ಕರ್ನಾಟಕದಲ್ಲಿ ವಾಸಿಸುವ ಚಲವಾದಿ ಸಮಾಜದ ಹೆಚ್ಚಿನ ಜನರು ಮಹಾರಾಷ್ಟ್ರ, ಗೋವಾ ರಾಜ್ಯಗಳಲ್ಲಿ ಕೆಲಸದ ಸಲುವಾಗಿ ಗೂಳೆ ಹೋಗುತ್ತಾರೆ ಆದ್ದರಿಂದ ಭೂ ಒಡೆತನ ಯೋಜನೆಯಲ್ಲಿ ಸರ್ಕಾರವೇ ಭೂಮಿಗಳನ್ನು ಖರೀದಿ ಮಾಡಿ ಅರ್ಜಿಯನ್ನುಕರೆದು ಸರ್ವೆಯನ್ನು ಮಾಡಿಸಿ ಬಡ ಚಲವಾದಿ ಜನರಿಗೆ ಮಂಜೂರ ಮಾಡಲು ಕ್ರಮವನ್ನು ತಗೆದು ಕೊಳ್ಳಬೇಕು, ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಚಲವಾದಿ ಜನರಿಗೆ ಛಲವಾದಿ ಸಾಂಸ್ಕೃತಿಕ ಭವನದ ಸಲುವಾಗಿ 2ಎಕರೆ ಸರ್ಕಾರಿ ಜಮೀನವನ್ನು ಹಾಗೂ ಸದರಿ ಭವನವನ್ನು ಕಟ್ಟಲು ಐದು ಕೋಟಿ) ಹಣವನ್ನು ಮಂಜೂರು ಮಾಡಬೇಕು, ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಖಾಲಿ ಇರುವ ಬ್ಯಾಕಲಾಗ ಹುದ್ದೆಗಳನ್ನು ಬೇಗನೆ ಭರ್ತಿ ಮಾಡಬೇಕು, ಸುವರ್ಣ ಸೌರ್ಧ ಎದುರಗಡೆ ರಸ್ತೆಯನ್ನು ವೀರ ವನಿತೆ ಓನಕೆ ಓಬ್ಬಾ ಹೆಸರಿನಿಂದ ನಾಮಕರಣ ಮಾಡಬೇಕು, ಡಾ॥ ಬಿ.ಆರ್. ಅಂಬೇಡ್ಕರ ನಿಗಮ ಮಂಡಳಿಗೆ ಹೆಚ್ಚಿನ ಅನುದಾನವನ್ನು ಮಂಜೂರು ಮಾಡುವ ಕುರಿತು ಎಲ್ಲ ಛಲವಾದಿ ಬಡಜನರಿಗೆ ಉದ್ಯೋಗ ಮಾಡಲು ಅವಕಾಶವನ್ನು ಕಲ್ಪಿಸಬೇಕು, ಭೂ ಒಡೆತನ ಯೋಜನೆಯಲ್ಲಿ ಸರ್ಕಾರವೇ ಭೂಮಿಗಳನ್ನು ಖರೀದಿ ಮಾಡಿ ಅರ್ಜಿಯನ್ನು ಕರೆದು ಸರ್ವೆಯನ್ನು ಮಾಡಿಸಿ ಬಡ ಚಲವಾದಿ ಜನರಿಗೆ ಮಂಜೂರು ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ಹಣುಮಂತ ಮದಾಳೆಮಮ ಧನಪಾಲ ಅಗಸಿಮನಿ, ಸಂಜು ಕೋಲಕಾರ, ಆನಂದ ಚಲವಾದಿ, ಬಸವರಾಜ ಕೋಲಕಾರ, ಅರ್ಜುನ ಕಾಂಬಳೆ, ದೀಪಕ ಮೈತ್ರಿ, ಪರಶುರಾಮ ಕಾಂಬಳೆ, ಶೇಖರ ಕೋಲಕಾರ, ದತ್ತು ಕೋಲಕಾರ, ನಾರಾಯಣ ಕಾಂಬಳೆ, ನಾರಾಯಣ ಚಲವಾದಿ, ಮಂಜುಳಾ ಅಸೋದೇ ಸೇರಿದಂತೆ ಛಲವಾದಿ ಮಹಾಸಭಾ ಕಾರ್ಯಕರ್ತರು ಭಾಗವಹಿಸಿದ್ದರು.

# ಅರ್ಹ ದಂಪತಿಗಳು ದತ್ತು ಸ್ವೀಕರಿಸುವುದಕ್ಕೆ ಮನಸ್ಸು ಮಾಡಿದರೆ ದತ್ತು ನೀಡಲಾಗುವುದು: ಲಕ್ಷ್ಮೀ ಹೆಬ್ಬಾಳಕರ

ಬೆಳಗಾವಿ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ವಿಶೇಷ ದತ್ತು ಸ್ವೀಕಾರ ಕೇಂದ್ರಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಆರ್. ಹೆಬ್ಬಾಳಕರ ಅವರು ಡಿಸೆಂಬರ್ 11, 2023 ರಂದು ಭೇಟಿ ನೀಡಿ ದತ್ತು ಕೇಂದ್ರಕ್ಕೆ ಪ್ರಥಮವಾಗಿ ದಾಖಲಾಗಿರುವ ಎರಡು ಗಂಡು ಮಕ್ಕಳನ್ನು ತೊಟ್ಟಿಲಲ್ಲಿ ಹಾಕಿ ಒಂದು ಮಗುವಿಗೆ "ಶಿವಾ" ಹಾಗೂ ಮತ್ತೊಂದು ಮಗುವಿಗೆ "ಗುರು" ಎಂದು ನಾಮಕರಣ ಮಾಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಕಳೆದ ತಿಂಗಳು ದತ್ತು ಮಾಸಾಚರಣೆ ಆಚರಿಸಿದ್ದು, 6 ವರ್ಷದೊಳಗಿನ ಮಕ್ಕಳನ್ನು ದತ್ತು ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ www.cara.wcd.nic.in ವೆಬ್ ಸೈಟನಲ್ಲಿ ಅರ್ಜಿ ಸಲ್ಲಿಸಬೇಕು. ಯಾವ ಜಿಲ್ಲೆಯಲ್ಲಿ ಎಷ್ಟು ಮಕ್ಕಳು ದತ್ತು ನೀಡುವುದಕ್ಕೆ ಲಭ್ಯವಿದೆ



ಎಂಬ ಮಾಹಿತಿ ವೆಬ್‌ಸೈಟನಲ್ಲಿರುತ್ತದೆ. ದತ್ತು ಪಡೆಯುವುದಕ್ಕೆ ವೆಬ್‌ಸೈಟ್ ಮೂಲಕ ಅರ್ಜಿ ಹಾಕಿದವರಿಗೆ ಮಗು ಅಲಾಟ್ಮೆಂಟ ಆಗುತ್ತದೆ. ಅಷ್ಟೇ ಅಲ್ಲದೆ 6 ರಿಂದ 18 ವರ್ಷದ ವಯಸ್ಸಿನೊಳಗಿನ ಮಕ್ಕಳನ್ನು ಸಹ "ಪೋಷಕತ್ವ ಯೋಜನೆ" ಮೂಲಕ ದತ್ತು ಕೊಡಲಾಗುತ್ತದೆ ಹೇಳಿದರು.

ಈ ವರ್ಷ ಹಿರಿಯ ಮಕ್ಕಳ ದತ್ತು ಘೋಷ ವಾಕ್ಯದೊಂದಿಗೆ ಮಕ್ಕಳ ರಕ್ಷಣಾ ಘಟಕದ ಮೂಲಕ ವ್ಯಾಪಕವಾದ ಜಾಗೃತಿ ಮೂಡಿಸಲಾಗುತ್ತಿದೆ. ಸದ್ಯ ಜಿಲ್ಲೆಯ ಮೂರು ಹಿರಿಯ ಮಕ್ಕಳನ್ನು ಪೋಷಕತ್ವ ನೀಡಲಾಗಿದ್ದು. ದತ್ತು ನೀಡುವ ಪ್ರಕ್ರಿಯೆ ಮುಂದುವರೆದಿದೆ. ಮಕ್ಕಳ ರಕ್ಷಣಾ ಘಟಕದಡಿ ಕಾರ್ಯನಿರ್ವಹಿಸುತ್ತಿರುವ ಮಕ್ಕಳ ಪಾಲನಾ ಸಂಸ್ಥೆಯಲ್ಲಿ ಸುಮಾರು 150 ದೊಡ್ಡ ಮಕ್ಕಳಿದ್ದಾರೆ ಅರ್ಹ ದಂಪತಿ ಅಥವಾ ಪಾಲಕರು ದತ್ತು ಸ್ವೀಕರಿಸುವುದಕ್ಕೆ ಮನಸ್ಸು ಮಾಡಿದರೆ ದತ್ತು ನೀಡಲಾಗುವುದು ಎಂದರು.

ಬೆಳಗಾವಿಯ ಮಕ್ಕಳ ಪಾಲನಾ ಸಂಸ್ಥೆಗಳಿಂದ ಈವರೆಗೆ 131 ಮಕ್ಕಳನ್ನು ದತ್ತು ನೀಡಲಾಗಿದೆ. ಇದರಲ್ಲಿ 119 ಮಕ್ಕಳನ್ನು ಸ್ವದೇಶಿ ಹಾಗೂ 12 ಮಕ್ಕಳನ್ನು ವಿದೇಶಿ ದಂಪತಿಗಳಗೆ (ಅಮೇರಿಕ, ಆಸ್ಟ್ರೇಲಿಯಾ ಹಾಗೂ ಮಾಲ್ಟಾಗೆ) ದತ್ತು ನೀಡಲಾಗಿದ್ದು, ದತ್ತು ನೀಡುವ ಯೋಜನೆ ವಿದೇಶಗಳಿಗೂ ವ್ಯಾಪಿಸಿದೆ. ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ, ಕೇರಳಕ್ಕೆ ಮಕ್ಕಳು ದತ್ತು ಹೋಗಿದ್ದಾರೆ. ಇದೇ ವರ್ಷ ಸೆ.26 2023 ರಿಂದ ನಗರದಲ್ಲಿ ಸರ್ಕಾರಿ ವಿಶೇಷ ದತ್ತು ಸ್ವೀಕಾರ ಕೇಂದ್ರ ಪ್ರಾರಂಭವಾಗಿದೆ. ಎಂದು ತಿಳಿಸಿದರು.

ಸದರಿ ಕಾರ್ಯಕ್ರಮದಲ್ಲಿ ಮುಖಂಡರಾದ ಮಹಾಂತೇಶ ಮತ್ತಿಕೊಪ್ಪ, ಸದ್ದಾಂ ಮಾರಿಹಾಳ, ಜೆ. ಬಿ. ಬಾಗೋಜಿಕೊಪ್ಪ, ರವೀಂದ್ರ ರತ್ನಾಕರ (ಪಿ.ಆರ್.ಒ,), ಉಪನಿರ್ದೇಶಕರಾದ ನಾಗರಾಜ ಆರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಮಹಾಂತೇಶ ಭಜಂತ್ರಿ, ಜಿಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳಾದ ಸಚೀನ ಹಿರೇಮಠ, ಜೆ.ಟಿ.ಲೋಕೇಶ, ಎಸ್.ಎಂ. ಜನವಾಡೆ, ಮಹೇಶ ಸಂಗಾನಟ್ಟಿ, ಮಲ್ಲೇಶ ಕುಂದರಗಿ, ರಾಜಕುಮಾರ ರಾಠೋಡ, ಮೇಘಾ ಕಾನಟ್ಟಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ; ಸರ್ಕಾರಿ ವಿಶೇಷ ದತ್ತು ಕೇಂದ್ರ ಹಾಗೂ ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಹಾಜರಿದ್ದರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ವಿವಿಧ ಸೌಲಭ್ಯ ನೀಡಲು ಆಗ್ರಹಿಸಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿ ಪ್ರತಿಭಟನೆ



ಬೆಳಗಾವಿ: ಪರಿಶಿಷ್ಟ ಜಾತಿಗಳ ಒಳಮೀಸಲಾತಿಯ ಪರಿಷ್ಕೃತ ಆದೇಶದೊಂದಿಗೆ ಕೇಂದ್ರಕ್ಕೆ ಶಿಪಾರಸ್ಸು ಮಾಡಿ ಎಸ್.ಸಿ.ಪಿ., ಟಿ.ಎಸ್.ಪಿ. ಸೇರಿದಂತೆ ನಾನ್ ಸ್ಟೆಚ್ಯುಟರಿ ಆರ್ಥಿಕ ಸೌಲಭ್ಯಗಳಿಗೂ ಒಳಮೀಸಲಾತಿಯನ್ನು ವಿಸ್ತರಿಸಿ ಆದೇಶಿಸಲು ಆಗ್ರಹಿಸಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿ ಪ್ರತಿಭಟನೆ ನಡೆಸಿತು.

ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಪರಿಷ್ಕೃತ ಆದೇಶವನ್ನು ಕೇಂದ್ರಕ್ಕೆ ಸಲ್ಲಿಸಬೇಕೆಂದು ಮತ್ತು ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಅನುಪಾತ ಶೇ. 6%, ಶೇ. 5.5%, ಶೇ. 4.5% ಮತ್ತು ಶೇ. 1.00 ರಂತೆ ಎಸ್.ಸಿ.ಪಿ. ಟಿ.ಎಸ್.ಪಿ. ಸೇರಿದಂತೆ ಎಲ್ಲಾ ಆರ್ಥಿಕ ಸೌಲಭ್ಯಗಳಿಗೂ ವಿಸ್ತರಿಸಿ ಆದೇಶಿಸಬೇಕೆಂದು ಹೋರಾಟ ಸಮಿತಿ ಆಗ್ರಹಿಸಿತು.

# ವಿವಿಧ ಬೇಡಿಕೆ ಈಡೇರಿಸುವಂತೆ ರೈತರ ಪ್ರತಿಭಟನೆ

ಬೆಳಗಾವಿ: ರೈತರ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸುವರ್ಣಸೌಧದ ಎದು ಎದುರು ಕರ್ನಾಟಕ ರಾಜ್ಯ ರೈತ ಸಂಘಟನೆಗಳಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ನಿರತ ರೈತರು ಮಾತನಾಡಿ, ದನಕರುಗಳಿಗೆ ತೀವ್ರ ತೊಂದರೆ ಅನುಭವಿಸುತ್ತಿದ್ದು ತಮಗೂ ಗೊತ್ತಿರುವ ಸಂಗತಿ. ಇಂತಹದರಲ್ಲಿ ರೈತ ಬೆಳೆದಂತ ಬೆಳೆಗಳಿಗೆ ನಿಗದಿತ ಬೆಲೆ ಸಿಗದೇ ಇರುವುದು ಕೃಷಿ ಸಂಬಂದಿಸಿದ ಗೊಬ್ಬರ ಇನ್ನು ಮುಂತಾದವುಗಳ ಬೆಲೆಗಳು ಗಗನಕ್ಕೆ ಏರಿರುವುದರಿಂದ ರೈತ ಕಂಗಾಲಾಗಿದ್ದಾನೆ. ಎಷ್ಟೋ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು ದು:ಖದ ಸಂಗತಿ ಇಂತಹದರಲ್ಲಿ ಮಾನ್ಯರಾದ ತಾವುಗಳು ರೈತರ



ಕಷ್ಟ ಸುಖಗಳ ಬಗ್ಗೆ ಕಾಳಜಿ ವಹಿಸಿ ಪರಿಹಾರ ಮಾಡುತ್ತಿರಿ ಅನ್ನುವ ಭರವಸೆ ನಮ್ಮ ರೈತರಿಗೆ ಇದೆ. ಕಾರಣ ತಮ್ಮ ಸರಕಾರ ಗ್ಯಾರಂಟಿ ಅನ್ನುವ ಯೋಜನೆ ಮಾಡಿರುವುದರಿಂದ ಕೃಷಿ ಚಟುವಟಿಕೆ ಮಾಡಲು ಕೂಲಿ ಜನರು ಸಿಗದಂತೆ ಪರಿಸ್ಥಿತಿ ಬಂದಿದೆ. ಶೀಘ್ರವೇ ರೈತರ ಎಲ್ಲ ಬೇಡಿಕೆಗಳನ್ನು ಇಡೇರಿಸಬೇಕು ಎಂದುರು.

ಬೇಡಿಕೆಗಳು : ರೈತರ ಸಾಲ ಸಂಪೂರ್ಣ ಮನ್ನಾ ರಾಷ್ಟ್ರೀಕೃತ ಬ್ಯಾಂಕ ಸರಕಾರಿ ಸಂಘಗಳು ಸ್ತ್ರೀ ಶಕ್ತಿ ಸ್ವಸಹಾಯ ಸಂಘಗಳ ಸಾಲ ಮನ್ನಾ ಮಾಡುವುದು, ರೈತರ ಜಮೀನುಗಳಿಗೆ ಹಗಲು ವೇಳೆ ನಿರಂತರ 3 ಪೇಸ್ ವಿದ್ಯುತ ಪೂರೈಕೆ ರಾತ್ರಿ ವೇಳೆ ಸಿಂಗಲ್ ಪೇಸ್ ವಿದ್ಯುತ ಕೊಡುವುದಾಗಬೇಕು, ರೈತರಿಗೆ ಇಂಧನ ಇಲಾಖೆಯಿಂದ ಮೂಲಭೂತ ಸೌಕರ್ಯಗಳನ್ನು ಯಥಾಸ್ಥಿತಿ ಮುಂದುವರಿಸಬೇಕು, ರೈತರ ಕೃಷಿ ಕಾಯ್ದೆ ರದ್ದು ಮಾಡಬೇಕು, ಬರಗಾಲದಿಂದ ತತ್ತರಿಸುವ ರೈತರ ಖಾತೆಗೆ ಪ್ರತಿ ಎಕರೆಗೆ 50000/– ರೂ. ಪರಿಹಾರ ಕೊಡಬೇಕು, ರೈತರ ಜಮೀನುಗಳಿಗೆ ಹೋಗಿ ಬರಲು ಸರಕಾರಿ ಕಾಲು ದಾರಿ ಇರುವ ಮಾರ್ಗಗಳನ್ನು ರಸ್ತೆಯಾಗಿ ಮಾಡಿಕೊಡಬೇಕು, ನರೇಗಾ ಯೋಜನೆಯಡಿಯಲ್ಲಿ ರೈತರಿಗೆ ಪ್ರತಿ ಎಕರೆಗೆ 50– ಜನ ಕೂಲಿ ಕಾರ್ಮಿಕರನ್ನು ಒದಗಿಸುವುದು, ಬರಗಾಲದಿಂದ ಜಾನುವಾರಗಳಿಗೆ ಮೇವು ಕೊರತೆ ನಿಗಿಸಲು ಮೇವು ಬ್ಯಾಂಕ ತೆರೆಯಬೇಕು. 9. ಕೇಂದ್ರ ಸರಕಾರ ಕಿಸಾನ ಸಮ್ಮಾನ ಯೋಜನೆಡಿಯಲ್ಲಿ 6000–ರೂ ಜೊತೆಗೆ ರಾಜ್ಯ ಸರಕಾರ ನೀಡುತ್ತಿದ್ದ 4000/–ರೂ ಯೋಜನೆಯನ್ನು ಜಾರಿ ಮಾಡಬೇಕು.

10.ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ನೀಡಿ ಹಾಗೂ ಸರಕಾರವೇ ರೈತರಿಂದ ಬೆಳೆಗಳನ್ನು ಖರೀದಿಸಬೇಕು, ಸರಕಾರಿ ಹಾಗೂ ಖಾಸಗಿ ಕಾರ್ಖಾನೆಗಳಲ್ಲಿ ರೈತರ ಮಕ್ಕಳ ಹೆಚ್ಚಾಗಿ ಕೆಲಸ ಮಾಡುತ್ತಿದ್ದು ಅವರಿಗೆ ಸೂಕ್ತ ಉದ್ಯೋಗ ಭದ್ರತೆ ಒದಗಿಸಬೇಕು, ಇದಕ್ಕಿಂತ ಮೊದಲಾಗಿ ಕೃಷಿ ಪ್ರಧಾನವಾದ ನಮ್ಮಲ್ಲಿ ಎಲ್ಲರಿಗೂ. ಐ.ಎ.ಉ ಯಿಂದ ಹಿಡಿದು ಕ.ಉ ವರೆಗೆ ಉಚಿತ ಶಿಕ್ಷಣ ನೀಡಬೇಕು ಎಂಬಿತ್ಯಾಸಿ ಬೇಡಿಕೆಗಳನ್ನು ಮುಂದಿರಸಲಾಗಿದೆ. ಪ್ರತಿಭಟನೆಯಲ್ಲಿ ನೂರಾರು ಸಂಖ್ಯೆಯಲ್ಲಿ ರೈತರು ಭಾಗವಹಿಸಿದ್ದರು.

# ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಗಳಿಂದ ಉದ್ಯೋಗಾವಕಾಶ: ಸತೀಶ ಜಾರಕಿಹೊಳಿ

ಬೆಳಗಾವಿ: ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳಗಳಿಂದ ಮಾರುಕಟ್ಟೆ ಲಭ್ಯತೆ ಹಾಗೂ ಸುಮಾರು ಜನರಿಗೆ ಉದ್ಯೋಗಾವಕಾಶ ಲಭಿಸುವುದು ಎಂದು ಲೋಕೋಪಯೋಗಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಮತ್ತು ಸಣ್ಣ ಉದ್ಯಮ ಇಲಾಖೆವತಿಯಿಂದ ಇತ್ತಿಚಿಗೆ ನಗರದ ಕ್ಲಬ್ ರೋಡ್ ಇಲ್ಲಿ ಮೂರು ದಿನಗಳ ಕಾಲ ಫಲ–ಪುಷ್ಪ ಪ್ರದರ್ಶನ ಹಾಗೂ ಕೈಗಾರಿಕಾ ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿತ್ತು.



ಸದರಿ ಪ್ರದರ್ಶನದಲ್ಲಿ ಗ್ರಾಮೀಣ ಕುಶಲಕರ್ಮಿ ಉತ್ಪನ್ನಗಳು, ಸ್ವ–ಸಹಾಯ ಸಂಘದ ಸದಸ್ಯರಿಂದ ತಯಾರಾದ ಉತ್ಪನ್ನಗಳು, ಸಣ್ಣ ಕೈಗಾರಿಕಾ ಘಟಕಗಳ ಉತ್ಪನ್ನಗಳನ್ನು ಮಾರಾಟ ಮಾಡಲಾಯಿತು ಹಾಗೂ ಕುಂಬಾರಿಕೆ ಉದ್ಯಮದ ಕುರಿತು ಕುಶಲಕರ್ಮಿಯೊಬ್ಬರು ಸಚಿವರ ಸಮ್ಮುಖದಲ್ಲಿ ಪ್ರಾಯೋಗಿಕ ಪ್ರದರ್ಶನ ನೀಡಿದರು.

ಜಿಲ್ಲಾಧಿಕಾರಿಗಳಾದ ನಿತೇಶ ಪಾಟೀಲ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸತ್ಯನಾರಾಯಣ ಭಟ್, ಗ್ರಾಮೀಣ ಕೈಗಾರಿಕೆ ಉಪ ನಿರ್ದೇಶಕರಾದ ರವಿಂದ್ರ ಮದಿಹಳ್ಳಿ ಹಾಗೂ ಇಲಾಖಾಧಿಕಾರಿಗಳು ಉಪಸ್ಥಿತರಿದ್ದರು ಎಂದು ಪ್ರಕಟಣೆಯಲ್ಲಿ ತಿಳಿಸಿಸಲಾಗಿದೆ.

# ವಿಶ್ವಬ್ಯಾಂಕ್ ನರೆವಿನ "ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆ ಪ್ರಗತಿ ಪರಿಶೀಲನಾ ಸಭೆ

ಬೆಳಗಾವಿ: ಹುಬ್ಬಳ್ಳಿ–ಧಾರವಾಡ ಮತ್ತು ಕಲಬುರಗಿ ಮಹಾನಗರ ಪಾಲಿಕೆ ವ್ಯಾಪ್ತಿಯ ಜನವಸತಿ ಪ್ರದೇಶಗಳಲ್ಲಿ ನಿರಂತರ ಕುಡಿಯುವ ನೀರು ಸರಬರಾಜು ಮಾಡುವ ಕಾರ್ಯವನ್ನು ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಮೂಲಕ ಎಲ್ ಅಂಡ್ ಟಿ ಸಂಸ್ಥೆ ಗುತ್ತಿಗೆ ಪಡೆದಿದ್ದು ಸಮರ್ಪಕವಾಗಿ ಕೆಲಸ ನಿರ್ವಹಿಸದ ಕಾರಣ ಸಚಿವರಾದ ಶ್ರೀ ಬೈರತಿ ಸುರೇಶ ಅವರು ಅಸಮಾಧಾನ ವ್ಯಕ್ತಪಡಿಸಿದರು.

ಹೆಸರಿಗಷ್ಟೆ ದೊಡ್ಡ ಸಂಸ್ಥೆ, ಆದರೆ ಕಾಮಗಾರಿಗಳು ಕಳಪೆ ಮಟ್ಟದ್ದಾಗಿದ್ದು. ಅದನ್ನು ಸರಿಪಡಿಸುವ ಕೆಲಸ ಆಗಬೇಕು ಎಂದು ಮಾನ್ಯ ಸಚಿವರು ತಾಕೀತು ಮಾಡಿದರು.

ಕಾಮಗಾರಿಗಳು ಗುಣಮಟ್ಟ ದಿಂದ



ಕೂಡಿದರೆ ಮಾತ್ರ ಬಾಕಿ ಇರುವ ಬಿಲ್ ಅನ್ನು ಪಾವತಿಸಲು ಅಧಿಕಾರಿಗಳಿಗೆ ಸೂಚಿಸಿದರು

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಾಲ್ಕು ತಿಂಗಳಾದರೂ ಪೈಪ್ ಲೈನ್ ಹಾಕಲ ಸಾಧ್ಯವಾಗದಿರಲೂ ಕಾರಣವೇನು ಎಂದು ಪ್ರಶ್ನಿಸಿದ ಸಚಿವರು ಸಮಸ್ಯೆ ಇದ್ದಲ್ಲಿ ತಿಳಿಸಿ ಎಂದು ಸೂಚಿಸಿದರು. ಅದಕ್ಕೆ ಉತ್ತರಿಸಿದ ಎಲ್ ಅಂಡ್ ಟಿ ಸಂಸ್ಥೆಯವರು ಇದೇ ತಿಂಗಳ 22ರ ಒಳಗೆ ಪೈಪ್ ಗಳು ಬರಲಿದೆ ಎಂದಾಗ, ಅದರ ಮೇಲೆ ನಿಗಾ ವಹಿಸಲು ಅಧಿಕಾರಿಗಳಿಗೆ ಶ್ರೀ ಬೈರತಿ ಸುರೇಶ ಅವರು ಸೂಚಿಸಿದಲ್ಲದೆ, ಇದೇ ಶನಿವಾರ ನಮ್ಮ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಲಿದ್ದಾರೆ ಎಂದು ತಿಳಿಸಿದರು.

ಅಳವಡಿಸಿರುವ ಕಳಪೆ ಗುಣಮಟ್ಟದ ಪೈಪ್ ಗಳನ್ನು ತೆಗೆದು ಉತ್ತಮ ಗುಣಮಟ್ಟದ ಪೈಪ್ ಗಳನ್ನು ಅಳವಡಿಸಲು ಗುತ್ತಿಗೆ ಪಡೆದ ಸಂಸ್ಥೆಗೆ ತಾಕೀತು ಮಾಡಿದರು.

ಮತ್ತೆ ಒಂದು ತಿಂಗಳಲ್ಲಿ ಸಭೆ ನಡೆಸಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಲಾಗುತ್ತದೆ.

ನಡೆದಿರುವ ಕಾಮಗಾರಿಯಲ್ಲಿ ಮತ್ತೆ ಕಳಪೆ ಕಂಡಲ್ಲಿ ಕ್ರಮ ಜರುಗಿಸುವ ಎಚ್ಚರಿಕೆಯನ್ನು ಶ್ರೀ ಬೈರತಿ ಸುರೇಶ ಅವರು ನೀಡಿದರು.

ಸಭೆಯಲ್ಲಿ ಭಾಗವಹಿಸಿದ್ದ ಮೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಿಧಾನ ಸಭಾ ಕ್ಷೇತ್ರದ ಶಾಸಕರುಗಳಾದ ಅಲ್ಲಮಪ್ರಭು ಪಾಟೀಲ, ಎನ್.ಹೆಚ್. ಕೋನರೆಡ್ಡಿ, ಅಬ್ಬಯ್ಯ ಉಅ ಪ್ರಸಾದ್, ವಿನಯ್ ಕುಲಕರ್ಣಿ, ಅಭಯ್ ಪಾಟೀಲ, ಮಹೇಶ್ ತೆಂಗಿನಕಾಯಿ ಸಹ ಎಲ್ ಅಂಡ್ ಟಿ ಸಂಸ್ಥೆ ನಡೆಸಿರುವ ಕಾಮಗಾರಿ ತೃಪ್ತಿ ತಂದಿಲ್ಲ ಎಂದರು.

ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಡಾ.ಎಂ.ಎನ್. ಅಜಯ್ ನಾಗಭೂಷಣ, ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ದೀಪ ಚೋಳನ್, ಪೌರಾಡಳಿತ ನಿರ್ದೇಶನಾಲಯ ನಿರ್ದೇಶಕ ಪ್ರಭುಲಿಂಗ ಕವಳಿಕಟ್ಟಿ, ಕೆಯುಐಡಿಎಫ್ಸಿ ಜಂಟಿ ನಿರ್ದೇಶಕ ಲಕ್ಷ್ಮೀಕಾಂತ ರೆಡ್ಡಿ, ಬೆಳಗಾವಿ, ಹುಬ್ಬಳ್ಳಿ –ಧಾರವಾಡ ಮತ್ತು ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರು ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಮಾವಾಸ್ಯೆಯ ಅನುಭಾವ ಗೋಷ್ಠಿ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಜಿಲ್ಲಾ ಘಟಕ ಅಮವಾಸ್ಯೆಯ ಅನುಭಾವಗೋಷ್ಠಿ, ಮಂಗಳವಾರ ದಿನಾಂಕ 12–12–2023 ರಂದು ಸಾಯಂಕಾಲ 5.00 ಗಂಟೆಗೆ, ಲಿಂಗಾಯತ ಭವನ, ಶಿವಬಸವ ನಗರ ಬೆಳಗಾವಿಯಲ್ಲಿ ಜರುಗುವುದು.

ಶ್ರೀ ಮ.ನಿ.ಪ್ರ.ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು, ಕಾರಂಜಿಮಠ, ಬೆಳಗಾವಿ ಇವರು ಸಾನಿಧ್ಯ ವಹಿಸುವರು.

ಶರಣ. ಪ್ರೊ.ಬಿ.ಜಿ.ಜಾವೂರ. ಕೆ.ಎಲ್.ಇ. ಪದವಿ ಕಾಲೇಜು. ಅಂಕಲಿ. ತಾ/ಚಿಕ್ಕೋಡಿ. ಇವರು "ಸಾಮಾಜೀಕರಣದಲ್ಲಿ ಶರಣರ ತಾತ್ವಿಕ ನಿಲುವುಗಳು" ಎಂಬ ವಿಷಯದ ಮೇಲೆ ಅನುಭಾವ ನೀಡಲಿದ್ದಾರೆ. ಜಿಲ್ಲಾಧ್ಯಕ್ಷರಾದ ಶ್ರೀಮತಿ ರತ್ನಪ್ರಭಾ ಬೆಲ್ಲದ ಇವರು ಅಧ್ಯಕ್ಷತೆ ವಹಿಸುವರು.

ಕಾರಣ ಎಲ್ಲ ಬಸವಾಭಿಮಾನಿಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಅಮವಾಸ್ಯೆಯ ಅನುಭಾವಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಪ್ರಧಾನ ಕಾರ್ಯದರ್ಶಿಗಳು ವಿನಂತಿಕೊಂಡಿದ್ದಾರೆ.

# ಯುವಕರು ಮಾತ್ರ ಸಮಾಜ ಮತ್ತು ದೇಶವನ್ನು ಉನ್ನತಿಗೊಯ್ಯಲು ಸಾಧ್ಯ: ಅಮಿತ್ ಶಾ

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ 69 ನೇ ರಾಷ್ಟ್ರೀಯ ಸಮಾವೇಶದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಕೇಂದ್ರ ಗೃಹ ಮತ್ತು ಸಹಕಾರ ಮಂತ್ರಿ ಮತ್ತು ಭಾರತೀಯ ಜನತಾ ಪಕ್ಷದ ಹಿರಿಯ ನಾಯಕ ಅಮಿತ್ ಶಾ ಮಾತನಾಡುತ್ತಾ "ಭಾರತೀಯ ವಿದ್ಯಾರ್ಥಿ ಪರಿಷದ್ (ಎಬಿವಿಪಿ) ಕೇವಲ ಒಂದು ಸಂಸ್ಥೆಯಾಗಿಲ್ಲ, ಅದು ರಾಷ್ಟ್ರವನ್ನು ಸುಧಾರಿಸುವ ಚಳುವಳಿಯಾಗಿದೆ" ಎಂದರು.

ಪ್ರಧಾನಿ ನರೇಂದ್ರ ಮೋದಿಯವರು ಮುಂದಿನ 25 ವರ್ಷಗಳಲ್ಲಿ ಭಾರತವನ್ನು ವಿಶ್ವದಲ್ಲಿಯೇ ಅತ್ಯುತ್ತಮ ರಾಷ್ಟ್ರವನ್ನಾಗಿ ನಿರ್ಮಿಸುವ ಪ್ರತಿಜ್ಞೆಯನ್ನು ಮಾಡಿದ್ದಾರೆ.

ಇದನ್ನು ಸಾಧಿಸಲು ನಾವು ನಿರ್ಧರಿಸಿದ್ದೇವೆ ಮತ್ತು ಅದಕ್ಕೆ ಬದ್ಧರಾಗಿದ್ದೇವೆ.

ತನ್ನ ವೃತ್ತಿಜೀವನದೊಂದಿಗೆ ದೇಶವನ್ನು ಪೋಷಿಸುವ ಯುವಕರು, ಮಾತ್ರ ನಿಜವಾದ ಅರ್ಥದಲ್ಲಿ ಶಿಕ್ಷಣವನ್ನು ಪಡೆದಿದ್ದಾರೆ ಎಂದರು.

"ಹೋರಾಟದ ದೃಷ್ಟಿಯಿಂದ ನೋಡುವುದಾದರೆ ಎಬಿವಿಪಿ, ಶಿಕ್ಷಣ ವ್ಯವಸ್ಥೆಯಲ್ಲಿನ ನ್ಯೂನತೆಗಳ ವಿರುದ್ಧ ಮಾತ್ರ ಹೋರಾಡಿದಲ್ಲದೆ.

ವ್ಯಕ್ತಿತ್ವಗಳ ನಿರ್ಮಾಣಕ್ಕೆ ತನ್ನನ್ನು ಸಮರ್ಪಿಸಿಕೊಂಡಿದೆ. ಎಬಿವಿಪಿ ತನ್ನ ಪ್ರಮುಖ ತತ್ವಗಳಾದ ಜ್ಞಾನ, ಪಾತ್ರ, ಮತ್ತು ಏಕತೆಯನ್ನು ಜೋಡಿಸುವ ಮಾರ್ಗವನ್ನು ತಾಳ್ಮೆಯಿಂದ ನಿರ್ಮಿಸಿಕೊಂಡು ತನ್ನ ಮೂಲಭೂತ ಮಂತ್ರವನ್ನು ಅಳವಡಿಸಿಕೊಂಡಿದೆ.

ಬಿಜೆಪಿಯ ಅನುಭವಿ ನಾಯಕ ಅಮಿತ್ ಶಾರವರು, ಯುವಕರು ಯಾವುದೇ ರಾಷ್ಟ್ರದ ಬೆನ್ನೆಲುಬಾಗಿದ್ದಾರೆ ಮತ್ತು ದೇಶವನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯುವಲ್ಲಿ ಪ್ರಮುಖ ಪಾತ್ರ



ವಹಿಸುತ್ತಾರೆ ಎಂದು ದೃಡವಾದ ನಂಬಿಕೆಯನ್ನು ಹೊಂದಿದ್ದಾರೆ. ರಾಷ್ಟ್ರೀಯ ಅಭಿವೃದ್ಧಿಯ ನಿರಂತರ ಅನ್ವೇಷಣೆಯಲ್ಲಿ ವಿದ್ಯಾರ್ಥಿಗಳ ನಿರ್ಣಾಯಕ ಪಾತ್ರವನ್ನು ಒತ್ತಿಹೇಳುತ್ತಾ ಅಮಿತ್ ಶಾ ಭಾರತವು ಎಲ್ಲಾ ರಂಗಗಳಲ್ಲಿಯೂ ಸ್ವಯಂ–ಅವಲಂಬನೆ ಮತ್ತು ಸಮೃದ್ಧಿಯನ್ನು ತಲುಪುವ ತನಕ ಯುವಕರ ಮಹತ್ತರ ಕೊಡುಗೆ ಆಗಬೇಕೆಂದು ಹೇಳಿದರು.

ಮೋದಿ ನಾಯಕತ್ವದಲ್ಲಿ ಮತ್ತು ಅಮಿತ್ ಶಾ ಅವರ ಸಮರ್ಥ ಮಾರ್ಗದರ್ಶನದಲ್ಲಿ, ಭಾರತವು ಇಂದು ಯಾವ ಹಂತಕ್ಕೆ ತಲುಪಿದೆ ಎಂದರೆ, ಪ್ರಪಂಚವು ಪ್ರತಿ ಸಮಸ್ಯೆಯ ಪರಿಹಾರಕ್ಕಾಗಿ ಭಾರತದೆಡೆಗೆ ತಿರುಗಿ ನೋಡುವತ್ತ ತಲುಪಿದೆ.

ದೇಶದಾದ್ಯಂತ, ಶಾ ಅವರ ನಾಯಕತ್ವದಲ್ಲಿ, ಪತ್ತೆ ಹಚ್ಚುವಿಕೆ, ಅಳಿಸುವಿಕೆ, ಮತ್ತು ಗಡೀಪಾರು ಮಾಡುವ '3ಆ ರೆಸಲ್ಯೂಶನ್' ಮೂಲಕ ಒಳನುಸುಳುವಿಕೆಯ ವಿರುದ್ಧ ಸಾರ್ವಜನಿಕ ಜಾಗೃತಿ ಮೂಡಿಸುವಲ್ಲಿ ಎಬಿವಿಪಿಯು ಗಮನಾರ್ಹ ಪಾತ್ರ ವಹಿಸಿದೆ ಎಂದು ವ್ಯಾಪಕವಾಗಿ ಗುರುತಿಸಲಾಗಿದೆ. ಭಾಷೆ ಮತ್ತು ಶಿಕ್ಷಣಕ್ಕಾಗಿ ಅಥವಾ ಸಾಂಸ್ಕೃತಿಕ ಪರಂಪರೆಯನ್ನು ಕಾಪಾಡಿಕೊಳ್ಳುವುದು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಯುವಕರ ಮೂಲಕ 'ಸ್ವಯಂ' ಪ್ರಾಮುಖ್ಯತೆಯನ್ನು ವಿದ್ಯಾರ್ಥಿ ಪರಿಷತ್ ಪರಿಣಾಮಕಾರಿಯಾಗಿ ಸಂವಹಿಸಿದ್ದಾರೆ.

ಕಳೆದ ಒಂಭತ್ತು ವರ್ಷಗಳಲ್ಲಿ, ಮೋದಿ–ಶಾ ಜೋಡಿಯು ಸಾಂಸ್ಕೃತಿಕ ಪರಂಪರೆಯನ್ನು ಪುನರುಜ್ಜೀವನಗೊಳಿಸುವ ಜೊತೆಗೆ ಆಧುನಿಕ ಬೆಳವಣಿಗೆಗೆ ಅಡಿಪಾಯ ಹಾಕಿದೆ.

ನಮ್ಮ ಸಾಂಸ್ಕೃತಿಕ ಪರಂಪರೆಯು ಸಮಕಾಲೀನ ಪ್ರಗತಿಗೆ ತಳಪಾಯದಂತೆ ಕಾರ್ಯನಿರ್ವಹಿಸಿ, ಆಧುನಿಕ ಬೆಳವಣಿಗೆಗೆ ಏಳಿಗೆಯಾಗುವ ಆಧಾರವನ್ನು ರೂಪಿಸುತ್ತದೆ.

ಸಾಂಸ್ಕೃತಿಕ ಪರಂಪರೆಯನ್ನು ಸಂರಕ್ಷಿಸುವ ಮತ್ತು ಆಧುನಿಕತೆಯನ್ನು ಅಪ್ಪಿಕೊಳ್ಳುವ ನಡುವೆ ಪ್ರದರ್ಶಿತವಾಗುವ ಸಾಮ್ಯತೆ ಎರಡು ವಿರೋಧಾತ್ಮಕ ಎಂಬ ಕಲ್ಪನೆಯನ್ನು ಅಳಿಸಿ; ಬದಲಿಗೆ, ಅವರು ಪರಸ್ಪರ ಚೇತೋಹಾರಿ ಎಂದು ಸಾಬೀತು ಪಡಿಸುತ್ತದೆ.

ಮೋದಿ–ಶಾ ಯುಗದಲ್ಲಿ, ದೇಶವು ಭ್ರಷ್ಟಾಚಾರ ಮುಕ್ತ ಹಗರಣಗಳಿಂದ ಹೊಸ ನೀತಿಗಳ ಅನುಷ್ಠಾನಕ್ಕೆ ಸಾಕ್ಷಿಯಾಗಿದೆ.

ಕಾರ್ಯಕ್ಷಮತೆ ಆಧಾರಿತ ರಾಜಕೀಯದ ಒಂದು ಮಾದರಿಯು ಓಲೈಕೆಯ, ಕೌಟುಂಬಿಕ ಮತ್ತು ಜಾತಿ ಆಧಾರಿತ ರಾಜಕೀಯವನ್ನು ಬದಲಿಸಿದೆ. ಮೋದಿ ಮತ್ತು ಶಾ ನಾಯಕತ್ವದಲ್ಲಿ ಹೊಸ ಭಾರತವು ಸಮರ್ಥರ ಕೇಯಲ್ಲಿದೆ ಎಂಬ ಅಂಶವನ್ನು ನಿರಾಕರಿಸಲಾಗುವುದಿಲ್ಲ.

# 70 ವರ್ಷಗಳ ಕಾಲ ನಿರಾಶ್ರಿತರಾಗಿದ್ದ ಕಾಶ್ಮೀರಿಗಳಿಗೆ ಹಕ್ಕುಗಳು ಮತ್ತು ಪ್ರಾತಿನಿಧ್ಯವನ್ನು ನೀಡುವ ಮಸೂದೆಯನ್ನು ಮಂಡಿಸಿದ ಅಮಿತ್ ಶಾ

ಸ್ವಾತಂತ್ರ್ಯದ ನಂತರ ಜಮ್ಮು ಮತ್ತು ಕಾಶ್ಮೀರವು ಭಾರತೀಯ ಒಕ್ಕೂಟದೊಂದಿಗೆ ಏಕೀಕರಣಗೊಂಡಾಗಿನಿಂದ, ಹಲವು ಏರಿಳಿತಗಳು ಸಂಭವಿಸಿವೆ. 1980 ರ ದಶಕದಲ್ಲಿ ಭಯೋತ್ಪಾದನೆಯ ಅಲೆಯು ಜಮ್ಮು ಮತ್ತು ಕಾಶ್ಮೀರವನ್ನು ಅಪ್ಪಳಿಸಿತು. ಶತಮಾನಗಳ ಕಾಲ ತಮ್ಮ ಭೂಮಿಯಲ್ಲಿ ಶಾಂತಿಯುತವಾಗಿ ವಾಸಿಸುತ್ತಿದ್ದ ಜನರನ್ನು ಬೇರುಸಹಿತ ಕಿತ್ತುಹಾಕಲಾಯಿತು ಮತ್ತು ಸತತವಾಗಿ ಬಂದ ಸರ್ಕಾರಗಳು ಅವರ ಕಾಳಜಿಯನ್ನು ನಿರ್ಲಕ್ಷಿಸಿದವು. ಆ ಸಮಯದಲ್ಲಿ ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡಲು ಪರಿಣಾಮಕಾರಿ ಕ್ರಮಗಳು ಮತ್ತು ಶಕ್ತಿಯನ್ನು ಅನ್ವಯಿಸಿದ್ದರೆ, ಅನೇಕ ಕಾಶ್ಮೀರಿಗಳು ತಮ್ಮ ತಾಯ್ನಾಡನ್ನು ತೊರೆಯಬೇಕಾಗಿರಲಿಲ್ಲ. ಸಹಾನುಭೂತಿಯ ರಾಜಕೀಯಕ್ಕೆ ಹೆಸರಾದ ಅಮಿತ್ ಶಾ ಅವರು ಡಿಸೆಂಬರ್ 6, 2023 ರಂದು ಲೋಕಸಭೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ (ತಿದ್ದುಪಡಿ) ಮಸೂದೆ, 2023 ಮತ್ತು ಜಮ್ಮು ಮತ್ತು ಕಾಶ್ಮೀರ ಮೀಸಲಾತಿ (ತಿದ್ದುಪಡಿ) ಮಸೂದೆ, 2023 ಅನ್ನು ಮಂಡಿಸಿದರು.

ಯಾವುದೇ ಸಮಾಜದಲ್ಲಿ, ಅಳವಿನಂಚಿನಲ್ಲಿರುವ ವ್ಯಕ್ತಿಗಳನ್ನು ಮೇಲಕ್ಕೆತ್ತುವುದು ಭಾರತೀಯ ಸಂವಿಧಾನದ ಮೂಲಭೂತ ತತ್ವವಾಗಿದೆ. ಅವಕಾಶ ವಂಚಿತರ ಕಾರಣವನ್ನು ಮುನ್ನಡೆಸುವಲ್ಲಿ ಸಹಾಯಕ್ಕಿಂತ ಗೌರವವು ಹೆಚ್ಚು ಮುಖ್ಯವಾಗಿದೆ. ಜಮ್ಮು ಮತ್ತು ಕಾಶ್ಮೀರ ಮೀಸಲಾತಿ ಕಾಯಿದೆಯನ್ನು ತಿದ್ದುಪಡಿ ಮಾಡುವಲ್ಲಿ, ಮೋದಿ ಸರ್ಕಾರವು ಕೇವಲ ಮೀಸಲಾತಿಗಳನ್ನು ಒದಗಿಸುವ ಗುರಿಯನ್ನು ಹೊಂದಿರದೆ ಆ ವ್ಯಕ್ತಿಗಳನ್ನು ಗೌರವಿಸಲು 'ಇತರ ಹಿಂದುಳಿದ ವರ್ಗ' ಎಂಬ ಸಾಂವಿಧಾನಿಕ ಪದವನ್ನು ಪರಿಚಯಿಸಿತು.

ಕಾಕಾ ಸಾಹೇಬ್ ಕಾಲೇಲ್ಕರ್ ಆಯೋಗದಿಂದ ಮಂಡಲ್ ಆಯೋಗದವರೆಗೆ ಕಾಂಗ್ರೆಸ್ ಸರ್ಕಾರದ ಇತಿಹಾಸವನ್ನು ಅವಲೋಕಿಸಿದರೆ, ಹಿಂದುಳಿದ ವರ್ಗದ ಮೀಸಲಾತಿಯನ್ನು ಬದಿಗಿಟ್ಟಿರುವುದು ಸ್ಪಷ್ಟವಾಗುತ್ತದೆ. ಕಳೆದ ಒಂಬತ್ತು ವರ್ಷಗಳಲ್ಲಿ, ಮೋದಿಯವರ ಸರ್ಕಾರದಲ್ಲಿ ಅಮಿತ್ ಶಾ ನೇತೃತ್ವದಲ್ಲಿ, ಹಿಂದುಳಿದ



ವರ್ಗದವರಿಗೆ ಮೀಸಲಾತಿ ಕಲ್ಪಿಸಲು ಮತ್ತು ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಪ್ರಯತ್ನಗಳನ್ನು ಮಾಡಲಾಗಿದೆ.

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ, ಆಗಸ್ಟ್ 5 ಮತ್ತು 6, 2019 ರಂದು, ಗೃಹ ಸಚಿವ ಅಮಿತ್ ಶಾ ಅವರು ವಿಧಿ 370ಅನ್ನು ರದ್ದುಪಡಿಸುವ ಮೂಲಕ, ವರ್ಷಗಳ ಕಾಲ ನಿರ್ಲಕ್ಷದಿಂದ ತುಳಿತಕ್ಕೊಳಗಾಗಿದ್ದ ವ್ಯಕ್ತಿಗಳ ಧ್ವನಿಯನ್ನು ಆಲಿಸಲಾಯಿತು.

ವಿಧಿ 370 ರ ನಂತರ, ಕಾಶ್ಮೀರದಲ್ಲಿ ಭಯೋತ್ಪಾದಕ ಘಟನೆಗಳು ಗಣನೀಯವಾಗಿ ಕಡಿಮೆಯಾಗಿದೆ ಎಂದು ಇಡೀ ದೇಶಕ್ಕೆ ತಿಳಿದಿದೆ. ಭದ್ರತಾ ಪಡೆಗಳ ಮರಣ ಪ್ರಮಾಣ ಕಡಿಮೆಯಾಗಿದೆ,

ವರ್ಷಗಳ ನಂತರ ಕಣಿವೆಯಲ್ಲಿ ಚಿತ್ರಮಂದಿರಗಳು ಮತ್ತೆ ತೆರೆದಿವೆ ಮತ್ತು ಲಾಲ್ ಚೌಕ್ನಲ್ಲಿ ತ್ರಿವರ್ಣ ಧ್ವಜವು ಹೆಮ್ಮೆಯಿಂದ ಬೀಸುತ್ತಿದೆ.

ವಿಧಿ 370 ರ ತೆಗೆದುಹಾಕುವಿಕೆಯಿಂದ ವಿಚಲಿತರಾಗಿರುವವರು ಈ ಮಸೂದೆಯು ನ್ಯಾಯಾಂಗದ ಡಿಲಿಮಿಟೇಶನ್ ಅನ್ನು ಒಳಗೊಂಡಿದೆ ಎಂಬುದನ್ನು ಅರ್ಥಮಾಡಿ ಕೊಳ್ಳಬೇಕು. ಡಿಲಿಮಿಟೇಶನ್ ಪ್ರಕ್ರಿಯೆಯೇ ಪವಿತ್ರವಾಗದಿದ್ದರೆ, ಪ್ರಜಾಪ್ರಭುತ್ವವು ಪವಿತ್ರವಾಗಿ ಉಳಿಯಲು ಸಾಧ್ಯವಿಲ್ಲ. ಆದ್ದರಿಂದ, ಮಸೂದೆಯು ನ್ಯಾಯಾಂಗ ಡಿಲಿಮಿಟೇಶನ್ನ ನಿಬಂಧನೆಗಳನ್ನು ಒಳಗೊಂಡಿದೆ.

ಡಿಲಿಮಿಟೇಶನ್ ಇತಿಹಾಸದಲ್ಲಿ ಮೊದಲ ಬಾರಿಗೆ, ಒಂಬತ್ತು ಸ್ಥಾನಗಳನ್ನು ಪರಿಶಿಷ್ಟ ಪಂಗಡಗಳಿಗೆ ಮೀಸಲಿಡಲಾಗಿದೆ ಮತ್ತು ಪರಿಶಿಷ್ಟ ಜಾತಿಗಳಿಗೂ ಸೀಟುಗಳ ಮೀಸಲಾತಿಯನ್ನು ಏರ್ಪಡಿಸಲಾಗಿದೆ. ಜಮ್ಮುವಿನಲ್ಲಿ, ಸೀಟುಗಳನ್ನು 37 ರಿಂದ 43 ಕ್ಕೆ ಮತ್ತು ಕಾಶ್ಮೀರದಲ್ಲಿ 46 ರಿಂದ 47 ಕ್ಕೆ ಹೆಚ್ಚಿಸಲಾಗಿದೆ. ಹೆಚ್ಚುವರಿಯಾಗಿ, ಪಾಕ್ ಆಕ್ರಮಿತ ಕಾಶ್ಮೀರದ 24 ಸ್ಥಾನಗಳನ್ನು ಕಾಯ್ದಿರಿಸಲಾಗಿದೆ.

ಈ ಹಿಂದೆ, ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ 107 ಸ್ಥಾನಗಳಿದ್ದವು; ಈಗ ಅದನ್ನು 114ಕ್ಕೆ ಹೆಚ್ಚಿಸಲಾಗಿದೆ. ಹಿಂದೆ ಇಬ್ಬರು ನಾಮನಿರ್ದೇಶಿತ ಸದಸ್ಯರಿದ್ದರು; ಈಗ, ಐವರು ನಾಮನಿರ್ದೇಶಿತ ಸದಸ್ಯರಿರುತ್ತಾರೆ.

ಜಮ್ಮು ಮತ್ತು ಕಾಶ್ಮೀರದ ಕಾನೂನುಗಳ ಪ್ರಕಾರ, ಇಬ್ಬರು ಮಹಿಳೆಯರನ್ನು ರಾಜ್ಯಪಾಲರು ನಾಮನಿರ್ದೇಶನ ಮಾಡುತ್ತಾರೆ; ಈಗ, ಕಾಶ್ಮೀರಿ ಭೂಪ್ರದೇಶದಿಂದ ಒಬ್ಬ ಮಹಿಳೆ ಮತ್ತು ಪಾಕಿಸ್ತಾನ–ಆಡಳಿತದ ಕಾಶ್ಮೀರದಿಂದ ಒಬ್ಬರು ಸಹ ನಾಮನಿರ್ದೇಶನಗೊಳ್ಳುತ್ತಾರೆ.

ಭಾರತೀಯ ಜನತಾ ಪಕ್ಷದ ವರಿಷ್ಠ ನಾಯಕ, ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರ ಪ್ರಯತ್ನಗಳನ್ನು ನೋವು ಅನುಭವಿಸಿದ ಮತ್ತು ಹಿಂದುಳಿದ ಪ್ರತಿಯೊಬ್ಬ ಕಾಶ್ಮೀರಿಯು ನೆನಪಿಸಿಕೊಳ್ಳುತ್ತಾರೆ. ವರ್ಷಗಳ ಕಾಲ ತಮ್ಮದೇ ದೇಶದಲ್ಲಿ ಅಲೆದಾಡುತ್ತಿರುವವರಿಗೆ ನ್ಯಾಯ ಒದಗಿಸಲು, ಭಾರತ ಸರ್ಕಾರವು ಎರಡು ಸ್ಥಾನಗಳನ್ನು ಕಾಯ್ದಿರಿಸಿದೆ ಮತ್ತು ಪಾಕಿಸ್ತಾನ–ಆಡಳಿತದ ಕಾಶ್ಮೀರದಿಂದ ನಿರಾಶ್ರಿತರಿಗೆ ಮೀಸಲಾತಿಯನ್ನು ನೀಡಿದೆ. ಮೋದಿ ಸರಕಾರವೂ ಮಸೂದೆಯಲ್ಲಿ 'ದುರ್ಬಲ ವಿಭಾಗ'ದ ಬದಲಿಗೆ 'ಹಿಂದುಳಿದ ವರ್ಗ' ಎಂಬ ಸಾಂವಿಧಾನಿಕ ಪದವನ್ನು ನೀಡುವ ಮೂಲಕ ದುರ್ಬಲರಿಗೆ ಸಾಂವಿಧಾನಿಕ ಘನತೆಯನ್ನು ನೀಡುವ ಕೆಲಸವನ್ನು ಮಾಡಿದೆ.

ಮೋದಿ ಮತ್ತು ಶಾ ಜೋಡಿಯು ಕಳೆದ ಒಂಬತ್ತು ವರ್ಷಗಳಲ್ಲಿ ದೇಶಕ್ಕೆ ತಂದ ಹಲವಾರು ಪರಿವರ್ತನೆಗಳ ಸರಮಾಲೆಯಲ್ಲಿ ಇದು ಅಮೂಲ್ಯವಾದ ಸೇರ್ಪಡೆ. ಇದು ಸ್ಥಳಾಂತರಗೊಂಡವರ ಕಣ್ಣೀರನ್ನು ಪರಿಣಾಮಕಾರಿಯಾಗಿ ಒರೆಸಿದೆ.

# 13 ರಂದು ಬಿಜೆಪಿ ಬೃಹತ ಹೋರಾಟ: ಎನ್. ರವಿಕುಮಾರ

ಬೆಳಗಾವಿ: ರಾಜ್ಯದಲ್ಲಿ ತೀವ್ರ ಬರದಿಂದ ಬಳಲಿರುವ ರೈತರ ಮೇಲೆ ಈ ಸರಕಾರ ಬರೆ ಎಳೆಯುತ್ತಿದೆ; ಬರಗಾಲ ನಿರ್ವಹಣೆಯಲ್ಲಿ ಅದು ಸಂಪೂರ್ಣ ವಿಫಲವಾಗಿದೆ ಎಂದು ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಸದಸ್ಯ ಎನ್. ರವಿಕುಮಾರಅವರು ಆಕ್ಷೇಪಿಸಿದರು.

ಬೆಳಗಾವಿಯಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರಿಗೆ ಮೊದಲೇ ವಿದ್ಯೂತ ಕೊರತೆ ಇದೆ. ನಾವು 7 ಗಂಟೆ ವಿದ್ಯುತ ಕೊಡುತ್ತಿದ್ದೆವು, ಈ ಸರಕಾರ 5 ಗಂಟೆಯಷ್ಟೂ ವಿದ್ಯುತ ಸರಬರಾಜು ಮಾಡುತ್ತಿಲ್ಲ. ಹೊಸ ಬೋರವೆಲ ಕೊರೆಸಿದಾಗ ವಿದ್ಯುತ ಸಂಪರ್ಕಕ್ಕೆ 2 ರಿಂದ 3 ಲಕ್ಷಖರ್ಚಾಗುತ್ತದೆ. ಆ ಖರ್ಚನ್ನು ರೈತರೇ ಕೊಡಬೇಕೆಂದು ಸರಕಾರ ತಿಳಿಸಿದೆ ಎಂದು ಕಿಡಿಕಾರಿದರು.

ರೈತರು, ಬಡವರ ಮೇಲೆ ಬರೆ ಹಾಕುವ ಸರಕಾರ ಇದು ಎಂದು ಟೀಕಿಸಿದ ಅವರು, ಶಾಸಕರಿಗೆ ಅನುದಾನ ಕೊಡುತ್ತಿಲ್ಲ. ಕೃಷ್ಣಾ, ಕಳಸಾ ಬಂಡೂರಿ ಸೇರಿ ಉತ್ತರ ಕರ್ನಾಟಕದ




ಯಾವುದೇ ನೀರಾವರಿ ಯೋಜನೆಗೆ ಒಂದು ನಯಾ ಪೈಸೆಯನ್ನೂ ಕೊಟ್ಟಿಲ್ಲ. ಆರು ತಿಂಗಳಾದರೂ ಒಂದು ಕಿಮೀ ರಸ್ತೆ ಮಾಡಿಲ್ಲ. ರೈತರು, ಉತ್ತರ ಕರ್ನಾಟಕದ ಬಗ್ಗೆ ಕಳಕಳಿರಹಿತ, ಅಭಿವೃದ್ಧಿ ಶೂನ್ಯ ಸರಕಾರಇದುಎಂದು ಆರೋಪಿಸಿದರು.

ಈ ಎಲ್ಲ ವಿಷಯಗಳನ್ನು ಅಧಿವೇಶನದಲ್ಲಿ ಚರ್ಚೆಗೆ ಕೈಗೆತ್ತಿಕೊಳ್ಳಲು ಆಗ್ರಹಿಸಿ ಇದೇ 13 ರಂದು ನಾವು ಬೆಳಗಾವಿಯಲ್ಲಿ ಬೃಹತ ಹೋರಾಟ ನಡೆಸುತ್ತೇವೆ. 25 ಸಾವಿರಕ್ಕೂ ಹೆಚ್ಚು ರೈತರು, ಬಡವರು, ಯುವಕರು, ಮಹಿಳೆಯರು, ಕಾರ್ಮಿಕರು ಹೋರಾಟಕ್ಕೆ ಆಗಮಿಸಲಿದ್ದಾರೆ. ರಾಜ್ಯದ ರೈತ ನಾಯಕ, ಹಿರಿಯ ಮುಖಂಡ, ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಸದಾನಂದ ಗೌಡ, ಮಾಜಿ ಡಿಸಿಎಂಗಳಾದ ಶ್ರೀ. ಗೋವಿಂದ ಕಾರಜೋಳ, ಈಶ್ವರಪ್ಪ, ಮಾಜಿ ಸಚಿವ ಶ್ರೀರಾಮುಲು ಮತ್ತಿತರ ಮುಖಂಡರು ಭಾಗವಹಿಸುತ್ತಾರೆಎಂದು ತಿಳಿಸಿದರು.

ರಾಜ್ಯಾಧ್ಯಕ್ಷ ವಿಜಯೇಂದ್ರ, ವಿಪಕ್ಷ ನಾಯಕ ಆರ್.ಅಶೋಕ, ಸ್ಥಳೀಯ ಸಂಸದರು, ಶಾಸಕರು ಭಾಗವಹಿಸುತ್ತಾರೆ. ಈ ಸರ್ಕಾರಕ್ಕೆ ಬಾರುಕೋಲಿನ ಏಟ್ಟು, ಛಡಿಏಟ್ಟು ಕೊಡುವ ಆಂದೋಲನವನ್ನು ನಾವು 13 ರಂದು ಮಾಡಲಿದ್ದೇವೆಎಂದು ವಿವರಿಸಿದರು.

ಈ ಸರ್ಕಾರ ಸಂಪೂರ್ಣ ವಿಫಲವಾಗಿದೆ. ಈ ಸರ್ಕಾರ, ಎಸ್‌ಸಿ, ಎಸ್‌ಟಿ, ಒಬಿಸಿಗಳ ಸರ್ಕಾರ. ಎಸ್‌ಸಿ ಎಸ್‌ಟಿಗಳ ಅಭಿವೃದ್ಧಿಗೆ ಮೀಸಲಿಟ್ಟ 34 ಸಾವಿರಕೋಟಿ ಹಣದಲ್ಲಿ 11,500 ಕೋಟಿ ಹಣವನ್ನು ಬೇರೆ ಇಲಾಖೆಗೆ ವರ್ಗಾಯಿಸಿದೆ. ದೇವರಾಜ ಅರಸು ನಿಗಮ, ಅಂಬೇಡ್ಕರ ನಿಗಮ, ಜಗಜೀವನರಾಂ ನಿಗಮ, ಅಂಬಿಗರ ಚೌಡಯ್ಯ ನಿಗಮ ಸೇರಿ ಅನೇಕ ಒಬಿಸಿ ನಿಗಮಗಳಿಗೆ ಒಂದು ಪೈಸೆ ಕೊಟ್ಟಿಲ್ಲಎಂದು ಆಕ್ಷೇಪಿಸಿದರು. ಈ ಸರ್ಕಾರಕ್ಕೆ ಪ್ರಥಮ ಆದ್ಯತೆಯೇ ಅಲ್ಪಸಂಖ್ಯಾತರು ಎಂದು ಟೀಕಿಸಿದರು.

ಇದನ್ನು ಪ್ರಶ್ನೆ ಮಾಡಿ ಭಾರೀ ದೊಡ್ಡ ಆಂದೋಲನ ನಡೆಯಲಿದೆ ಎಂದರು. ಬಿಜೆಪಿ ರಾಜ್ಯ ವಕ್ತಾರ ಎಂ.ಬಿ. ಜಿರಲಿ, ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಮತ್ತು ಮಾಜಿ ಶಾಸಕ ಸಂಜಯ ಪಾಟೀಲ, ಬೆಳಗಾವಿ ಮಹಾನಗರಅಧ್ಯಕ್ಷ ಮತ್ತು ಮಾಜಿ ಶಾಸಕ ಅನಿಲ ಬೆನಕೆ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿರಾದಾರ, ಮುಖಂಡರವಿ ಪಾಟೀಲ, ಜಿಲ್ಲಾ ಮಾಧ್ಯಮ ಸಂಚಾಲಕ ಶರದ ಪಾಟೀಲ ಅವರು ಈ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿದ್ದರು.

## ಪ್ರತಿಭಟನೆಯ ಸ್ಥಳ ಪರಿಶೀಲನೆ

ಬೆಳಗಾವಿ: ದಿನಾಂಕ 13–12–2023 ರಂದು ಮಾಲಿನಿ ಸಿಟಿ ಯಡಿಯೂರಪ್ಪ ಮಾರ್ಗ ಬೆಳಗಾವಿಯಲ್ಲಿ ನಡೆಯಲಿರುವ ರಾಜ್ಯ ಕಾಂಗ್ರೇಸ ಸರ್ಕಾರದ ವಿರುದ್ಧದ "ಬೃಹತ ಹೋರಾಟದ" ಬಗ್ಗೆ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಶ್ರೀ. ರವಿಕುಮಾರಅವರ ನೇತೃತ್ವದಲ್ಲಿ ಪತ್ರಿಕಾ ಗೊಷ್ಠಿ ನಡೆಸಿ ಸ್ಥಳ ಪರಿಶೀಲನೆ ಮಾಡಲಾಯಿತು.



## ವಿವಿಧ ಬೇಡಿಕೆ ಈಡೇರಿಕೆಗೆ ಉ.ಕ ಅಂಜುಮನ್ ಎ ಇಸ್ಲಾಮ್ ಒತ್ತಾಯ



ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಉ.ಕ ಅಂಜುಮನ್ ಎ ಇಸ್ಲಾಮ್ ವತಿಯಿಂದ ಸುವರ್ಣಸೌಧದ ಎದುರು ಸೋಮವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಉ.ಕ ಅಂಜುಮನ್ ಎ ಇಸ್ಲಾಮ್ ಕೋಶಾಧಿಕಾರಿ ಅಬ್ದುಲ್ ವಾಹಿದ್ ಅತ್ತಾರ್ ಮಾತನಾಡಿ, 4%ರಿಂದ 8% ಕೋಟಾ ಹೆಚ್ಚಳದೊಂದಿಗೆ 2ಬಿ ಮೀಸಲಾತಿ ಮರುಸ್ಥಾಪಿಸಬೇಕು, ವಿಮಾನ ನಿಲ್ದಾಣ ಸಮೀಪ ಹುಬ್ಬಳ್ಳಿಯಲ್ಲಿ ಹಜ್ ಭವನ ನಿರ್ಮಾಣ ಮಾಡಬೇಕು, ಉತ್ತರ ಕರ್ನಾಟಕದಲ್ಲಿ ಉರ್ದು ವಿಶ್ವವಿದ್ಯಾಲಯ ಸ್ಥಾಪನೆ ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರಕ್ಕೆ ಒತ್ತಾಯಿಸಿದರು.

ಪ್ರತಿಬಟನೆಯಲ್ಲಿ ಹಂಇದ ಕೊಪ್ಪದ, ಜೆ.ಎನ್. ಗಲಗಲಿ, ಎ.ಬಿ ಅತ್ತಾರ, ಎ. ಎಂ. ಮುಲ್ಲಾ, ಆರೀಫ್ ಇನಾಂದಾರ ಸೇರಿದಂತೆ ಇತರರು ಭಾಗವಹಿಸಿದ್ದರು.

## ಸುವರ್ಣಸೌಧದ ಅಂಗಳದಲ್ಲಿ ಕರ್ನಾಟಕ ಸಂಭ್ರಮ–50
## ಡಿ.12 ರಂದು ಆಳ್ವಾಸ್ 'ವಿರಾಸತ್–ನುಡಿಸಿರಿ'

ಬೆಳಗಾವಿ: ಸುವರ್ಣ ವಿಧಾನ ಸೌಧ ಡಿ.08: ಮೈಸೂರ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 2023ಕ್ಕೆ 50 ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಈಗಾಗಲೇ ವಿವಿಧ ಕಾರ್ಯಕ್ರಮಗಳು ನಡೆಯುತಿದ್ದು, ಅದರಂತೆ ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಸಹ ಡಿಸೆಂಬರ್ 12ರಂದು ಸಂಜೆ 6 ಗಂಟೆಗೆ ಕರ್ನಾಟಕ ಸಂಭ್ರಮ–50ರ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವಿಧಾನಸಭೆಯ ಅಧ್ಯಕ್ಷರಾದ ಯು.ಟಿ.ಖಾದರ್ ಅವರು ಹೇಳಿದರು.

ಸುವರ್ಣವಿಧಾನಸೌಧದಲ್ಲಿ ಡಿಸೆಂಬರ್ 8ರಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಕಾರ್ಯಕ್ರಮದ ಬಗ್ಗೆ ಈಗಾಗಲೇ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳಿಗೆ ತಿಳಿಸಿದ್ದು ಕಾರ್ಯಕ್ರಮದ ಸಿದ್ಧತೆಯು ಭರ್ಜರಿಯಾಗಿ ನಡೆದಿದೆ. ಅಂದು 1 ಗಂಟೆ ವೇದಿಕೆ ಕಾರ್ಯಕ್ರಮ ಮತ್ತು 2 ಗಂಟೆಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಅವರು ತಿಳಿಸಿದರು.

ಅಂದಿನ ಕಾರ್ಯಕ್ರಮದಲ್ಲಿ ರಾಜ್ಯಪಾಲರು, ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಸೇರಿದಂತೆ ಸಚಿವ ಸಂಪುಟದ ಎಲ್ಲ ಸದಸ್ಯರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಎಲ್ಲ ಗಣ್ಯರು ಉಪಸ್ಥಿತರಿರುವರು. ಈ ಕಾರ್ಯಕ್ರಮದಲ್ಲಿ ವಿಧಾನ ಮಂಡಲದ ಹಿಂದಿನ ಎಲ್ಲ ವಿಧಾನಸಭೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತನ ಸಭಾಪತಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ ಸನ್ಮಾನಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.

ನಾಡಿನಾದ್ಯಂತ ಹೆಸರು ಮಾಡಿದ, ಮೂಡುಬಿದಿರೆಯಲ್ಲಿ ಪ್ರತಿ ಬಾರಿ ನಡೆಯುವ ಆಳ್ವಾಸ ವಿರಾಸತ್ ಮತ್ತು ಆಳ್ವಾಸ ನುಡಿಸಿರಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಡಿಸೆಂಬರ್ 12ರಂದು ಸುವರ್ಣ ವಿಧಾನಸೌಧದ ಅಂಗಳದಲ್ಲಿ ಆಯೋಜಿಸಿ ಉತ್ತರ ಕರ್ನಾಟಕ ಭಾಗದ ಜನತೆಗೆ ದಕ್ಷಿಣ ಕರ್ನಾಟಕ ಭಾಗದ ಸಾಂಸ್ಕೃತಿಕ ಕಾರ್ಯಕ್ರಮಗಳ ವೀಕ್ಷಣೆಗೆ ವಿಶೇಷ ಅವಕಾಶ ಕಲ್ಪಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಬೆಳಗಾವಿ ಜಿಲ್ಲೆ ಸೇರಿದಂತೆ ಈ ಭಾಗದ ಎಲ್ಲಾ ಜಿಲ್ಲೆಗಳ ಸಾರ್ವಜನಿಕರಿಗೆ ಮುಕ್ತ ಆಹ್ವಾನ ನೀಡಲಾಗಿದೆ. ವಿದ್ಯಾರ್ಥಿ ಯುವಜನರು, ಮಹಿಳೆಯರು, ಮಕ್ಕಳು, ನೌಕರರು ಸೇರಿದಂತೆ ಎಲ್ಲಾ ಸಾರ್ವಜನಿಕರಿಗೆ ಕಾರ್ಯಕ್ರಮಕ್ಕೆ ಸೂಕ್ತ ಸಾರಿಗೆ ವ್ಯವಸ್ಥೆ ಮತ್ತು ಊಟದ ವ್ಯವಸ್ಥೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಸುವರ್ಣ ವಿಧಾನಸೌಧವು ಉತ್ತರ ಕರ್ನಾಟಕ ಭಾಗದ ಜನರ ಸ್ವಾಭಿಮಾನದ ಸಂಕೇತವಾಗಿದೆ. ಈ ಸೌಧದ ನಿರ್ಮಾಣದಿಂದ ಈ ಭಾಗದ ಎಷ್ಟೋ ಸಮಸ್ಯೆಗಳಿಗೆ ಪರಿಹಾರ ದೊರೆಕಿದೆ. ಈ ಭಾಗದ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಲು ಸಾಧ್ಯವಾಗಿದೆ. ಸಾರ್ವಜನಿಕರ ಒತ್ತಾಸೆಯಂತೆ ಸುವರ್ಣ ವಿಧಾನಸೌಧದ ಪೂರ್ಣ ಬಳಕೆಯ ಬಗ್ಗೆ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕಾರ್ಯಯೋಜನೆ ರೂಪಿಸಲಾಗುವುದು ಎಂದು ಅವರು ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

**ಹೊಸ ಪರಂಪರೆ:**

ವಾಡಿಕೆಯಂತೆ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ನಡೆಯುತ್ತಿರುವ ಈ ಸಂದರ್ಭದಲ್ಲಿ ಈ ಭಾರಿಯ ಅಧಿವೇಶನದ ವಿಶೇಷತೆಯಾಗಿ ಕರ್ನಾಟಕ ಸಂಭ್ರಮ–50ರ ಕಾರ್ಯಕ್ರಮ ರೂಪಿಸಲು ನಿರ್ಧರಿಸಿದ್ದೇವೆ. ಅಧಿವೇಶನ ಸಂದರ್ಭದಲ್ಲಿ ನಾಡುನುಡಿಗೆ ಸಂಬಂಧಿಸಿದ ಕಾರ್ಯಕ್ರಮ ರೂಪಿಸುತ್ತಿರುವುದು ಹೊಸ ಪರಂಪರೆಯಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಇದೆ ವೇಳೆ ತಿಳಿಸಿದರು. ನಾಡುನುಡಿಯ ಅಭಿಮಾನದ ಈ ಕಾರ್ಯಕ್ರಮಕ್ಕೆ ಸರ್ವ ಶಾಸಕರಿಗೂ ಆಹ್ವಾನ ನೀಡಿದ್ದೇವೆ. ಎಲ್ಲ ಗಣ್ಯಮಾನ್ಯರಿಗೂ ಸರ್ವ ಜನರಿಗೂ ಈ ಮೂಲಕ ಆಹ್ವಾನ ನೀಡುತ್ತಿದ್ದೇವೆ ಎಂದು ಅವರು ತಿಳಿಸಿದರು. ಅಂದು ನಡೆಯುವ ಕಾರ್ಯಕ್ರಮದಲ್ಲಿ 350ಕ್ಕೂ ಹೆಚ್ಚು ಜನ ಕಲಾವಿದರು ಭಾಗಿಯಾಗಲಿದ್ದು ಉತ್ತರ ಕರ್ನಾಟಕ ಭಾಗದ ಜನರು ಈ ಕಾರ್ಯಕ್ರಮಕ್ಕೆ ಆಗಮಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸವಿಯನ್ನು ಸವಿಯಲು ಅವಕಾಶ ಕಲ್ಪಿಸಲಾಗಿದೆ ಎಂದರು. ಈ ಭಾರಿಯ ಅಧಿವೇಶನದಲ್ಲಿ ಹೋರಾಟಗಳ ಸಂಖ್ಯೆ ಕಡಿಮೆಯಾಗಿದೆ. ಡಿಸೆಂಬರ್ 4ರಿಂದ ನಡೆದ ಕಲಾಪಗಳಲ್ಲಿ ವಿವಿಧ ವಿಷಯಗಳ ಮೇಲೆ ಆರೋಗ್ಯಕರ ಚರ್ಚೆಯಾಗಿದೆ ಎಂದು ಹೊರಟ್ಟಿ ಅವರು ತಿಳಿಸಿದರು.

## ಅಬಕಾರಿ ಅಧಿಕಾರಿಗಳಿಂದ ಮದ್ಯ ನಾಶ



ಬೆಳಗಾವಿ: ಜಿಲ್ಲಾ ಅಬಕಾರಿ ಇಲಾಖೆ ಅಧಿಕಾರಿಗಳು ವಶ ಪಡಿಸಿಕೊಂಡಿದ್ದ ಲಕ್ಷಾಂತರ ರೂ. ಮೌಲ್ಯದ ಅಕ್ರಮ ಮದ್ಯವನ್ನು ಭಾನುವಾರ ನಗರದ ಹೊರವಲಯದಲ್ಲಿ ನಾಶ ಪಡಿಸಿದರು.

ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ನಗರದ ಬಸವನಕೊಳ್ಳ ವ್ಯಾಪ್ತಿಯಲ್ಲಿಅಬಕಾರಿ ಅಧಿಕಾರಿಗಳ ಸಮ್ಮುಖದಲ್ಲಿ ಅಬಕಾರಿ ಸಿಬ್ಬಂದಿ ಲಕ್ಷಾಂತರ ಮೌಲ್ಯದ ಅಕ್ರಮ ಮದ್ಯವನ್ನು ಸುರಿಯುವ ಮೂಲಕ ನಾಶ ಪಡಿಸಿದರು. ನಾಶ ಪಡಿಸಿದ ಮದ್ಯದಲ್ಲಿ ವಿಸ್ಕಿ, ಬ್ರಾಂದಿ, ರಮ್ ಹಾಗೂ ಬಿಯರ್ ಕಳ್ಳಬಟ್ಟಿ ಸೇರಿದಂತೆ ಹಲವು ಮಾದರಿಯ ಮದ್ಯವಿತ್ತು. ಚುನಾವಣೆ ವೇಳೆ ಬೆಳಗಾವಿ ಮತ್ತು ಚಿಕ್ಕೋಡಿ ಜಿಲ್ಲೆ ವಾಪ್ತಿಯಲ್ಲಿ ಮದ್ಯವನ್ನು ಮುಟ್ಟಗೋಳು ಹಾಕಿಕೊಳ್ಳಲಾಗಿತ್ತು.

5148 ಲೀಟರ್ ಮದ್ಯ, 566 ಲೀಟರ್ ಬಿಯರ್, 1588 ಕಳ್ಳಬಟ್ಟಿ ಸಾರಾಯಿ, 141 ಲೀಟರ್ ಗೋವಾ ಮದ್ಯವನ್ನು ವಶಪಡಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡು ಒಟ್ಟು 254 ಪ್ರಕರಣಗಳಲ್ಲಿ ಮದ್ಯ ಬಾಟಲುಗಳನ್ನು ಜಪ್ತಿ ಮಾಡಿಲಾಗಿತ್ತು. ಅಬಕಾರಿ ಉಪ ಆಯುಕ್ತರ ಆದೇಶದ ಮೇರೆಗೆ ಬೆಳಗಾವಿ ಸಮೀಪದ ಬಸವನಕೊಳ್ಳ ವ್ಯಾಪ್ತಿಯಲ್ಲಿ ಗುಂಡಿ ತೆಗೆದು ಅದಕ್ಕೆ ಬಾಟಲಿಯಲ್ಲಿ ಹಾಗೂ ಪೌಚುಗಳಲ್ಲಿದ್ದ ಮದ್ಯವನ್ನು ಸುರಿದು ಬಳಿಕ ಮಣ್ಣು ಮುಚ್ಚಲಾಯಿತು. ಇನ್ನು ಮದ್ಯದ ಕವರ್, ಪೌಚುಗಳನ್ನು ಬೆಂಕಿ ಹಾಕಿ ಸುಟ್ಟು ನಾಶ ಮಾಡಲಾಯಿತು ಎಂದು ಅಬಕಾರಿ ಅಧಿಕಾರಿಗಳು ತಿಳಿಸಿದರು.

## 'ನಿನಾಸಂ ತಿರುಗಾಟದ' ನಾಟಕ ಪ್ರದರ್ಶನ
## ಪ್ರೇಕ್ಷಕರ ಚಪ್ಪಾಳೆ ಕಲಾವಿದನ ಎಲ್ಲ ನೋವು ಮರೆಯಿಸುತ್ತದೆ: ಡಾ. ಅರವಿಂದ ಕುಲಕರ್ಣಿ

ಬೆಳಗಾವಿ: ನಾಟಕ ಅಭಿರುಚಿಯಿದ್ದವನಿಗೆ ಸಾಕಷ್ಟು ಕಷ್ಟಗಳಿರಲಿ, ಅನಾರೋಗ್ಯ ತೊಂದರೆಗಳನ್ನು ಅನುಭವಿಸುತ್ತಿದ್ದರೂ ನಾಟಕದ ವಿಷಯ ಬಂದಾಗ ಕಲಾವಿದ ಕಷ್ಟ, ಅನಾರೋಗ್ಯವನ್ನು ಮರೆಯುತ್ತಾನೆ. ಉತ್ಸಾಹದಿಂದ ಮುಂದೆ ಬರುತ್ತಾನೆ. ಪ್ರೇಕ್ಷಕರ ಚಪ್ಪಾಳೆ ಕಲಾವಿದನ ಎಲ್ಲ ನೋವುಗಳನ್ನು ಮರೆಯಿಸುತ್ತದೆ ಎಂದು ರಂಗಸಂಪದದ ಅಧ್ಯಕ್ಷ, ನಟ, ನಿರ್ದೇಶಕ ಡಾ. ಅರವಿಂದ ಕುಲಕರ್ಣಿ ಇಂದಿಲ್ಲಿ ಹೇಳಿದರು.

ನಗರದ ರಂಗಸಂಪದವರು ತಿಲಕಚೌಕ ಹತ್ತಿರವಿರುವ ಲೋಕಮಾನ್ಯ ರಂಗ ಮಂದಿರ ದಲ್ಲಿ ಹಮ್ಮಿಕೊಂಡಿದ್ದ ನಿನಾಸಂ ತಂಡದವರ 'ನಿನಾಸಂ ತಿರುಗಾಟ' ಕಾರ್ಯಕ್ರಮ ಹಮ್ಮಿ ಕೊಂಡಿದ್ದರು.




ಎರಡನೆ ದಿನವಾದ ಇಂದು "ಆ ಲಯ ಈ ಲಯ" ನಾಟಕದ ಪ್ರದರ್ಶನಗೊಂಡಿತು. ಇಂಗ್ಲೀಷ ಮೂಲದ ಈ ನಾಟಕವನ್ನು ಕನ್ನಡಕ್ಕೆ ನಟರಾಜ ಹೊನ್ನವಳ್ಳಿ ಅನುವಾದಿಸಿದ್ದು ಶ್ರೀಮತಿ ಶ್ವೇತಾರಾಣಿ ಹೆಚ್. ಕೆ. ನಿರ್ದೇಶಿಸಿದ್ದರು. ಪ್ರಾಸ್ತಾವಿಕ ನುಡಿಗಳನ್ನಾಡಿದ ಡಾ. ಕುಲಕರ್ಣಿಯವರು ಮೇಲಿನಂತೆ ಹೇಳಿದರು.

ಡಾ. ಅರವಿಂದ ಕುಲಕರ್ಣಿಯವರು ಮುಂದೆ ಮಾತನಾಡುತ್ತ ಇದೊಂದು ವಿಭಿನ್ನವಾದ ನಾಟಕ. ಈ ನಾಟಕದ ಕಥಾವಸ್ತು ಅಂದು, ಇಂದು, ಎಂದೆಂದೂ ಪ್ರಸ್ತುತವಾದ ವಿಷಯ. ಎಲ್ಲರ' ಅಭಿನಯ ನುರಿತ ಕಲಾವಿದರನ್ನು ಮೀರಿಸುವಂತಿತ್ತು. ನಿನಾಸಂ ಸಾಕಷ್ಟು ತರಬೇತಿ ಕೊಟ್ಟಿರುವತ್ತದೆ. ಇಲ್ಲಿ ಆಯ್ಕೆಯಾಗುವದೇ ಕಷ್ಟದ ಕೆಲಸ. ನೀವೆಲ್ಲ ನೀನಾಸಂ ಕಲಾವಿದರೆಂದು ಹೇಳಿಕೊಳ್ಳುವುದೇ ಒಂದು ಅಭಿಮಾನದ ಸಂಗತಿ ಎಂದು ಹೇಳಿದರು.

ಪ್ರೇಕ್ಷಕರಾಗಿ ಬಾಳುಗೌಡ ದೊಡಮನಿ ಹಾಗೂ ಬಿ.ಎಸ್. ನಿಂಬಾಳ ಮಾತನಾಡಿ ಎಲ್ಲರೂ ಯುವ ಕಲಾವಿದರಿದ್ದು ಬೆಳೆದುಕೊಳ್ಳಲು ಇವರಿಗಿನ್ನು ಸಾಕಷ್ಟು ಅವಕಾಶವಿದೆ. ಎತ್ತರೆತ್ತರಕ್ಕೆ ಇವರೆಲ್ಲ ಬೆಳೆಯಲಿ. ಈ ನಾಟಕದಲ್ಲಿ ತಮ್ಮ ಅತ್ಯುತ್ತಮ ಅಭಿನಯದಿಂದ ಪ್ರೇಕ್ಷಕರ ಮನಸ್ಸನ್ನು ಗೆದ್ದಿದ್ದಾರೆ ಎಂದು ಹೇಳಿದರು.

ರಾಮಚಂದ್ರ ಕಟ್ಟಿ, ಗುರುನಾಥ ಕುಲಕರ್ಣಿ, ಚಿದಾನಂದ ವಾಳಕೆ, ಪದ್ಮಾ ಕುಲಕರ್ಣಿ, ಪ್ರಸಾದ ಕಾರಜೋಳ, ಯೋಗೇಶ ದೇಶಪಾಂಡೆ, ದಿಲೀಪ ಮಳಗಿ, ಪ್ರಹ್ಲಾದ ರಾಜಪುರೋಹಿತ ಮುಂತಾದವರು ಸಂಸ್ಥೆಯ ಸದಸ್ಯರು ಉಪಸ್ಥಿತರಿದ್ದರು.

## ಬೆಳಗಾವಿ ಭಾರತೀಯ ಜನತಾ ಪಾರ್ಟಿ ವತಿಯಿಂದ ಬೃಹತ್ ಪ್ರತಿಭಟನೆ
## ಜಿಲ್ಲಾಧಿಕಾರಿಗಳ ಮೂಲಕ ಸನ್ಮಾನ್ಯ ರಾಷ್ಟ್ರಪತಿಗಳಿಗೆ ಮನವಿ

ಬೆಳಗಾವಿ: ಭ್ರಷ್ಟಾಚಾರದಲ್ಲಿ ಮುಳಗಿರುವ ಜಾರಖಂಡ ರಾಜ್ಯದ ಕಾಂಗ್ರೇಸ ರಾಜ್ಯಸಭಾ ಸದಸ್ಯ ಧೀರಜ ಸಾಹು ಅವರನ್ನು ತಕ್ಷಣ ರಾಜ್ಯಸಭಾ ಸದಸ್ಯತ್ವದಿಂದ ವಜಾಗೊಳಿಸಿ ಅವರನ್ನು ಬಂದಿಸುವಂತೆ ಭಾರತೀಯ ಜನತಾ ಪಾರ್ಟಿ (ಬಿಜೆಪಿ) ಬೆಳಗಾವಿ ಜಿಲ್ಲಾ ವತಿಯಿಂದ ಬೆಳಗಾವಿ ಜಿಲ್ಲಾಧಿಕಾರಿಗಳ ಮೂಲಕ ಸನ್ಮಾನ್ಯ ರಾಷ್ಟ್ರಪತಿಗಳಿಗೆ ಬೃಹತ್ ಪ್ರತಿಭಟನೆ ಮೂಲಕ ಮನವಿ ಸಲ್ಲಿಸಲಾಯಿತು.



ಬೆಳಗಾವಿ ಗ್ರಾಮಾಂತರ ಜಿಲ್ಲಾಧ್ಯಕ್ಷರು ಮತ್ತು ಮಾಜಿ ಶಾಸಕರಾದ ಶ್ರೀ. ಸಂಜಯ ಪಾಟೀಲ, ಬೆಳಗಾವಿ ಮಹಾನಗರ ಅಧ್ಯಕ್ಷರು ಮತ್ತು ಮಾಜಿ ಶಾಸಕರಾದ ಶ್ರೀ ಅನಿಲ ಬೆನಕೆ, ರಾಜ್ಯ ವಕ್ತಾರರಾದ ಶ್ರೀ ಎಂ. ಬಿ. ಜಿರಳಿ, ರಾಜ್ಯ ಪದಾಧಿಕಾರಿ ಕು. ಉಜ್ವಲಾ ಬಡವಣಾಚೆ ಸೇರಿದಂತೆ ಬಿಜೆಪಿ ಬೆಳಗಾವಿ ಮಹಾನಗರ ಮತ್ತು ಗ್ರಾಮಾಂತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಇಂದು ರಾಜ್ಯ ಜಾಗೃತಿ ಸಂಘ ಉದ್ಘಾಟನೆ

ಬೆಳಗಾವಿ: ಜೈನ ಸಮಾಜದ ಹಿತರಕ್ಷಣೆಗಾಗಿ ಮತ್ತು ಧರ್ಮ ಪ್ರಭಾವನೆ ಹಾಗೂ ಸಾಮಾಜಿಕ ಕಾರ್ಯಗಳನ್ನು ನೆರವೆರಿಸುವ ಉದ್ದೇಶದಿಂದ ರಾಜ್ಯ ಜೈನ ಜಾಗೃತಿ ಸಂಘವನ್ನು ಸ್ಥಾಪಿಸಲಾಗಿದ್ದು, ಈ ಸಂಘದ ಉದ್ಘಾಟನೆ ಇದೆ ಡಿಸೆಂಬರ 13 ರಂದು ಮಧ್ಯಾಹ್ನ 12 ಗಂಟೆಗೆ ಹಲಗಾ ಗ್ರಾಮದಲ್ಲಿರುವ ಶ್ರೀ. 108 ಬಾಲಾಚಾರ್ಯ ಸಿದ್ದಸೇನ ಮುನಿ ಮಹಾರಾಜ ಆಧ್ಯಾತ್ಮಿಕ ಅನುಸಂಧಾನ ಫೌಂಡೇಶನ ಇಲ್ಲಿ ನಡೆಯಲಿದೆ.

ಈ ಉದ್ಘಾಟನಾ ಸಮಾರಂಭದಲ್ಲಿ ವಿವಿಧ ಸ್ವಾಮಿಜಿಗಳು ಸಾನಿಧ್ಯ ವಹಿಸಲಿದ್ದು, ರಾಝಯ್ ಸಚಿವ ಸಂಪುಟದ ಸಚಿವುರ ಹಾಗೂ ಇನ್ನಿತರ ಗಣ್ಯರು ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ . ಈ ಕಾರ್ಯಕ್ರಮಕ್ಕೆ ಜೈನ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿರಬೇಕೆಂದು ರಾಜ್ಯ ಜೈನ ಜಾಗೃತಿ ಸಂಘದ ಅಧ್ಯಕ್ಷ ಅಮೃತ ಗಣೀ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಚಿಕ್ಕೋಡಿ ಜಿಲ್ಲೆ ಘೋಷಣೆಗೆ ಗಜು ಧರನಾಯಿಕ ಆಗ್ರಹ



ಬೆಳಗಾವಿ: ಆಡಳಿತ ಸುಗಮದ ದೃಷ್ಟಿಯಿಂದ ಚಿಕ್ಕೋಡಿಯನ್ನು ಜಿಲ್ಲೆಯನ್ನಾಗಿ ಘೋಷಿಸಬೇಕೆಂದು ಯುವ ಕಾಂಗ್ರೆಸ್ ಧುರೀಣ ಗಜು ಧರನಾಯಿಕ ಸರಕಾರವನ್ನು ಆಗ್ರಹಿಸಿದ್ದಾರೆ.

ಆಡಳಿತದ ಸುಗಮತೆಗೆ ಹಾಗೂ ಚಿಕ್ಕೋಡಿ, ರಾಯಬಾಗ, ಅಥಣಿ ಭಾಗದ ಜನತೆಗೆ ಅನುಕೂಲ ದೃಷ್ಟಿಯಿಂದ ಚಿಕ್ಕೋಡಿಗೆ ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಬೇಕೆಂದು ಅವರು ಆಗ್ರಹಿಸಿದ್ದಾರೆ.

ಈ ಭಾಗದ ಜನರು ಜಿಲ್ಲಾ ಕೇಂದ್ರಕ್ಕೆ ಬಂದು ತಮ್ಮ ಕೆಲಸ ಮಾಡಿಕೊಂಡು ಹೋಗಬೇಕಾದರೆ ಒಂದು ದಿನ ಬೇಕಾಗುತ್ತದೆ. ಅಧಿಕಾರಿಗಳು ಸಿಗದಿದ್ದರೆ ಮತ್ತೊಂದು ದಿನ ಬರಬೇಕಾಗುತ್ತದೆ. ಇದು ಜನಸಾಮಾನ್ಯರಿಗೆ ಹೊರೆ ಆಗುತ್ತದೆ. ಚಿಕ್ಕೋಡಿ ಜಿಲ್ಲೆ ಆಗುವುದರಿಂದ ಈ ಭಾಗದ ಜನತೆಗೆ ತುಂಬಾ ಅನುಕೂಲ ಆಗುತ್ತದೆ ಎಂದು ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಶಾಲೆಗಳ ಬೇಡಿಕೆ ಈಡೇರಿಕೆಗೆ ಹೋರಾಟ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ರುಪ್ಸಾ ಕರ್ನಾಟಕದಿಂದ ಖಾಸಗಿ ಅನುದಾನ ರಹಿತ ಶಾಲೆಗಳ ಸಂಘದ ವತಿಯಿಂದ ಸುವರ್ಣಸೌಧದ ಸಮೀಪ ಸುವರ್ಣಾ ಗಾರ್ಡನ್ ಬಳಿ ಸೋಮವಾರ ಪ್ರತಿಭಾನೆ ನಡೆಸಲಾಯಿತು.

ಪ್ರತಿಬಟನೆಯಲ್ಲಿ ರಾಜ್ಯ ಪ್ರದಾನ ಕಾರ್ಯದರ್ಶಿ ಶಶಿಧರ ದಿಂಡೂರ ಮಾತನಾಡಿ, 1995ರ ನಂತರ ಕನ್ನಡ ಮಾಧ್ಯಮ ಎಲ್ಲ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಖಾಸಗಿ ಶಾಲೆಗಳಲ್ಲಿ ಶೇ.25 ಆರ್ಟಿಇ ಮಕ್ಕಳ ದಾಖಲಾತಿ ಮರು ಸ್ಥಾಪಿಸಬೇಕು, ಸರ್ಕಾರದಿಂದ ಪ್ರತಿ ಮಗುವಿಗೆ ನೀಡುವ 16 ಸಾವಿರ ವೆಚ್ಚವನ್ನು 35 ಸಾವಿರ ರೂ.ಗಳಿಗೆ ಏರಿಸಬೇಕು.

ಖಾಸಗಿ ಶಾಲೆಗಳ ನವೀಕರಣ ವೇಳೆ ಅಗ್ನಿ ಶಾಮಕ ರಕ್ಷಣೆ ಮತ್ತು ಕಟ್ಟಡ ಭದ್ರತಾ ಪ್ರಮಾಣ ಪತ್ರಗಳಿಗೆ ರಿಯಾಯಿತಿ ನೀಡಬೇಕು. ಖಾಸಗಿ ಅನುದಾನ ರಹಿತ ಮಾನ್ಯತೆ ಪಡೆದ ಶಾಲೆಗಳ ನವೀಕರಣವನ್ನು 10 ವರ್ಷಗಳ ಅವಧಿಗೆ ನಿಗದಿಪಡಿಸಬೇಕೆಂದು ಒತ್ತಾಯಿಸಿದರು.



ಖಾಸಗಿ ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣ ಹೈಕೋರ್ಟ್ ಆದೇಡಶದಂತೆ ಕನಿಷ್ಠ 10 ವರ್ಷಗಳಿಗೆ ನೀಡಬೇಕು, ಶೈಕ್ಷನಿಕ ವರ್ಷ 2017–18ರ ಮುಂಚೆ ಪ್ರಾರಂಭವಾದ ಶಿಕ್ಷಣ ಸಂಸ್ಥೆಗಳಿಗೆ ಫೈಯರ್ ಸೇಫ್ಟಿ, ಬಿಲ್ಡಿಂಗ್ ಸೇಫ್ಟಿ, ಭಯ ಪರಿವರ್ತನಾ ನಿಯಮದಿಂದ ಕೋರ್ಟ್ ಆದೇಶದಂತೆ ವಿನಾಯತಿ ನೀಡುವುದು, ರಾಷ್ಟ್ರೀಯ ಶಿಕ್ಷಣ ನೀತಿ 2020 ಕರ್ನಾಟಕದಲ್ಲಿ ಅನುಷ್ಠಾನವಾಗಬೇಕು ಎಂದು ಒತ್ತಾಯಿಸಿದರು.

ಪ್ರತಿಬಟನೆಯಲ್ಲಿ ಸಂಘದ ರಾಜ್ಯಾಧ್ಯಕ್ಷ ಡಾ. ಹಾಲನೂರು ಲೇಪಾಕ್ಷ, ರೂಪ್ಸಾ ತಾಲೂಕು ಅಧ್ಯಕ್ಷ ನಾಗರಾಜ ಹಿರೇಮಠ, ಕಾರ್ಯದರ್ಶಿ ನಾಗರಡ್ಡಿ ದೇವಾಪುರ, ರಾಜ್ಯ ನಿರ್ದೇಶಕ ನಾಗನಗೌಡ, ಮಹ್ಮದ್ ಖಾದರಪಾಶಾ, ಸಂಗಯ್ಯ ಮೂಲಿಮಠ ಸೇರಿದಂತೆ ಇತರರು ಇದ್ದರು.

ಸಂಪುಟ: 4 ಸಂಚಿಕೆ: 262 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089